ಸಂಪುಟ: 21, ಸಂಚಿಕೆ: 300, ಪುಟಗಳು: 8, ಬುಧವಾರ, 7 ಆಗಸ್ಟ್ 2024 RNI NO. KARKAN/2002/08054
epaper: www.sanjemugilu.com



ವೇಣು ಸಾರಥ್ಯದಲ್ಲಿ...

ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ ₹3

ದಶಪ್ರಮತಿ ಮುದ್ರಣಾಲಯ
dashapramathi mudranalaya
PRE-PRESS PRINTERS
Contact: +91 9483589085 | e-mail: dashapramathimudranalaya@gmail.com
We Undertake Printing of Newspapers | Tabloids | Magazines

### ಸುಭಾಷಿತ

ಸದ್ವರ್ತನೆ ಮತ್ತು ವಿನಯದ ಮಾತುಗಳು ಎಂಥದೇ ಕಠಿಣ ಪರಿಸ್ಥಿಯಲ್ಲೂ ನಮ್ಮನ್ನು ಪಾರು ಮಾಡಬಲ್ಲವು.
। ಸರ್ ಜಾನ್ ವಾಂಬರ್ಗ್

### ಪಂಚಾಂಗ

(ಬುಧವಾರ 7, ಆಗಸ್ಟ್-2024)

- ಶ್ರೀ ಕ್ರೋಧಿನಾಮ ಸಂವತ್ಸರ,
- ದಕ್ಷಿಣಾಯನ, ವರ್ಷ ಋತು,
- ಶ್ರಾವಣ ಮಾಸ, ಶುಕ್ಲ ಪಕ್ಷ,
- ಬುಧವಾರ, ತೃತೀಯ ತಿಥಿ, ಪುಬ್ಬ ನಕ್ಷತ್ರ
- ರಾಹುಕಾಲ : 12:28 ರಿಂದ 2:03
- ಗುಳಿಕಕಾಲ : 10:54 ರಿಂದ 12:28
- ಯಮಗಂಡಕಾಲ : 7:46 ರಿಂದ 9:20

## ಸಂಕ್ಷಿಪ್ತ ಸುದ್ದಿ

### ಎಟಿಎಂ ಕಾರ್ಡ್ ವಂಚನೆ: ಮೂವರ ಬಂಧನ, 69 ಕಾರ್ಡ್‌ಗಳು ವಶ



**ಬೆಂಗಳೂರು:** ನಗರದಲ್ಲಿ ನಡೆದ ಪ್ರತ್ಯೇಕ ಘಟನೆಗಳಲ್ಲಿ ಎಟಿಎಂ ಬಳಕೆದಾರರಿಗೆ ವಂಚನೆ ಮಾಡುತ್ತಿದ್ದ ಮೂವರನ್ನು ಬೆಂಗಳೂರು ಪೊಲೀಸರು ಬಂಧಿಸಿದ್ದಾರೆ. ಮೊದಲ ಪ್ರಕರಣದಲ್ಲಿ, ಎಟಿಎಂ ಬಳಕೆದಾರರನ್ನು ವಂಚಿಸಲು ಬೆಂಗಳೂರಿಗೆ ಬಂದಿದ್ದ ಶಿವಮೊಗ್ಗ ನಿವಾಸಿ ''ದಡಿಯಾ ದಿಲೀಪ್'' ಎಂದು ಕರೆಯಲ್ಪಡುವ ಸಾಗರ್ ಅಲಿಯಾಸ್ ದಿಲೀಪ್ ನನ್ನು ಬೇಗೂರು ಪೊಲೀಸರು ಬಂಧಿಸಿದ್ದಾರೆ. ದಿಲೀಪ್ ಪ್ರಸ್ತುತ ನಗರದೊಳಗೆ ಕನಿಷ್ಠ ಮೂರು ಪ್ರಕರಣಗಳಲ್ಲಿ ಆರೋಪ ಎದುರಿಸುತ್ತಿದ್ದಾನೆ.

ಪುಟ 2

### ಪತ್ನಿಯನ್ನು ಕೊಂದು ಫೇಸ್‌ಬುಕ್ ಲೈವ್ ಮಾಡಿದ್ದ ಕ್ರೂರ ಪತಿ



**ಬೆಂಗಳೂರು:** ಪತ್ನಿಯನ್ನು ಚಾಕುವಿನಿಂದ ಇರಿದು ಹತ್ಯೆ ಮಾಡಿ ಬಳಿಕ ಫೇಸ್‌ಬುಕ್ ಲೈವ್ ಮೂಲಕ ಹತ್ಯೆ ಬಗ್ಗೆ ಪತಿ ವಿವರಿಸಿದ್ದ ಪ್ರಕರಣಕ್ಕೆ ಸಂಬಂಧಿಸಿ ಕೊಲೆ ನಡೆದ ಐದು ದಿನದ ಬಳಿಕ ಕೇಸ್ ನಲ್ಲಿ ಸ್ಫೋಟಕ ಟ್ವಿಸ್ಟ್ ಸಿಕ್ಕಿದೆ. ಪೊಲೀಸರಿಂದ ತಪ್ಪಿಸಿಕೊಳ್ಳುವ ಆತುರದಲ್ಲಿ ಕೋಲಾರದಲ್ಲಿ ಕೊಲೆ ಆರೋಪಿ ತಬರೇಜ್ ಪಾಷಾ ಮೃತಪಟ್ಟಿದ್ದಾನೆ. ಪೊಲೀಸರಿಂದ ತಪ್ಪಿಸಿಕೊಳ್ಳುವಾಗ 12ಅಡಿ ಎತ್ತರದಿಂದ ಜಿಗಿದು ಮೃತಪಟ್ಟಿದ್ದಾನೆ. ಕೌಟುಂಬಿಕ ವಿಚಾರಕ್ಕೆ ಸೈಯಿದಾ ಫಾಜೀಲ್ ಫಾತೀಮಾ(34) ತನ್ನ ಪತಿ ತಬರೇಜ್ ಪಾಷಾ ಜೊತೆ ಜಗಳವಾಡಿಕೊಂಡು ತವರು ಮನೆ ಸೇರಿದ್ದಳು.

ಪುಟ 2

## ಹಂಗಾಮಿ ಪ್ರಧಾನಿಯಾಗಿ ಬಾಂಗ್ಲಾದೇಶವನ್ನು ಮುನ್ನಡೆಸಲಿದ್ದಾರೆ ಮೊಹಮ್ಮದ್ ಯೂನಸ್

**ಬಾಂಗ್ಲಾದೇಶ:** ನೊಬೆಲ್ ಶಾಂತಿ ಪ್ರಶಸ್ತಿ ಪುರಸ್ಕೃತ ಮೊಹಮ್ಮದ್ ಯೂನಸ್ ಬಾಂಗ್ಲಾದೇಶದ ಹಂಗಾಮಿ ಪ್ರಧಾನಿಯಾಗಿ ದೇಶವನ್ನು ಮುನ್ನಡೆಸಲಿದ್ದಾರೆ. ಆರ್ಥಿಕ ಸಂಕಷ್ಟದಲ್ಲಿ ಸಿಲುಕಿರುವ ಬಾಂಗ್ಲಾದೇಶದಲ್ಲಿ ಇದೀಗ ಮೀಸಲು ವಿವಾದ ಭುಗಿಲೆದ್ದಿದ್ದು, ಹಿಂಸಾಚಾರದ ಹಿನ್ನೆಲೆಯಲ್ಲಿ 5 ಬಾರಿಯ ಪ್ರಧಾನಿ ಶೇಖ್ ಹಸೀನಾ ಪ್ರಧಾನಿ ಸ್ಥಾನಕ್ಕೆ ರಾಜೀನಾಮೆ ನೀಡಿ ಭಾರತಕ್ಕೆ ಪಲಾಯನ ಮಾಡಿದ್ದಾರೆ.

ಈ ಮೊದಲು ಹಸೀನಾ ಯಾರನ್ನು ರಕ್ತದಾಹಿ ಎಂದು ಕರೆದಿದ್ದರೋ ಅದೇ ಯೂನಸ್ ಗೆ ಬಾಂಗ್ಲಾ ಸಾರಥ್ಯ ನೀಡಬೇಕೆಂಬ ಕೂಗು ಕೇಳಿಬಂದಿದೆ. ರಾಷ್ಟ್ರಪತಿ ಮೊಹಮ್ಮದ್ ಶಹಾಬುದ್ದೀನ್ ಮಂಗಳವಾರ ಬಾಂಗ್ಲಾ ಸಂಸತ್ತನ್ನು ವಿಸರ್ಜಿಸಿದ್ದಾರೆ. ಬಳಿಕ ರಕ್ಷಣ ಪಡೆಯ ಮೂರು ವಿಭಾಗಗಳ ಮುಖ್ಯಸ್ಥರು ಹಾಗೂ ವಿದ್ಯಾರ್ಥಿ ಚಳವಳಿಯ



13 ಸದಸ್ಯರೊಂದಿಗೆ ಮಧ್ಯಂತರ ಸರ್ಕಾರ ರಚನೆ ಕುರಿತು ಚರ್ಚೆ ನಡೆಸಿದ್ದಾರೆ. ಮೊಹಮ್ಮದ್ ಯೂನುಸ್ ಬಾಂಗ್ಲಾದೇಶದಲ್ಲಿ ಗ್ರಾಮೀಣ ಬ್ಯಾಂಕ್ ಸ್ಥಾಪಿಸಿ ಸಣ್ಣ ಉದ್ಯಮಗಳಿಗೆ ಬೆಂಬಲ ನೀಡಿ ಆರ್ಥಿಕ ಅಭಿವೃದ್ಧಿಯಲ್ಲಿ ಪ್ರಮುಖ ಪಾತ್ರವಹಿಸಿದ್ದವರು.

ಹಸೀನಾ ಅವರು ತಮ್ಮ ತಂಗಿ ಶೇಖ್ ರೆಹಾನಾ ಅವರೊಂದಿಗೆ ಸೇನಾ ವಿಮಾನದ ಮೂಲಕ ದೇಶ ತೊರೆದ ಸುದ್ದಿ ಬಿತ್ತರವಾದ ಕೂಡಲೇ ಸಾವಿರಾರು ಸಂಖ್ಯೆಯ ಪ್ರತಿಭಟನಕಾರರು ಪ್ರಧಾನಿ ಅವರ ಅಧಿಕೃತ ನಿವಾಸಕ್ಕೆ 'ಗಾನಾಭವನ್'ಗೆ ನುಗ್ಗಿ ಲೂಟಿ ಮಾಡಿದರು. ಮನೆಯ ಆವರಣದಲ್ಲಿದ್ದ ಶೇಖ್ ಮುಜಿಬುರ್ ರೆಹಮಾನ್ ಅವರ ಪ್ರತಿಮೆಯನ್ನು ಧ್ವಂಸಗೊಳಿಸಿದರು.

ಬಾಂಗ್ಲಾದೇಶದ ಮೀಸಲು ನಿಯಮವನ್ನು ವಿರೋಧಿಸಿ ಮತ್ತು ಪ್ರಧಾನಿ ಶೇಖ್ ಹಸೀನಾ ಅವರ ರಾಜೀನಾಮೆಗೆ ಆಗ್ರಹಿಸಿ ದೇಶದಾದ್ಯಂತ ಸೋಮವಾರವು ಪ್ರತಿಭಟನೆ ಮುಂದುವರಿದಿದ್ದು, 56 ಜನರು ಮೃತಪಟ್ಟಿದ್ದಾರೆ. ಇದರಿಂದ ಎರಡು ದಿನಗಳಿಂದ ನಡೆಯುತ್ತಿರುವ ಹಿಂಸಾಚಾರದಲ್ಲಿ ಮೃತಪಟ್ಟವರ ಸಂಖ್ಯೆ 156ಕ್ಕೆ ಏರಿಕೆಯಾಗಿದೆ.

ಪುಟ 2

## ಮಂಗಳೂರು ಮಹಾನಗರ ಪಾಲಿಕೆಯಿಂದ ಟೈಗರ್ ಆಪರೇಷನ್!

**ಮಂಗಳೂರು:** ಕಡಲನಗರಿ ಮಂಗಳೂರಿನಲ್ಲಿ ಮಹಾನಗರ ಪಾಲಿಕೆ ಬೀದಿಬದಿ ವ್ಯಾಪಾರಸ್ಥರ ಬದುಕಿನ ಬಂಡಿಯನ್ನು ಕ್ಷಣ ಮಾತ್ರದಲ್ಲಿ ನೆಲಸಮಗೊಳಿಸಿದೆ. 'ಟೈಗರ್ ಆಪರೇಷನ್' ಹೆಸರಿನಲ್ಲಿ ಬುಲ್ಡೋಜರ್ ಗಳ ಘರ್ಜನೆಗೆ ಬಡ ವ್ಯಾಪಾರಿಗಳ ಬದುಕು ಬರಿದಾಗಿದೆ. ಪರ ವಿರೋಧದ ಚರ್ಚೆಯ ನಡುವೆ ಮಹಾನಗರ ಪಾಲಿಕೆ ಮೆಗಾ ಆಪರೇಷನ್ ನಡೆಸಿದೆ. ಸತತ ಐದು ದಿನಗಳ ಬುಲ್ಡೋಜರ್ ಘರ್ಜನೆಯಿಂದ ನೂರಾರು ಬೀದಿ ಬದಿ ವ್ಯಾಪಾರಸ್ಥರು ಪತರುಗುಟ್ಟಿದ್ದಾರೆ. ಜನರ ಆರೋಗ್ಯ, ಸುಗಮ ಸಂಚಾರ, ಸ್ವಚ್ಛತೆಯನ್ನೇ ಆದ್ಯತೆಯನ್ನಾಗಿ ಮಾಡಿ ಮಂಗಳೂರು ಮಹಾನಗರ ಪಾಲಿಕೆ ಈ ಕಾರ್ಯಾಚರಣೆ ನಡೆಸಿದೆ. ಸಾಲು ಸಾಲು ಪ್ರತಿಭಟನೆ ಆಕ್ರೋಶಗಳು ವ್ಯಕ್ತವಾದರೂ ಮಹಾನಗರ



ಪಾಲಿಕೆ ತನ್ನ ಪಟ್ಟು ಬಿಡದೆ ಕಾರ್ಯಾಚರಣೆನ್ನ ಯಶಸ್ವಿಯಾಗಿ ನಡೆಸುತ್ತಿದೆ.

**ಕಾರ್ಯಾಚರಣೆಗೆ ಕಾರಣವೇನು:** ಟೈಗರ್ ಕಾರ್ಯಾಚರಣೆ ಮೂಲಕ ನಗರದ ಅಲ್ಲಲ್ಲಿ ತಲೆಎತ್ತಿರುವ ಫಾಸ್ಟ್ ಫುಡ್, ಜ್ಯೂಸ್, ಪಾನಿ ಪುರಿ, ಆಮ್ಲೆಟ್ ಅಂಗಡಿಗಳನ್ನು ತೆರವು ಮಾಡಲಾಗಿದೆ.

ಪುಟ 2

# ನದಿಗೆ ಬಿದ್ದ ಕೋಡಿಭಾಗ್ ಸೇತುವೆ

## ಲಾರಿ ಚಾಲಕ, ಪೊಲೀಸ್ ಸಿಬ್ಬಂದಿಯನ್ನು ರಕ್ಷಿಸಿದ ಸ್ಥಳೀಯರು

**ಕಾರವಾರ:** ಉತ್ತರ ಕನ್ನಡ ಜಿಲ್ಲೆಯ ಕಾರವಾರ ಬಳಿ ರಾಷ್ಟ್ರೀಯ ಹೆದ್ದಾರಿ 66 ರ ಕೋಡಿಭಾಗ್ ಸೇತುವೆ ಕಾಳಿ ನದಿಗೆ ಬಿದ್ದು ತಮಿಳುನಾಡು ಮೂಲದ ಲಾರಿ ನದಿಗೆ ಉರುಳಿದೆ. ಅದೃಷ್ಟವಶಾತ್, ಲಾರಿ ಚಾಲಕನನ್ನು ಪೊಲೀಸ್ ಸಿಬ್ಬಂದಿ ಹಾಗೂ ಸ್ಥಳೀಯ ಮೀನುಗಾರರು ರಕ್ಷಣೆ ಮಾಡಿದ್ದಾರೆ.

ಘಟನಾ ಸ್ಥಳಕ್ಕೆ ಉತ್ತರ ಕನ್ನಡ ಎಸ್ ಪಿ ನಾರಾಯಣ ಭೇಟಿ ನೀಡಿದ್ದು, ಘಟನೆಯ ಬಗ್ಗೆ ಮಾಹಿತಿ ನೀಡಿದ್ದಾರೆ. ಇದುವರೆಗೂ ಬಂದ ಮಾಹಿತಿ ಪ್ರಕಾರ ಒಂದೇ ಲಾರಿ ಬಿದ್ದಿದೆ. ಕಾರ್ಯಾಚರಣೆ ಮುಂದುವರೆದಿದೆ. ಇದುವರೆಗೂ ಬೇರೆ ಮಾಹಿತಿ ಸಿಕ್ಕಿಲ್ಲ ಎಂದು ಅವರು ತಿಳಿಸಿದ್ದಾರೆ.

ಅಬ್ಬರದ ಮಳೆ, ತುಂಬಿ ಹರಿಯುತ್ತಿರುವ ಕಾಳಿ ನದಿಯ ಸವಾಲಿನ ಮಧ್ಯೆಯೂ ಕರವಾಳಿ ಕಾವಲು ಪಡೆ, ಎಸ್ ಡಿಆರ್ ಎಫ್ ಮತ್ತು ಎನ್ ಡಿಆರ್ ಎಫ್ ಕಾರ್ಯಾಚರಣೆ ಮುಂದುವರೆದಿದೆ ಎಂದು ನಾರಾಯಣ ತಿಳಿಸಿದ್ದಾರೆ. ಅಬ್ಬರದ ಮಳೆಯಿಂದಾಗಿ ಕಾಳಿ ನದಿ ಅಪಾಯದ ಮಟ್ಟ ಮೀರಿ ಹರಿಯುತ್ತಿದೆ.

ಲಾರಿ ಚಾಲಕನನ್ನು ರಕ್ಷಣೆ ಮಾಡಿ ಆಸ್ಪತ್ರೆಗೆ ದಾಖಲಿಸಿದ್ದೇವೆ. ಮಧ್ಯರಾತ್ರಿ ಏಕಾಏಕಿ ಕೋಡಿಭಾಗ್ ಸೇತುವೆ ಕುಸಿದು ಬಿದ್ದಿತು. ವಿಚಾರ ತಿಳಿದ ಕೂಡಲೇ ಸ್ಥಳಕ್ಕೆ ಪೊಲೀಸರು ಭೇಟಿ ನೀಡಿದ್ದಾರೆ. ಲಾರಿ ಚಾಲಕ ಬಾಲಮುರುಗನ್ ನನ್ನು ರಕ್ಷಿಸಿ ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ಎಸ್ ಪಿ ನಾರಾಯಣ ತಿಳಿಸಿದ್ದಾರೆ.

ಸೇತುವೆಯಿಂದ ಕಾಳಿ ನದಿಗೆ ಇನ್ನಷ್ಟು ವಾಹನಗಳು ಏನಾದರೂ ಬಿದ್ದಿವೆಯೇ ಎಂಬ ಬಗ್ಗೆ ಶೋಧ ಕಾರ್ಯ ನಡೆಯುತ್ತಿದೆ. ಅಗ್ನಿಶಾಮಕ ದಳ, ಪೊಲೀಸರಿಂದ ಶೋಧ ಕಾರ್ಯ ನಡೆಯುತ್ತಿದೆ ಎಂದು ಉತ್ತರ ಕನ್ನಡ ಎಸ್ ಪಿ ನಾರಾಯಣ ತಿಳಿಸಿದರು.

ಪುಟ 2







### ಶಿರೂರು ಗುಡ್ಡ ಕುಸಿತ

## ಸಮುದ್ರದಲ್ಲಿ ಮೃತದೇಹ ಪತ್ತೆ

**ಉತ್ತರ ಕನ್ನಡ:** ಅಂಕೋಲಾ ತಾಲೂಕಿನ ಶಿರೂರು ಗ್ರಾಮದ ಬಳಿಯ ರಾಷ್ಟ್ರೀಯ ಹೆದ್ದಾರಿ 66ರಲ್ಲಿ ಗುಡ್ಡ ಕುಸಿದು 11 ಜನ ಮೃತಪಟ್ಟಿದ್ದಾರೆ. ಎಂಟು ಮಂದಿ ಮೃತದೇಹ ಪತ್ತೆಯಾಗಿದ್ದು, ಇನ್ನೂ ಮೂವರಿಗಾಗಿ ಶೋಧ ಕಾರ್ಯಾಚರಣೆ ನಡೆಯುತ್ತಿದೆ. ಇದೀಗ ಶಿರೂರು ಗುಡ್ಡ ಕುಸಿತದಿಂದ 25 ಕಿಮೀ ದೂರದಲ್ಲಿನ ಹೊನ್ನಾವರ ಸಮುದ್ರದಲ್ಲಿ ಕೊಳೆತ ಸ್ಥಿತಿಯಲ್ಲಿ ಅಪರಿಚಿತ ಶವ ಪತ್ತೆಯಾಗಿದೆ. ಈ ಶವ ಗಂಗಾವಳಿ ನದಿಯಲ್ಲಿ ಕೊಚ್ಚಿ ಹೋದ ಲಾರಿ ಚಾಲಕ ಅರ್ಜುನ್ (30) ಅವರದ್ದು ಎಂದು ಶಂಕಿಸಲಾಗಿದೆ. ಮೃತದೇಹ ಯಾರದ್ದು ಅಂತ ಇನ್ನೂ ದೃಢವಾಗಿಲ್ಲ.





ಮೃತದೇಹವು ಗುಡ್ಡ ಕುಸಿತದಲ್ಲಿ ಮೃತಪಟ್ಟದವರದ್ದೇ ಅಥವಾ ಅಲ್ಲವೇ ಎಂಬುದನ್ನು ಅಧಿಕಾರಿಗಳು ಇನ್ನೂ ಖಚಿತಪಡಿಸಿಲ್ಲ. ಸದ್ಯ ಕರಾವಳಿ ಪೊಲೀಸರು ಮೃತದೇಹವನ್ನು ದಡಕ್ಕೆ ತಂದು, ಡಿಎನ್ ಎ ಪರೀಕ್ಷೆಗೆ ಕಳುಹಿಸಿದ್ದಾರೆ. ಡಿಎನ್ ಎ ಪರೀಕ್ಷೆಗಾಗಿ ಅರ್ಜುನ್ ಸಹೋದರ ಅಭಿಜಿತ್ ನ ಮಾದರಿಗಳನ್ನು ತೆಗೆದುಕೊಳ್ಳಲಾಗಿದೆ.

ಜುಲೈ 16 ರಂದು ಸಂಭವಿಸಿದ್ದ ಗುಡ್ಡ ಭೂಕುಸಿತದಲ್ಲಿ ಕೇರಳದ ಕೋಝಿಕ್ಕೋಡ್ ಮೂಲದ ಲಾರಿ ಚಾಲಕ ಅರ್ಜುನ್ ನಾಪತ್ತೆಯಾಗಿದ್ದಾರೆ. ಅರ್ಜುನ್ ಲಾರಿ ಸಮೇತ ಗಂಗಾವಳಿ ನದಿಯಲ್ಲಿ ಕೊಚ್ಚಿ ಹೋಗಿರುವ ಸಾಧ್ಯತೆ ಮೇರೆಗೆ ಹುಡುಕಾಟ ನಡೆಸಲಾಗಿತ್ತು. ಸತತ 13 ದಿನಗಳ ಕಾಲ ಹುಡುಕಾಟ ನಡೆಸಿದರೂ ಅರ್ಜುನ್ ಬಗ್ಗೆ ಯಾವುದೇ ಸುಳಿವು ಸಿಕ್ಕಿಲ್ಲ.

ಪುಟ 2

## ಮಣ್ಣೂರು ಗ್ರಾಮದ ಯಲ್ಲಮ್ಮ ದೇವಿ ದೇವಸ್ಥಾನಕ್ಕೆ ಜಲದಿಗ್ಬಂಧನ



**ಕಲಬುರಗಿ:** ಮಹಾರಾಷ್ಟ್ರದ ಉಜ್ಜಿನಿ, ವೀರ ಭಟ್ಕರ್ ಡ್ಯಾಂನಿಂದ ಭೀಮಾ ನದಿಗೆ 1 ಲಕ್ಷ ಕ್ಯೂಸೆಕ್ ಗೂ ಹೆಚ್ಚು ನೀರು ಬಿಡುಗಡೆ ಮಾಡಿರುವುದರಿಂದ ಕಲಬುರಗಿ ಜಿಲ್ಲೆಯ ಅಫಜಲಪುರ ತಾಲೂಕಿನ ಮಣ್ಣೂರು ಗ್ರಾಮದ ಯಲ್ಲಮ್ಮದೇವಿ ದೇಗುಲ ಬಳಿಯ ಸೇತುವೆ ಮುಳುಗಡೆಯಾಗಿದೆ. ಮುಂಜಾಗ್ರತಾ ಕ್ರಮವಾಗಿ ಸದ್ಯ ಯಲ್ಲಮ್ಮದೇವಿ ದರ್ಶನಕ್ಕೆ ನಿರ್ಬಂಧ ಹೇರಲಾಗಿದೆ. ದೇಗುಲದ ಸುತ್ತಮುತ್ತ ಎಲ್ಲಿ ನೋಡಿದರೂ ಜಲರಾಶಿಯೇ ಕಾಣಿಸುತ್ತಿದೆ.

ಮಹಾರಾಷ್ಟ್ರದ ಘಟ್ಟ ಪ್ರದೇಶಗಳಲ್ಲಿ ಭಾರಿ ಮಳೆಯಾಗುತ್ತಿರುವುದರಿಂದ ಅಲ್ಲಿನ ಜಲಾಶಯಗಳಿಂದ ಭೀಮಾ ನದಿಗೆ ನೀರು ಬಿಡಲಾಗುತ್ತಿದೆ. ಹೀಗಾಗಿ ಕರ್ನಾಟಕದ ಭೀಮಾ ನದಿ ತೀರದ ಪ್ರದೇಶಗಳಲ್ಲಿ ಆತಂಕದ ಸನ್ನಿವೇಶ ನಿರ್ಮಾಣ ಸೃಷ್ಟಿಯಾಗಿದೆ.

ಪುಟ 2

### ಪುಣೆಯಲ್ಲಿ ಝಿಕಾ ವೈರಸ್‌ನಿಂದ 4 ಮಂದಿ ಸಾವು

## 66 ಪ್ರಕರಣಗಳು ದೃಢ

**ಮಹಾರಾಷ್ಟ್ರ:** ಮಹಾರಾಷ್ಟ್ರದ ಪುಣೆಯಲ್ಲಿ ಝಿಕಾ ವೈರಸ್ ನಿಂದ ನಾಲ್ಕು ಮಂದಿ ಸಾವನ್ನಪ್ಪಿದ್ದಾರೆ. ಜೂನ್ ನಿಂದ ಇಲ್ಲಿಯವರೆಗೆ 66 ಪ್ರಕರಣಗಳು ದೃಢಪಟ್ಟಿದ್ದು, ಅವುಗಳಲ್ಲಿ 26 ಮಂದಿ ಗರ್ಭಿಣಿಯರಿದ್ದಾರೆ ಎನ್ನುವ ಮಾಹಿತಿ ಲಭ್ಯವಾಗಿದೆ. ಮೃತಪಟ್ಟವರೆಲ್ಲಾ 68-78ರ ಆಸುಪಾಸಿನವರು ಅವರ ಸಾವಿಗೆ ಝಿಕಾ ವೈರಸ್ ಮಾತ್ರ ಕಾರಣವಲ್ಲ, ಹಲವು ಆರೋಗ್ಯ ಸಮಸ್ಯೆಗಳು ಮೊದಲೇ ಇದ್ದವು ಎಂಬುದು ತಿಳಿದುಬಂದಿದೆ.



ಸೋಂಕಿತರಲ್ಲಿ 26 ಮಂದಿ ಗರ್ಭಿಣಿಯರರಿರುವ ಕಾರಣ ಸೂಕ್ಷ್ಮವಾಗಿ ಅವರನ್ನು ಗಮನಿಸಲಾಗುತ್ತಿದೆ. ಹೆಚ್ಚಿನವರ ಆರೋಗ್ಯ ಉತ್ತಮವಾಗಿದೆ. ಪುಣೆಯಲ್ಲಿ ಜುಲೈ 1 ರಂದು ಝಿಕಾ ವೈರಸ್ ಪ್ರಕರಣಗಳು ವರದಿಯಾಗಿದ್ದು, ಎರಂಡ್ವಾನೆಯಲ್ಲಿ ವಾಸಿಸುತ್ತಿರುವ ಇಬ್ಬರು ಗರ್ಭಿಣಿಯರಿಗೆ ಸೋಂಕು ತಗುಲಿದೆ.

ಈ ವೈರಸ್ ಅನ್ನು ಮೊದಲು 1947 ರಲ್ಲಿ ಉಗಾಂಡಾದಲ್ಲಿ ಗುರುತಿಸಲಾಯಿತು. ಝಿಕಾ ವೈರಸ್ ಸೋಂಕು ಸೊಳ್ಳೆಯಿಂದ ಹರಡುವ ವೈರಲ್ ಸೋಂಕಾಗಿದ್ದು, ಇದು ಸಾಮಾನ್ಯವಾಗಿ ಯಾವುದೇ ಗಂಭೀರ ರೋಗಲಕ್ಷಣಗಳನ್ನು ಉಂಟುಮಾಡುವುದಿಲ್ಲ. ಕೆಲವು ರೋಗಿಗಳು ಜ್ವರ, ಕೀಲು ನೋವು, ದೇಹದ ನೋವು, ತಲೆನೋವು, ಕೆಂಪು ಕಣ್ಣುಗಳು, ವಾಂತಿ, ಅಸ್ವಸ್ಥತೆ, ಜ್ವರ ಮತ್ತು ದೇಹದ ದದ್ದುಗಳನ್ನು ಅನುಭವಿಸುತ್ತಾರೆ. ಝಿಕಾ ರೋಗಿ ಪತ್ತೆಯಾದ ಹಿನ್ನೆಲೆಯಲ್ಲಿ ಆಡಳಿತ ಮಂಡಳಿಯೂ ಎಚ್ಚೆತ್ತುಕೊಂಡಿದೆ.

ಗರ್ಭಿಣಿಯರಲ್ಲಿ ಝಿಕಾ ವೈರಸ್ ಮೈಕ್ರೊಸೆಫಾಲಿಯನ್ನು ಉಂಟುಮಾಡಬಹುದು, ಇದರಿಂದ ಮೆದುಳಿನ ಬೆಳವಣಿಗೆಯಲ್ಲಿ ಕುಂಠಿತ ಉಂಟಾಗಲಿದೆ. ಹವಾಮಾನ ವೈಪರೀತ್ಯದಿಂದ ಡೆಂಗ್ಯೂ, ಮಲೇರಿಯಾ, ಚಿಕನ್ ಗುನ್ಯಾ ಸೇರಿದಂತೆ ಇತರೆ ರೋಗಗಳೂ ಹೆಚ್ಚಾಗತೊಡಗಿವೆ.

ಪುಟ 2

### ಯುವತಿಗೆ ಬ್ಲಾಕ್ ಮೇಲ್

## ಸ್ನೇಹಿತ ಅರೆಸ್ಟ

**ಬೆಂಗಳೂರು:** ಕಾಲ ಕೆಟ್ಟೋಗಿದೆ. ನಾವು ನಂಬಿದ ನಮ್ಮವರಿಂದಲೇ ನಮಗೆ ಮೋಸ ಆಗೋದು, ನಮ್ಮವರೇ ನಮ್ಮ ಬೆನ್ನಿಗೆ ಚೂರಿ ಹಾಕೋದು ಎಂದು ಮೋಸ ಹೋದ ಮೇಧಾವಿಗಳು ಬುದ್ದಿ ಹೇಳೋದನ್ನ ನಾವು ಕೇಳಿರ್ತೀವಿ. ಆದರೆ ಬೆಂಗಳೂರಿನಲ್ಲಿ ಇದೇ ರೀತಿಯ ಘಟನೆಯೊಂದು ನಡೆದಿದೆ. ಕಾಲೇಜು ಯುವತಿಯ ಜೊತೆ ಸ್ನೇಹ ಬೆಳೆಸಿ ಆಪ್ತನಾಗಿ ಅವಳ ಸೀಕ್ರೆಟ್ ಗಳನ್ನು ತಿಳಿದುಕೊಂಡು ಬಳಿಕ ಅವರಿಗೆಯೇ ಬ್ಲಾಕ್ ಮೇಲ್ ಮಾಡಿ ಚಿನ್ನ, ಹಣ ವಸೂಲಿ ಮಾಡಿದ್ದ ಆರೋಪಿಯನ್ನು ಪೊಲೀಸರು ಬಂಧಿಸಿದ್ದಾರೆ. ಆರೋಪಿ ತೇಜಸ್ (19)ನನ್ನು ಸುಬ್ರಹ್ಮಣ್ಯಪುರ ಪೊಲೀಸರು ಬಂಧಿಸಿದ್ದು ಬಂಧಿತನಿಂದ ಮೂರುವರೆ ಲಕ್ಷ ಮೌಲ್ಯದ ಚಿನ್ನಾಭರಣ ವಶಕ್ಕೆ ಪಡೆಯಲಾಗಿದೆ.



ಆರೋಪಿ ತೇಜಸ್ ಮೊದ ಮೊದಲು ಒಳ್ಳೆಯವನಂತೆ ನಟಿಸಿ ಪಿಯುಸಿ ಓದುತ್ತಿದ್ದ ಕಾಲೇಜು ಯುವತಿ ಜೊತೆ ಸ್ನೇಹ ಬೆಳೆಸಿದ್ದ. ಕಾಫಿ, ಊಟ, ತಿಂಡಿ ಎಂದು ಕರೆದುಕೊಂಡು ಹೋಗ್ತಿದ್ದ. ಹೋಗ್ತಾ ಹೋಗ್ತಾ ಯುವತಿಯ ಸೀಕ್ರೆಟ್ ಎಲ್ಲವನ್ನೂ ತಿಳಿದುಕೊಂಡಿದ್ದ. ಇದೇ ವೇಳೆ ಯುವತಿ ತನ್ನ ಸ್ನೇಹಿತನ ಜೊತೆ ಇರುವ ಫೋಟೋವನ್ನು ತೆಗೆದು ಕೊಂಡು ಬ್ಲಾಕ್ ಮೇಲ್ ಮಾಡಲು ಶುರು ಮಾಡಿದ್ದ. ಸ್ನೇಹಿತನ ಜೊತೆಗಿನ ಫೋಟೋವನ್ನು ನಿಮ್ಮ ಕುಟುಂಬಸ್ಥರಿಗೆ ಕಳಿಸೋದಾಗಿ ಬೆದರಿಕೆ ಹಾಕಿದ್ದ.

ಪುಟ 2

### ಟ್ರಂಪ್ ಮಾರಣಾಂತಿಕ ದಾಳಿ ಪ್ರಕರಣ

## ಪಾಕ್ ವ್ಯಕ್ತಿ ಬಂಧನ

**ಯುಎಸ್:** ಇತ್ತೀಚೆಗೆ ಅಮೆರಿಕದ ಮಾಜಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮೇಲೆ ನಡೆದ ಮಾರಣಾಂತಿಕ ದಾಳಿ ಪ್ರಕರಣಕ್ಕೆ ಸಂಬಂಧಿಸಿದಂತೆ ಪಾಕಿಸ್ತಾನದ ಆಸಿಫ್ ಎಂಬ ವ್ಯಕ್ತಿಯೊಬ್ಬನನ್ನು ಪೊಲೀಸರು ಬಂಧಿಸಿದ್ದಾರೆ. ಇರಾನ್ ನೊಂದಿಗೆ ಸಂಬಂಧ ಹೊಂದಿರುವ ಪಾಕಿಸ್ತಾನಿ ವ್ಯಕ್ತಿಯೊಬ್ಬರು ಅಮೆರಿಕದಲ್ಲಿ ಟ್ರಂಪ್ ಹತ್ಯೆಗೆ ಸಂಚು ರೂಪಿಸಿದ್ದರು ಎನ್ನಲಾಗಿದೆ.

ಮಾಜಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹಾಗೂ ಮಾಜಿ ಯುಎಸ್ ಸರ್ಕಾರಿ ಅಧಿಕಾರಿಗಳನ್ನು ಗುರಿಯಾಗಿಸಿಕೊಂಡು ಸಂಚು ರೂಪಿಸಲಾಗಿತ್ತು. ನ್ಯೂಯಾರ್ಕ್ ಫೆಡರಲ್ ನ್ಯಾಯಾಲಯದಲ್ಲಿ ಆಸಿಫ್ ಮರ್ಚೆಂಟ್ ವಿರುದ್ಧ ಕೊಲೆ ಆರೋಪ ಹೊರಿಸಲಾಗಿತ್ತು. ಕಳೆದ ತಿಂಗಳು ಪೆನ್ಸಿಲ್ ವೇನಿಯಾದಲ್ಲಿ ಟ್ರಂಪ್ ಅವರಿಗೆ ಹೆಚ್ಚಿನ ಭದ್ರತೆ ನೀಡಲಾಗಿತ್ತು. ಈ ರ್ಯಾಲಿಯಲ್ಲಿ ಟ್ರಂಪ್ ಮೇಲೆ ದಾಳಿ ನಡೆದು ಅವರು ಗಾಯಗೊಂಡಿದ್ದರು. ಗುಂಡಿನ ದಾಳಿಗೂ ಇರಾನ್ ಬೆದರಿಕೆಗೂ



ಸಂಬಂಧವಿಲ್ಲ.

ಆಸಿಫ್ ರಜಾ ಮರ್ಚೆಂಟ್ ಎಂದೂ ಕರೆಯಲ್ಪಡುವ ಆಪಾದಿತ ಸಂಚುಕೋರ, ತನಗೆ ಇಬ್ಬರು ಹೆಂಡತಿಯರಿದ್ದು ತಲಾ ಒಬ್ಬರು ಪಾಕಿಸ್ತಾನ ಮತ್ತು ಇರಾನ್‌ನಲ್ಲಿ ಮತ್ತು ಎರಡೂ ದೇಶಗಳಲ್ಲಿ ಮಕ್ಕಳಿದ್ದಾರೆ ಎಂದು ಅಧಿಕಾರಿಗಳಿಗೆ ತಿಳಿಸಿದರು.

ಜುಲೈ 13 ರಂದು ಪೆನ್ಸಿಲ್ವೇನಿಯಾದ ಬಟ್ಲರ್‌ನಲ್ಲಿ ಟ್ರಂಪ್ ಅವರ ಹತ್ಯೆಯ ಪ್ರಯತ್ನ ವಿಫಲವಾದ ಒಂದು ತಿಂಗಳ ನಂತರ ಈ ವಿಚಾರ ಬಹಿರಂಗಗೊಂಡಿದೆ.

ಪುಟ 2

# ಸರ್ಕಾರಿ ಕಾರಿನಲ್ಲಿ ಬಂದ ಮೌಲ್ವಿ: ಯತ್ನಾಳ್ ಆಕ್ರೋಶ



**ಬೆಂಗಳೂರು:** ಬೆಂಗಳೂರಿನ ಸಿಎಂ ಕಾನ್ವೆನ್ಷನ್‌ನಲ್ಲಿ ನಡೆದ ಸುನ್ನಿ ಕೋಆರ್ಡಿನೇಷನ್ ಕಾರ್ಯಕ್ರಮಕ್ಕೆ ಮುಸ್ಲಿಂ ಮೌಲ್ವಿ ಬಂದಿದ್ದು, ಇದಕ್ಕೆ ವಿಜಯಪುರ ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಯಾಗಿ ಮೌಲ್ವಿ ಶೇಖ್ ಅಬೂಬಕರ್ ಅಹ್ಮದ್ ಸರ್ಕಾರದ 'ಜಿ' ಸಿರೀಸ್‌ನ ಕಾರಿನಲ್ಲಿ ಪೊಲೀಸ್ ಭದ್ರತೆಯಲ್ಲಿ ಬಂದಿದ್ದರು. ಮೌಲ್ವಿ ಶೇಖ್ ಅಬೂಬಕರ್ ಅಹ್ಮದ್ ಸರ್ಕಾರದ ಕಾರಿನಲ್ಲಿ ಬಂದಿರುವ ವಿಡಿಯೋವನ್ನು ಶಾಸಕ ಯತ್ನಾಳ್ ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಪೋಸ್ಟ್ ಮಾಡಿ, ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಸರ್ಕಾರಕ್ಕೆ ಸಂಬಂಧವಿಲ್ಲದ ವ್ಯಕ್ತಿಗೆ ಪೊಲೀಸ್ ಭದ್ರತೆ ಹಾಗೂ ಪೊಲೀಸ್ ಭದ್ರತೆ ಮತ್ತು ಪ್ರೊಟೋಕಾಲ್ ಅನ್ನು ನೀಡಲಾಗಿದೆ. ಅಲ್ಲದೆ, 'ಜಿ' ಸಿರಿಸ್‌ನ ಸರ್ಕಾರಿ ಕಾರಿನಲ್ಲಿ ಏಕೆ ಬಂದರು? ಇದು ಶಿಷ್ಟಾಚಾರದ ನಿಯಮಗಳ ಉಲ್ಲಂಘನೆಯಲ್ಲವೇ? ಎಂದು ಸರ್ಕಾರಕ್ಕೆ ಯತ್ನಾಳ್ ಪ್ರಶ್ನಿಸಿದ್ದಾರೆ. ಅಲ್ಪಸಂಖ್ಯಾತರ ಮತಗಳನ್ನು ಗಮನದಲ್ಲಿಟ್ಟುಕೊಂಡು ಧಾರ್ಮಿಕ ಮುಖಂಡರಿಗೆ ಅನುಕೂಲಗಳು ಮತ್ತು ಸೌಲಭ್ಯಗಳನ್ನು ಒದಗಿಸಲು ಸರ್ಕಾರ ಪ್ರಯತ್ನಿಸುತ್ತಿದೆ. ಇದು ನಿಯಮಗಳಿಗೆ ವಿರುದ್ಧವಾಗಿರುವುದು ಮಾತ್ರವಲ್ಲದೆ ತೆರಿಗೆದಾರರ ಹಣ ವ್ಯರ್ಥವೂ ಆಗಿದೆ. ರಾಜ್ಯವು ಮಳೆಯ ಅಬ್ಬರಕ್ಕೆ ತತ್ತರಿಸಿರುವ ಸಂದರ್ಭದಲ್ಲಿ ಸರ್ಕಾರ ಈ ರೀತಿ ಮಾಡುವುದು ಸರಿಯಲ್ಲ ಎಂದು ವಾಗ್ದಾಳಿ ಮಾಡಿದರು.

# ಪಬ್‌ನಲ್ಲಿ ಯುವತಿಯ ಮಾನಭಂಗಕ್ಕೆ ಯತ್ನ ನಾಲರು ಕಾಮುಕರು ಅರೆಸ್ಟ್

**ಮಂಗಳೂರು:** ಪಬ್‌ನಲ್ಲಿ ಯುವತಿಯ ಮಾನಭಂಗಕ್ಕೆ ಯತ್ನಿಸಿದ ನಾಲ್ವರು ಆರೋಪಿಗಳನ್ನು ಪಾಂಡೇಶ್ವರ ಪೊಲೀಸರು ಬಂಧಿಸಿದ್ದಾರೆ. ಬಂಧಿತ ಆರೋಪಿಗಳನ್ನು ಪುತ್ತೂರಿನ ವಿನಯ್(33), ಮಹೇಶ್ (27), ಪ್ರಿತೇಶ್ (34) ಹಾಗೂ ನಿತೇಶ್ (33) ಎಂದು ಗುರುತಿಸಲಾಗಿದೆ. ಮಂಗಳೂರಿನ ಪಾಂಡೇಶ್ವರದ ಮಾಲ್ ಒಂದರಲ್ಲಿರುವ ಪಬ್‌ನಲ್ಲಿ ಯುವತಿಯ ಮಾನಭಂಗಕ್ಕೆ ಆರೋಪಿಗಳು ಯತ್ನಿಸಿ, ಕಿರುಕುಳ ನೀಡಿದ್ದಾರೆ ಎಂದು ಆರೋಪಿಸಲಾಗಿದೆ. ಸ್ನೇಹಿತೆಯೊಂದಿಗೆ ಪಬ್‌ಗೆ ಬಂದಿದ್ದ ವೇಳೆ ಪುಂಡರು ಯುವತಿಗೆ ಕಿರುಕುಳ ನೀಡಿದ್ದಾರೆ. ಅಲ್ಲದೇ ಅವಾಚ್ಯ ಶಬ್ದಗಳಿಂದ ಬೈದು ಬಿಯರ್ ಬಾಟಲಿಯಿಂದ ಹಲ್ಲೆ ನಡೆಸಲು ಯತ್ನಿಸಿದ್ದಾರೆ ಎಂದು ಯುವತಿ ದೂರಿನಲ್ಲಿ ತಿಳಿಸಿದ್ದಾಳೆ. ಈ ಸಂಬಂಧ ಪಾಂಡೇಶ್ವರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ವಿಚಾರಣೆ ನಡೆಸುತ್ತಿದ್ದಾರೆ.



# ಪೊಲೀಸರಿಗೇ ಬ್ಲಾಕ್ ಮೇಲ್ ಮಾಡ್ತಿದ್ದ ಖತರ್ನಾಕ್ ಆಸಾಮಿ ಅಂದರ್

**ಬೆಂಗಳೂರು:** ಕಳ್ಳರು, ಸುಳ್ಳರು, ಅಪರಾಧಿಗಳಿಗೆಲ್ಲ ಹೆಡೆಮುರಿ ಕಟ್ಟುವ ಪೊಲೀಸರಿಗೆಯೇ ಕಿಲಾಡಿ ಯುವಕನೋರ್ವ ಬ್ಲಾಕ್ ಮೇಲ್ ಮಾಡಲು ಹೋಗಿ ತಗ್ಲಾಕೊಂಡಿದ್ದಾನೆ. ಆರೋಪಿ ಸೈಯದ್ ಸರ್ಫರಾಜ್ ಅಹಮದ್‌ನನ್ನು ಶಿವಾಜಿನಗರ ಠಾಣೆ ಪೊಲೀಸರು ಬಂಧಿಸಿದ್ದಾರೆ. ಆರೋಪಿ ಸೈಯದ್, ಪೊಲೀಸ್ ಠಾಣೆಗೆ ನುಗ್ಗಿ ಪೊಲೀಸರಿಗೆ ಬ್ಲಾಕ್ ಮೇಲ್ ಮಾಡ್ತಿದ್ದ. ಪೊಲೀಸ್ ಠಾಣೆಯಲ್ಲಿದ್ದ ಆರೋಪಿಗಳ ವಿಚಾರವಾಗಿ ಆರೋಪಿಗಳ ಪರ ಮಾನವ ಹಕ್ಕುಗಳ ಆಯೋಗಕ್ಕೆ ದೂರು ನೀಡ್ತೀನಿ. ಹಾಕಿರೋ ಕೇಸ್ ವಾಪಾಸ್ ಪಡೆಯುವಂತೆ ಬ್ಲಾಕ್ ಮೇಲ್ ಮಾಡ್ತಿದ್ದ. ಇದೇ ರೀತಿ ಬ್ಲಾಕ್ ಮೇಲ್ ಮಾಡಲು ಹೋಗಿ ಶಿವಾಜಿನಗರ ಪೊಲೀಸರ ಬಳಿ ಲಾಕ್ ಆಗಿದ್ದಾನೆ.



**ಹೇಗಿತ್ತು ಚಾಲಾಕಿ ಆರೋಪಿ ಆಟ?:** ಆರೋಪಿ ಸೈಯದ್ ಸರ್ಫರಾಜ್, ಮೊದಲಿಗೆ ಪೊಲೀಸ್ ಠಾಣೆಗೆ ಹೋಗಿ ಸಿಬ್ಬಂದಿ, ಅಧಿಕಾರಿಗಳ ಜೊತೆ ನಯವಾಗಿ ಮಾತಾಡಿ ಪರಿಚಯ ಮಾಡಿಕೊಳ್ಳುತ್ತಿದ್ದ. ಬಳಿಕ ಠಾಣೆಯ ಸೆಲ್ ಒಳಗೆ ಇರುವ ಆರೋಪಿಗಳನ್ನೂ ಮಾತಾಡಿಸಿ ಆರೋಪಿಗಳ ಬಳಿ ತನ್ನ ಪರಿಚಯ ಮಾಡಿಕೊಂಡು ವಿಶ್ವಾಸ ಗಳಿಸುತ್ತಿದ್ದ. ಬಳಿಕ ಆರೋಪಿಯ ವಿರುದ್ಧ ದಾಖಲಾದ ಕೇಸ್‌ನ ಪೂರ್ವಪರ ತಿಳಿದುಕೊಂಡು ನೇರವಾಗಿ ರಾಜ್ಯ ಮಾನವ ಹಕ್ಕುಗಳ ಆಯೋಗಕ್ಕೆ ದೂರು ಕೊಡ್ತಿದ್ದ. ಆರೋಪಿಯನ್ನು ಕಾನೂನು ಬಾಹಿರವಾಗಿ ಪೊಲೀಸರು ಅಭಿರಕ್ಷೆಯಲ್ಲಿ ಇಟ್ಟುಕೊಂಡಿದ್ದಾರೆಂದು ಸುಳ್ಳು ದೂರು ನೀಡುತ್ತಿದ್ದ. ಬಳಿಕ ಈ ದೂರು ಹಿಂಪಡೆಯುವ ಸಲುವಾಗಿ ಪೊಲೀಸರ ಬಳಿ ಹಣಕ್ಕೆ ಡಿಮ್ಯಾಂಡ್ ಮಾಡ್ತಿದ್ದ. ಹೀಗೆ ಅನೇಕ ಪೊಲೀಸ್ ಠಾಣೆಗಳಲ್ಲಿ ಕಿಲಾಡಿತನ ತೋರಿ ಆರೋಪಿ ಸೈಯದ್ ಹಣ ವಸೂಲಿ ಮಾಡಿದ್ದಾನೆ.

ಸದ್ಯ ಇದೇ ರೀತಿ ಶಿವಾಜಿನಗರ ಪೊಲೀಸ್ ಇನ್ಸ್‌ಪೆಕ್ಟರ್‌ವಿರುದ್ಧ ಮಾನವ ಹಕ್ಕುಗಳ ಆಯೋಗಕ್ಕೆ ದೂರು ನೀಡಿದ್ದ ಸರ್ಫರಾಜ್ ಠಾಣೆಗೆ ಬಂದು ಪೊಲೀಸ್ ಇನ್ಸ್‌ಪೆಕ್ಟರ್‌ಬಳಿ 50 ಸಾವಿರಕ್ಕೆ ಡಿಮ್ಯಾಂಡ್ ಮಾಡಿದ್ದ. ಕೇಸ್ ವಾಪಸ್ ಪಡೆಯುವುದಕ್ಕೆ ಹಣ ನೀಡಿ ಎಂದು ಬ್ಲಾಕ್ ಮೇಲ್ ಮಾಡಿದ್ದ. ಅದರಂತೆ 25 ಸಾವಿರ ಹಣ ಕೊಡುವುದಾಗಿ ಕರೆಸಿ ಆರೋಪಿಯನ್ನು ಪೊಲೀಸರು ಲಾಕ್ ಮಾಡಲು ಪ್ರಯತ್ನಿಸಿದ್ದರು. ಆದರೆ ಈ ವೇಳೆ ಪೊಲೀಸರನ್ನ ಯಾಮಾರಿಸಿ ಆರೋಪಿ ಸೈಯದ್ ಸರ್ಫರಾಜ್ ಎಸ್ಕೇಪ್ ಆಗಿದ್ದು ಸದ್ಯ ಈಗ ಆರೋಪಿಯನ್ನು ಬಂಧಿಸಲಾಗಿದೆ. ಬಂಧಿತ ಆರೋಪಿಯ ವಿಚಾರಣೆ ವೇಳೆ 30ಕ್ಕೂ ಹೆಚ್ಚು ಕಡೆ ಇದೇ ಕರಾಮತ್ತು ತೋರಿರೋದು ಬೆಳಕಿಗೆ ಬಂದಿದೆ. ಹಲವು ಪೊಲೀಸರ ವಿರುದ್ಧ ಮಾನವ ಹಕ್ಕು ಆಯೋಗಕ್ಕೆ ದೂರು ನೀಡಿರುವುದು ಪತ್ತೆಯಾಗಿದೆ. ಸದ್ಯ ಶಿವಾಜಿನಗರ ಪೊಲೀಸರು ಆರೋಪಿಯನ್ನ ಬಂಧಿಸಿ ಹೆಚ್ಚಿನ ವಿಚಾರಣೆ ನಡೆಸುತ್ತಿದ್ದಾರೆ.

# ದೇವಸ್ಥಾನದಲ್ಲಿ ದರ್ಶನ್ ಭಾವಚಿತ್ರಕ್ಕೆ ಪೂಜೆ? ಅರ್ಚಕ ಅಮಾನತು

**ಬಳ್ಳಾರಿ:** ಜಿಲ್ಲೆಯ ಕುರುಗೋಡು ಪಟ್ಟಣದಲ್ಲಿರುವ ಐತಿಹಾಸಿಕ ದೊಡ್ಡಬಸವೇಶ್ವರ ಮೂರ್ತಿ ಜೊತೆಗೆ ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಆರೋಪಿ ನಟ ದರ್ಶನ್ ಭಾವಚಿತ್ರಕ್ಕೂ ಪೂಜೆ ಮಾಡಿದ ಘಟನೆ ನಡೆದಿದೆ. ಘಟನೆಗೆ ಸಂಬಂಧಿಸಿದಂತೆ ಆಕ್ರೋಶ ಭುಗಿಲೆದ್ದಿದೆ. ಭಾನುವಾರ ಅಮಾವಾಸ್ಯೆ ದಿನದಂದು ನಟ ದರ್ಶನ್ ಫೋಟೋಗಳಿಗೆ ಪೂಜೆ ಮಾಡಲಾಗಿದೆ. ವಿಶೇಷ ಧಾರ್ಮಿಕ ಪೂಜೆಯ ಮೂಲಕ ಮೂರ್ತಿ ಕೆಳಗೆ ದರ್ಶನ್ ಫೋಟೊ ಇಟ್ಟು ಪೂಜೆ ಸಲ್ಲಿಕೆ ಮಾಡಲಾಗಿದೆ. ಅರ್ಚಕರೇ ದರ್ಶನ್ ಅವರ ಫೋಟೊ ಇಟ್ಟು ಪೂಜೆ ಮಾಡಿರುವ ಶಂಕೆ ವ್ಯಕ್ತವಾಗಿದೆ. ನಟ ದರ್ಶನ್ ಅವರ ಐದಾರು ಭಾವಚಿತ್ರಗಳನ್ನ ಬಸವೇಶ್ವರರ ಮೂರ್ತಿಯ ಅಕ್ಕಪಕ್ಕ ಇಟ್ಟು ಪೂಜೆ ಮಾಡಲಾಗಿದೆ. ಸದ್ಯ ಪೂಜೆಯ ವೀಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದ್ದು, ಸಾರ್ವಜನಿಕರಿಂದ ಆಕ್ರೋಶ ವ್ಯಕ್ತವಾಗಿದೆ. ಮೂರ್ತಿ ಕೆಳಗೆ ನಟನ ಭಾವಚಿತ್ರ ಹಾಕಿದ ಹಿನ್ನೆಲೆ ಪರ-ವಿರೋಧದ ಚರ್ಚೆ ಶುರುವಾಗಿದೆ.





# ಮದುವೆ ಆಗುವುದಾಗಿ ನಂಬಿಸಿ ಮಹಿಳೆಗೆ ವಂಚನೆ: ಶಿವಮೊಗ್ಗ ಬಿಜೆಪಿ ಮುಖಂಡ ಅರೆಸ್ಟ್

**ಶಿವಮೊಗ್ಗ:** ಮದುವೆಯಾಗುವುದಾಗಿ ನಂಬಿಸಿ ಮಹಿಳೆಗೆ ವಂಚಿಸಿದ ಆರೋಪದ ಮೇಲೆ ಶಿವಮೊಗ್ಗ ಜಿಲ್ಲಾ ಬಿಜೆಪಿ ಮುಖಂಡ ಶರತ್ ಕಲ್ಯಾಣಿ ಎನ್ನುವರನ್ನು ಪೊಲೀಸರು ಬಂಧಿಸಿದ್ದಾರೆ. ಮದುವೆ ಆಗುವುದಾಗಿ ನಂಬಿಸಿ ಮೋಸ ಜೊತೆಗೆ ಸಂತ್ರಸ್ತೆಯಿಂದ 4 ಲಕ್ಷ ರೂ. ಹಣ ಪಡೆದು ಹಿಂದಿರುಗಿಸದೆ ವಂಚಿಸಿರುವ ಆರೋಪದ ಮೇಲೆ ಬಂಧನವಾಗಿದೆ.



ಶಿವಮೊಗ್ಗ ಜಿಲ್ಲಾ ಬಿಜೆಪಿ ಸಾಮಾಜಿಕ ಜಾಲತಾಣದ ಪ್ರಮುಖ್ ಆಗಿರುವ ಶರತ್ ವಿರುದ್ಧ ಜುಲೈ 26ರಂದು ಶಿವಮೊಗ್ಗ ಮಹಿಳಾ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿತ್ತು. ಎಫ್‌ಐಆರ್ ದಾಖಲಾಗುತ್ತಿದ್ದಂತೆಯೇ ಶರತ್ ನಾಪತ್ತೆಯಾಗಿದ್ದ. ಇದೀಗ ಶರತ್ ವಿಜಯಪುರದ ಬಳಿ ಪೊಲೀಸರ ಕೈಗೆ ಸಿಕ್ಕಿಬಿದ್ದಿದ್ದಾನೆ.

ಶರತ್ ಕಲ್ಯಾಣಿಯು ತನಗೆ ಮದುವೆಯಾಗಿರುವ ಮಾಹಿತಿ ಮುಚ್ಚಿಟ್ಟು 'ನಾನಿನ್ನು ಅವಿವಾಹಿತ. ನಿನ್ನನ್ನು ಪ್ರೀತಿಸುತ್ತೇನೆ, ಮದುವೆಯಾಗಿ ನಿನಗೆ ಬಾಳು ಕೊಡುತ್ತೇನೆ ಎಂದು ನಂಬಿಸಿ ಬಲವಂತವಾಗಿ ದೈಹಿಕ ಸಂಪರ್ಕ ಬೆಳೆಸಿದ್ದ' ಎಂದು ಖಾಸಗಿ ಕಂಪನಿಯಲ್ಲಿ ಉದ್ಯೋಗ ಮಾಡುತ್ತಿರುವ 43 ವರ್ಷದ ವಿಚ್ಛೇದಿತ ಮಹಿಳೆ ದೂರು ನೀಡಿದ್ದರು.

ಏಳೆಂಟು ತಿಂಗಳಿಂದ ಮಹಿಳೆ ಜೊತೆ ನಿರಂತರ ಸಂಪರ್ಕದಲ್ಲಿದ್ದ ಶರತ್, ಸಂತ್ರಸ್ತ ಮಹಿಳೆಯು ಮದುವೆಯಾಗು ಎಂದು ಒತ್ತಾಯಿಸಿದ್ದಾನೆ. ಈ ವೇಳೆ ಶರತ್, 'ನನಗೆ ಹಣಕಾಸಿನ ಸಮಸ್ಯೆ ಇದೆ. ಅದು ಬಗೆಹರಿದ ನಂತರ ಮದುವೆಯಾಗುತ್ತೇನೆ' ಎಂದು ಭರವಸೆ ನೀಡಿದ್ದ. ಅಲ್ಲದೆ, ಈಗ ನನಗೆ ಸಹಾಯ ಮಾಡು ಎಂದು ಕೇಳಿದ್ದ. ಈ ವೇಳೆ ಮಹಿಳೆಯು ಹಲವು ಬಾರಿ ಹಣ ನೀಡಿದ್ದು, ಒಟ್ಟು ನಾಲ್ಕು ಲಕ್ಷ ಹಣ ನಾಲ್ಕು ಲಕ್ಷ ಹಣವನ್ನು ಶರತ್‌ಗೆ ನೀಡಿದ್ದರು. ನಂತರ ಮಹಿಳೆ ಮದುವೆಗೆ ಒತ್ತಾಯಿಸಿದಾಗ ಶರತ್ ಆಕೆಯ ಮನೆ ಕಡೆ ಹೋಗುವುದನ್ನು ನಿಲ್ಲಿಸಿದ್ದಲ್ಲದೆ, ಫೋನ್ ಸಂಪರ್ಕವನ್ನೂ ಕಡಿದುಕೊಂಡಿದ್ದ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ. ಪ್ರಕರಣ ದಾಖಲಾಗುತ್ತಿದ್ದಂತೆ ತಲೆಮರೆಸಿಕೊಂಡಿದ್ದ ಶರತ್ ಪತ್ತೆಗಾಗಿ ಪೊಲೀಸರು ಬಲೆ ಬೀಸಿದ್ದರು. ಒಂದು ವಾರದಿಂದ ತಲೆಮರಿಸಿಕೊಂಡಿದ್ದ ಆರೋಪಿ ಬಿಜಾಪುರದಲ್ಲಿ ಪೊಲೀಸ್ ಬಲೆಗೆ ಬಿದ್ದಾನೆ. ಸದ್ಯ ಶರತ್‌ನನ್ನು ವಿಜಯಪುರದಿಂದ ಶಿವಮೊಗ್ಗಕ್ಕೆ ಕರೆತಂದು ವಿಚಾರಣೆಗೊಳಪಡಿಸಿದ್ದಾರೆ.

# ಪಾದಯಾತ್ರೆ ಬೇಡವೆಂದವರೇ ಪೋಸ್ಟರ್‌ನಲ್ಲಿ ಮುಂದಿದ್ದಾರೆ

**ಚನ್ನಪಟ್ಟಣ:** ಪಾದಯಾತ್ರೆ ಪೋಸ್ಟರ್‌ನಲ್ಲಿ ರಾಷ್ಟ್ರೀಯ ಪಕ್ಷ ಬಿಜೆಪಿ ಹಿಂದಕ್ಕೆ ಹೋಗಿದ್ದು, ಜೆಡಿಎಸ್ ಮುಂದಿದೆ. ಪಾದಯಾತ್ರೆಯೇ ಬೇಡ ಅಂದವರು ಪೋಸ್ಟರ್‌ಗಳಲ್ಲಿ ಬಿಜೆಪಿ ರಾಜ್ಯಾಧ್ಯಕ್ಷರನ್ನೇ ಹಿಂದಕ್ಕೆ ಸರಿಸಿ ಮುಂದಿದ್ದಾರೆ ಎಂದು ಗೃಹಸಚಿವ ಜಿ.ಪರಮೇಶ್ವರ್ ವ್ಯಂಗ್ಯವಾಡಿದರು. ಕಾಂಗ್ರೆಸ್ ಜನಾಂದೋಲನ ಸಭೆಯಲ್ಲಿ ಮಾತನಾಡಿದ ಅವರು, ಬಿಜೆಪಿ-ಜೆಡಿಎಸ್ ನಡೆಸುತ್ತಿರುವುದು ಭ್ರಷ್ಟಾಚಾರದ ವಿರುದ್ಧ ಭ್ರಷ್ಟಾಚಾರಿಗಳ ಪಾದಯಾತ್ರೆ ಎಂದು ಬಿಜೆಪಿಯ ಬಸವರಾಜ್ ಯತ್ನಾಳ್ ಹೇಳಿದ್ದಾರೆ. ಇವರು ಯಾವ ಉದ್ದೇಶಕಾಗಿ ಪಾದಯಾತ್ರೆ ನಡೆಸುತ್ತಿದ್ದಾರೆ. ಅಸತ್ಯ ಪ್ರೂವ್ ಮಾಡಲು ಪಾದಯಾತ್ರೆ ನಡೆಸುತ್ತಿದ್ದಾರೆಯೇ ಎಂದು ಪ್ರಶ್ನಿಸಿದರು. ಮೈತ್ರಿ ಪಕ್ಷದವರಿಗೆ ಪಾದಯಾತ್ರೆ ನಡೆಸಲು ನಾಚಿಕೆ ಆಗಬೇಕು. ಈ ಹಿಂದೆ ರಾಜ್ಯದಲ್ಲಿ ಅಧಿಕಾರದಲ್ಲಿದ್ದ ಬಿಜೆಪಿ ಸರ್ಕಾರದ 40% ಕಮಿಷನ್ ವಿಚಾರ ತಿಳಿದು ಜನ ವಿಧಾನಸಭೆ ಚುನಾವಣೆಯಲ್ಲಿ ತಕ್ಕ ಪಾಠ ಕಲಿಸಿದ್ದಾರೆ. ನಿಮ್ಮ ಅವಧಿಯಲ್ಲಿ ನಡೆದ ಭೋವಿ, ದೇವರಾಜು ಅರಸು ನಿಗಮ ಸೇರಿದಂತೆ ಇನ್ನಿತರ ಹಗರಣದ ಲೆಕ್ಕ ಮೊದಲು ಕೊಡಿ ಎಂದು ಆಗ್ರಹಿಸಿದರು. ನಿಮ್ಮ ತಟ್ಟೆಯಲ್ಲಿ ಹೆಗ್ಗಣ ಬಿದ್ದಿದೆ, ಆದರೆ ನಮ್ಮ ತಟ್ಟೆಯಲ್ಲಿ ನೊಣ ಬಿದ್ದಿದೆ ಎನುತ್ತೀರಾ. ಮುಡಾದಲ್ಲಿ ನಿಮ್ಮ ಮನೆಯವರು 36 ಸೈಟು ಪಡೆದಿರುವುದಕ್ಕೆಎಚ್‌ಡಿಕೆ ಉತ್ತರಿಸಬೇಕು. ನೀವು ಯಾವ ನೈತಿಕತೆ ಇಟ್ಟುಕೊಂಡು ಪಾದಯಾತ್ರೆ ನಡೆಸುತ್ತಿದ್ದೀರಾ ಎಂದು ಪ್ರಶ್ನಿಸಿದರು.

ಸಿಎಂ ಸಿದ್ದರಾಮಯ್ಯನವರ ಪತ್ನಿಗೆ ಅರಿಶಿನ ಕುಂಕುಮಕ್ಕೆ ನೀಡಿದ್ದ ಜಮೀನಿಗೆ ಪರ್ಯಾಯವಾಗಿ ಮುಡಾ ನೀಡಿದ ನಿವೇಶನ ವಿರುದ್ಧ ಇಷ್ಟೆಲ್ಲಾ ಮಾತಾಡ್ತೀರಲ್ಲಾ. ಈ ವಿಚಾರದಲ್ಲಿ ಸಿದ್ದರಾಮಯ್ಯ ಯಾವುದಾದರೂ ಕಡತಕ್ಕೆ ಸಹಿ ಮಾಡಿದ್ದಾರಾ? ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರಾ? ಜನ ನಿಮ್ಮನ್ನು ತಿರಸ್ಕರಿಸಿದರು ಇನ್ನು ನಿಮಗೆ ಬುದ್ಧಿ ಬಂದಿಲ್ಲವಲ್ಲ ಎಂದು ಟೀಕಿಸಿದರು. ವಿಜಯೇಂದ್ರ ಅವರ ಪಕ್ಷದ ಬಸವರಾಜ ಪಾಟೀಲ್ ಯತ್ನಾಳ್‌ಗೆ ಮೊದಲು ಉತ್ತರ ಕೊಡಲಿ ಎಂದರು.

# ಸಿಎಂ ಸಿದ್ದರಾಮಯ್ಯ ವಿರುದ್ಧ ರಾಜ್ಯಪಾಲರಿಗೆ ಮತ್ತೊಂದು ದೂರು




**ಬೆಂಗಳೂರು:** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಮ್ಮ ಪ್ರಭಾವ ಬಳಸಿ ಜಮೀನು ಡಿನೋಟಿಫೈ ಮಾಡಿದ್ದಾರೆಂದು ಮೈಸೂರು ಮೂಲದ ಸ್ನೇಹಮಯಿ ಕೃಷ್ಣ ಎಂಬುವರು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರಿಗೆ ದಾಖಲೆಗಳ ಸಮೇತ ದೂರು ನೀಡಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಪ್ರಕರಣ ದಾಖಲಿಸಲು ಅನುಮತಿ ಕೋರಿ ರಾಜ್ಯಪಲರಿಗೆ ದೂರು ನೀಡಲಾಗಿದೆ.

ಮೈಸೂರು ತಾಲೂಕು ವರುಣ ಹೋಬಳಿಯ ಉತ್ತನಹಳ್ಳಿ ಗ್ರಾಮದಲ್ಲಿನ 1.39 ಎಕರೆ ಜಮೀನನ್ನು ಆಶ್ರಯ ಯೋಜನೆಯಡಿ ನಿವೇಶನ ಇಲ್ಲದವರಿಗೆ ಮತ್ತು ಹಿಂದುಳಿದವರಿಗೆ ನೀಡಲು ಜಿಲ್ಲಾಡಳಿತ 1972ರಲ್ಲಿ ಭೂ ಸ್ವಾಧೀನಪಡಿಸಿಕೊಂಡಿತ್ತು. ಬಳಿಕ ಜಮೀನಿನ ಹಕ್ಕುಪತ್ರಗಳನ್ನು ಫಲಾನುಭವಿಗಳಿಗೆ ಹಂಚಲಾಗಿತ್ತು. ಆದರೆ, ಸದರಿ ಜಮೀನಿನಲ್ಲಿ ಮೂಲಭೂತ ಸೌಕರ್ಯ ಇಲ್ಲದ ಕಾರಣ ಫಲಾನುಭವಿಗಳು ಮನೆ ನಿರ್ಮಾಣ ಮಾಡಿರಲಿಲ್ಲ. ಈ ಜಮೀನು ಖಾಲಿ ಬಿದ್ದಿತ್ತು.

30 ವರ್ಷಗಳ ನಂತರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಂದಿನ ಜಿಲ್ಲಾಧಿಕಾರಿಗಳಿಗೆ ಪತ್ರ ಬರೆದು, ಈ 1.39 ಎಕರೆ ಜಮೀನನ್ನು ಮಾರಪ್ಪ ಎಂಬ ಹೆಸರಿನ ವ್ಯಕ್ತಿಗೆ ಡಿನೋಟಿಫೈ ಮಾಡುವಂತೆ ಕೋರುತ್ತಾರೆ. ಆದರೆ, ಮಾರಪ್ಪ ಮತ್ತು ಈ ಜಮೀನಿಗೆ ಯಾವುದೇ ಸಂಬಂಧವಿರುದಿಲ್ಲ. ಮಾರಪ್ಪನ ತಂದೆ ಹೆಸರಿನಲ್ಲಿ ಬೇರೊಂದು ಜಾಗದಲ್ಲಿ ಜಮೀನು ಇದೆ.

ಸಿದ್ದರಾಮಯ್ಯ ಪತ್ರ ಆಧರಿಸಿ ಜಿಲ್ಲಾಡಳಿತ 14 ತಿಂಗಳ ಬಳಿಕ ನಕಲಿ ದಾಖಲೆಗಳನ್ನು ಸೃಷ್ಟಿಸಿ ಮಾರಪ್ಪ ಎಂಬುವರ ಹೆಸರಿಗೆ 1.39 ಎಕರೆ ಜಮೀನನ್ನು ಡಿನೋಟಿಫೈ ಮಾಡಿದ್ದಾರೆ ಎಂಬ ಆರೋಪ ಕೇಳಿಬಂದಿದೆ. ಮೂಲ ಜಮೀನಿನ ಮಾಲೀಕರು ಮರಪ್ಪ ಅಲ್ಲ, ಆದರೂ ಅವರ ಹೆಸರಿಗೆ ಡಿನೋಟಿಫೈ ಮಾಡಲಾಗಿದೆ. ಈ ವಿಚಾರ ತಿಳಿದ ಫಲಾನುಭವಿಗಳು 2011ರಲ್ಲಿ ಅಂದಿನ ಜಿಲ್ಲಾಧಿಕಾರಿಗಳಿಗೆ ಪತ್ರ ಬರೆದು, ನಮ್ಮ ಜಮೀನು ನಮಗೆ ನೀಡುವಂತೆ ಮನವಿ ಮಾಡುತ್ತಾರೆ. ಆರೋಪದ ದಾಖಲೆಗಳನ್ನು ಮುಂದಿಟ್ಟು ಸ್ನೇಹಮಯಿ ಕೃಷ್ಣ ಎಂಬುವರು ರಾಜ್ಯಪಾಲರಿಗೆ ದೂರು ನೀಡಿದ್ದಾರೆ. ಅಕ್ರಮ ಡಿನೋಟಿಫೈ ಪ್ರಕ್ರಿಯೆಯಲ್ಲಿ ಸಿದ್ದರಾಮಯ್ಯ ಭಾಗಿಯಾಗಿದ್ದಾರೆ ಎಂದು ಆರೋಪಿಸಿದ್ದಾರೆ.

## ಮೊಹಮ್ಮದ್ ಯೂನಸ್

ಇದೇ ಪ್ರತಿಭಟನೆಯ ನಾಯಕರು ಮಧ್ಯಂತರ ಸರ್ಕಾರದ ಪ್ರಧಾನಿಯಾಗಿ ಅಧಿಕಾರ ವಹಿಸಿಕೊಳ್ಳುವಂತೆ ಮೊಹಮದ್ ಯೂನಸ್ ಅವರಿಗೆ ಮನವಿ ಮಾಡಿಕೊಳ್ಳುತ್ತಿದೆ. ಅದಕ್ಕೆ ಯೂನಸ್ ಒಪ್ಪಿಗೆ ಸೂಚಿಸಿದ್ದಾರೆ ಎನ್ನಲಾಗಿದೆ. ಯೂನಸ್ ಅವರ ಸೇವೆಯನ್ನು ಜಾಗತಿಕ ಮಟ್ಟದಲ್ಲಿ ಗುರುತಿಸಿ 2006ರಲ್ಲಿ ನೋಬೆಲ್ ಪ್ರಶಸ್ತಿ ನೀಡಿ ಪುರಸ್ಕರಿಸಲಾಗಿತ್ತು.

ಆದಿವಾಸಿಗಳು ಹಾಗೂ ಗ್ರಾಮೀಣ ಪ್ರದೇಶದಲ್ಲಿರುವ ಕಡುಬಡವರಿಗೆ ಬದುಕು ಕಟ್ಟಿಕೊಳ್ಳಲು ಅತ್ಯಂತ ಕಡಿಮೆ ಬಡ್ಡಿ ದರ ಅಥವಾ ಬಡ್ಡಿ ರಹಿತ ಸಾಲ ನೀಡುವ ಮೂಲಕ ಲಕ್ಷಾಂತರ ಕುಟುಂಬಗಳಿಗೆ ನೆರವು ನೀಡುವ ಮೂಲಕ ಬಡವರಲ್ಲಿ ಬಡವರ ಪಾಲಿಗೆ ಬ್ಯಾಂಕರ್ ಎಂದೇ 84 ವರ್ಷದ ಯೂನಸ್ ಖ್ಯಾತಿ ಪಡೆದಿದ್ದಾರೆ.

ಅತ್ಯಂತ ಕಡಿಮೆ ಮೊತ್ತದ ಸಾಲ ನೀಡುವ ಗ್ರಾಮೀಣ ಬ್ಯಾಂಕ್ ಸ್ಥಾಪನೆ ಮಾಡಿದ್ದ ಮೊಹಮದ್ ಯೂನಸ್ ಬಡವರಿಗೆ ಸಾಲ ನೀಡುವ ಮೂಲಕ ದೇಶದ ಆರ್ಥಿಕತೆ ಕುಸಿಯದಂತೆ ನೋಡಿಕೊಂಡಿದ್ದರು. ಇವರ ಸಾಲದ ವ್ಯವಸ್ಥೆಯನ್ನು ಅಭಿವೃದ್ಧಿ ಹೊಂದಿದ್ದ ದೊಡ್ಡ ದೇಶಗಳು ಕೂಡ ಪಾಲಿಸಲು ಆರಂಭಿಸಿದ್ದವು.

ಯೂನಸ್ ಯಾರು ಮೊಹಮ್ಮದ್ ಯೂನಸ್ ಬ್ಯಾಂಕ್ ಉದ್ಯೋಗಿ, 1983ರಲ್ಲಿ ಗ್ರಾಮೀಣ ಬ್ಯಾಂಕ್ ಗಳನ್ನು ಸ್ಥಾಪಿಸಿದರು., ಸಣ್ಣ ಸಾಲ ವ್ಯವಸ್ಥೆ ಪರಿಚಯಿಸಿ ಬಡತನ ನಿರ್ಮೂಲನೆಗೆ ಕಾರಣರಾದರು, 2006ರಲ್ಲಿ ನೊಬೆಲ್ ಶಾಂತಿ ಪ್ರಶಸ್ತಿ, 2007ರಲ್ಲಿ ಹೊಸ ರಾಜಕೀಯ ಪಕ್ಷ ರಚಿಸುವುದಾಗಿ ಘೋಷಣೆ, 2008ರಲ್ಲಿ ಯೂನಸ್ ವಿರುದ್ಧ ತನಿಖೆಗೆ ಹಸೀನಾ ಆದೇಶ, ಬಡವರಿಂದ ಹಣ ವಸೂಲಿಗೆ ಬಲ ಪ್ರಯೋಗಿಸಿದ ಆರೋಪ. ಹಸೀನಾರ ವೈರಿ ಎಂಬ ವಾದವೂ ಇದೆ.

## ಟೈಗರ್ ಆಪರೇಷನ್!

ನಿಯಮ ಪ್ರಕಾರ, ಬೀದಿಬದಿ ವ್ಯಾಪಾರಿಗಳು ಶಾಶ್ವತ ಸಂರಚನೆಯ ಅಂಗಡಿಗಳನ್ನು ಮಾಡುವಂತಿಲ್ಲ. ತಳ್ಳು ಗಾಡಿಯ ಮೂಲಕ ವ್ಯಾಪಾರ ಮಾಡಬೇಕು. ಬೀದಿ ಬದಿ ಶಾಶ್ವತವಾಗಿ ಸಣ್ಣ ಅಂಗಡಿ ರೀತಿ ನಿರ್ಮಿಸಿ ವ್ಯಾಪಾರ ಮಾಡುವುದರಿಂದ ವಾಹನ ಸಂಚಾರಕ್ಕೆ ತೊಂದರೆಯಾಗುತ್ತದೆ. ಇದಲ್ಲದೆ ಕೆಲವು ಅಂಗಡಿಯವರು ಸ್ವಚ್ಛತೆಯನ್ನು ಕಾಪಾಡದ ಹಿನ್ನಲೆ ಸಾಂಕ್ರಾಮಿಕ ರೋಗಗಳಿಗೆ ಆಹ್ವಾನ ನೀಡಿದಂತಾಗುತ್ತಿದೆ.

**ಪಾಲಿಕೆ ವಾದವೇನು?:** ಅನಧಿಕೃತ ಅಂಗಡಿಗಳಿಂದಾಗಿ ಕಾನೂನು ಪ್ರಕಾರ ತೆರಿಗೆ ಕಟ್ಟಿ ವ್ಯಾಪಾರ ನಡೆಸುವವರಿಗೆ ನಷ್ಟವಾಗುತ್ತದೆ ಎಂಬುದು ಪಾಲಿಕೆಯವರ ವಾದ. ಇದಕ್ಕೆ ಸಾಕ್ಷಿ ಎನ್ನುವಂತೆ ಕಾರ್ಯಾಚರಣೆ ವೇಳೆ ಫಾಸ್ಟ್ ಫುಡ್ ಮಾರಾಟದ ಬೀದಿಬದಿ ಅಂಗಡಿಗಳು ಇದ್ದ ಸ್ಥಳದಲ್ಲಿ ಇಲಿ, ಹೆಗ್ಗಣ, ಅವಧಿ ಮೀರಿದ ಎಣ್ಣೆ, ಅಜಿನಮೋಟೋ ಬಳಸುತ್ತಿರುವುದು ಸಹ ಬೆಳಕಿಗೆ ಬಂದಿದೆ. ಈ ಬಗ್ಗೆ ಮಂಗಳೂರು ಮಹಾನಗರ ಪಾಲಿಕೆ ಮೇಯರ್ ಸುಧೀರ್ ಶೆಟ್ಟಿ ಕಣ್ಣೂರು ಮಾಹಿತಿ ನೀಡಿದ್ದಾರೆ.

ಮಂಗಳೂರು ಪಾಲಿಕೆ ವ್ಯಾಪ್ತಿಯಲ್ಲಿ ಸುಮಾರು 1045 ಬೀದಿಬದಿ ವ್ಯಾಪಾರಿಗಳಿದ್ದು, ಬೀದಿಬದಿ ವ್ಯಾಪಾರಸ್ಥರ ಶ್ರೇಯೋಭಿವೃದ್ಧಿ ಸಂಘ ಕಾರ್ಯಾಚರಿಸುತ್ತಿದೆ. ಆದರೆ ಪಾಲಿಕೆಯ ಬಿಜೆಪಿ ಆಡಳಿತ ಟೈಗರ್ ಕಾರ್ಯಾಚರಣೆ ಹೆಸರಿನಲ್ಲಿ ಬಡ ಬೀದಿ ಬದಿ ವ್ಯಾಪಾರಿಗಳ ಬದುಕುವ ಹಕ್ಕನ್ನು ಕಸಿಯುತ್ತಿದೆ ಎಂಬ ಆರೋಪವನ್ನು ಸಂಘ ಮಾಡಿದೆ. ಹೀಗಾಗಿ ಈ ಕಾರ್ಯಾಚರಣೆ ಖಂಡಿಸಿ ಬುಧವಾರ ಪಾಲಿಕೆ ಕಚೇರಿಗೆ ಮುತ್ತಿಗೆ ಹಾಕುವ ನಿರ್ಧಾರವನ್ನು ಮಾಡಿದೆ.

ಒಟ್ಟಿನಲ್ಲಿ ಬೀದಿ ಬದಿ ವ್ಯಾಪಾರಿಗಳ ಹಾಗೂ ಪಾಲಿಕೆ ನಡುವೆ ನಡೆಯುತ್ತಿರುವ ಈ ಸಂಘರ್ಷ ಯಾವ ಸ್ವರೂಪ ಪಡೆದುಕೊಳ್ಳುತ್ತದೆ ಎಂಬುದನ್ನು ಕಾದು ನೋಡಬೇಕಾಗಿದೆ.

## ಕೋಡಿಭಾಗ್ ಸೇತುವೆ

41 ವರ್ಷಗಳ ಹಿಂದೆ ಈ ಸೇತುವೆಯನ್ನು ನಿರ್ಮಾಣ ಮಾಡಲಾಗಿತ್ತು. ರಾಷ್ಟ್ರೀಯ ಹೆದ್ದಾರಿ 66 ನಿರ್ಮಾಣದ ವೇಳೆ ಒಂದೇ ಒಂದು ಹೊಸ ಸೇತುವೆ ನಿರ್ಮಾಣ ಮಾಡಲಾಗಿತ್ತು. ಇನ್ನೊಂದು ಮಾರ್ಗಕ್ಕೆ ಹಳೆ ಸೇತುವೆಯನ್ನೇ ಬಳಸಲಾಗುತ್ತಿತ್ತು. ಸದ್ಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಹಾಗೂ ಐಆರ್ ಬಿ ಕಂಪನಿ ವಿರುದ್ಧ ಕಾರವಾರ

## ಮೊದಲನೇ ಪುಟದಿಂದ...

ನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ದೇವಸ್ಥಾನಕ್ಕೆ ಜಲದಿಗ್ಬಂಧನ

ಕಲಬುರಗಿ ಮಾತ್ರವಲ್ಲದೆ ವಿಜಯಪುರ ಜಿಲ್ಲೆಯ ಚಡಚಣ ಇಂಡಿ ಆಲಮೇಲ ಹಾಗೂ ಸಿಂದಗಿ ತಾಲೂಕಿನ ಭಾಗದಲ್ಲಿ ಕೂಡ ಪ್ರವಾಹ ಭೀತಿ ಎದುರಾಗಿದೆ.

ಭೀಮಾನದಿಯಲ್ಲಿನೀರಿನಪ್ರಮಾಣಏರಿಕೆಯಾದಕಾರಣಕರ್ನಾಟಕ ಹಾಗೂ ಮಹಾರಾಷ್ಟ್ರದ ಸಮಾನಾಂತರದಲ್ಲಿರುವ 8 ಬಾಂದಾರ್ ಕಂ ಬ್ಯಾರೇಜ್ ಗಳು ಮುಳುಗಡೆಯಾಗಿರುವುದಾಗಿ ಮಂಗಳವಾರ ವರದಿಯಾಗಿತ್ತು. ಕರ್ನಾಟಕದ ಗೋವಿಂದಪುರ-ಭಂಡಾರಕವಟೆ, ಉಮರಾಣಿ-ಲವಗಿ, ಚಣೆಗಾಂವ-ಬರೂರ, ಹಿಂಗಣಿ-ಆಳಗಿ ಬ್ಯಾರೇಜ್ ಗಳು ಕೂಡ ಮಟಂಗಳವಾರವೇ ಜಲಾವೃತಗೊಂಡಿದ್ದವು.

## ಮೃತದೇಹ ಪತ್ತೆ

ಪ್ರತಿಕೂಲ ಹವಾಮಾನದಿಂದಾಗಿ ಶೋಧ ಕಾರ್ಯಾಚರಣೆಯನ್ನು ಸ್ಥಗಿತಗೊಳಿಸಲಾಗಿತ್ತು.

ಭೂಕುಸಿತದಿಂದ ನದಿಯಲ್ಲಿ ಶೇಖರಣೆಯಾದ ಮಣ್ಣಿನಡಿ ಹೂತು ಹೋಗಿದ್ದ ಲಾರಿಯೊಳಗೆ ಅರ್ಜುನ್ ಸಿಲುಕಿರುವ ಶಂಕೆ ವ್ಯಕ್ತವಾಗಿದೆ. ಏತನ್ಮಧ್ಯೆ, ವಿವಿಧ ಸಾಧನಗಳನ್ನು ಬಳಸಿ ಶೋಧ ನಡೆಸಿದಾಗ ನದಿಪಾತ್ರದಲ್ಲಿ ಯಾವುದೇ ದೇಹ ಪತ್ತೆಯಾಗಿಲ್ಲ. ಗಂಗಾವಳಿ ನದಿಯಲ್ಲಿ ಹೆಚ್ಚಿನ ನೀರಿನ ಪ್ರವಾಹ ಮತ್ತು ನದಿಯ ಆಳವು ರಕ್ಷಣಾ ತಂಡಗಳಿಗೆ ಪ್ರಮುಖ ಸವಾಲಾಗಿದೆ.

**ರಕ್ಷಣಾ ಕಾರ್ಯ ನಿಂತಿಲ್ಲ ಮುಂದುವರೆದಿದೆ:** ಗುಡ್ಡ ಕುಸಿತದಲ್ಲಿ ನಾಪತ್ತೆಯಾದವರಿಗಾಗಿ ಪತ್ತೆ ಕಾರ್ಯ ಮುಂದುವರೆದಿದೆ ಎಂದು ರಾಜ್ಯ ಸರ್ಕಾರ ಹೈಕೋರ್ಟ್ ಗೆ ತಿಳಿಸಿದೆ. ಸರ್ಕಾರ ಪರ ವಕೀಲ ಅಡ್ವೋಕೇಟ್ ಜನರಲ್ ಶಶಿಕಿರಣ್ ಅವರು ಸೋಮವಾರ ನ್ಯಾಯಮೂರ್ತಿ ಎನ್ . ವಿ ಅಂಜಾರಿಯಾ ಮತ್ತು ನ್ಯಾಯಮೂರ್ತಿ ಕೆವಿ ಅರವಿಂದ್ ಅವರಿದ್ದ ವಿಭಾಗೀಯ ಪೀಠಕ್ಕೆ ತಿಳಿಸಿದರು.

ರಕ್ಷಣಾ ಕಾರ್ಯಾಚರಣೆಯಲ್ಲಿ ತೊಡಗಿದ್ದ ಸಿಬ್ಬಂದಿ ಎಲ್ಲ ರೀತಿಯ ಅಗತ್ಯವಿರುವ ಕ್ರಮಗಳನ್ನು ಕೊಂಡಿದ್ದಾರೆ. ಮೂವರು ಕಣ್ಮರೆಯಾಗಿದ್ದು 19 ದಿನಗಳು ಕಳೆದಿವೆ. ಜೊತೆಗೆ ಅತೀ ಹೆಚ್ಚು ಮಳೆಯ ಕಾರಣದಿಂದ ಹವಾಮಾನ ಇಲಾಖೆ ರೆಡ್ ಅಲರ್ಟ್ ನೀಡಿದೆ. ಹೀಗಾಗಿ ಕಾರ್ಯಾಚರಣೆ ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದೆ. ಬಳಿಕ ಮುಂದುವರೆಸಲಾಗುವುದು ಎಂದು ಪೀಠಕ್ಕೆ ಭರವಸೆ ನೀಡಿದರು.

## ಪಾಕ್ ವ್ಯಕ್ತಿ ಬಂಧನ

ಕಳೆದ ವಾರ, ವರ್ಜೀನಿಯಾದಲ್ಲಿ ಡೆಮಾಕ್ರಟಿಕ್ ಪಕ್ಷದ ಅಧ್ಯಕ್ಷೀಯ ಅಭ್ಯರ್ಥಿ ಕಮಲಾ ಹ್ಯಾರಿಸ್ ಅವರನ್ನು ಕೊಲ್ಲುವುದಾಗಿ ಬೆದರಿಕೆ ಹಾಕಿದ್ದಕ್ಕಾಗಿ ವ್ಯಕ್ತಿಯೊಬ್ಬನನ್ನು ಬಂಧಿಸಲಾಗಿತ್ತು.

ಎಕ್ಸ್ ಪೋಸ್ಟ್ ನಲ್ಲಿ ಕಮಲಾ ಹ್ಯಾರಿಸ್ ಅವರನ್ನು ಸಜೀವವಾಗಿ ದಹಿಸಬೇಕು, ಬೇರೆ ಯಾರೂ ಮಾಡದಿದ್ದಲ್ಲಿ ನಾನು ಅದನ್ನು ವೈಯಕ್ತಿಕವಾಗಿ ಮಾಡುತ್ತೇನೆ , ಅವರು ಯಾತನೆ ಅನುಭವಿಸಿ ಸಾಯಬೇಕು ಎಂದು ಬರೆದಿದ್ದರು.

## ಸ್ನೇಹಿತ ಅರೆಸ್ಟ್

ಪ್ರೀತಿ ಮಾಡ್ತಿದ್ದೀಯಾ ನೀನು ಕಾಲೇಜಿಗೆ ಹೋಗದಂತೆ ಮಾಡ್ತಿನಿ ಎಂದು ಬ್ಲಾಕ್ ಮೇಲ್ ಮಾಡಿ ಹೇಳಬಾರದೆಂದರೆ ಹಣ, ಚಿನ್ನ ನೀಡುವಂತೆ ಡಿಮ್ಯಾಂಡ್ ಮಾಡಿದ್ದಾನೆ. ಅಲ್ಲದೆ ಕಾಲೇಜು ಹಾಗೂ ಮನೆ ಬಳಿ ಬಂದು ಯುವತಿಯನ್ನು ಹೆದರಿಸಿದ್ದಾನೆ. ಇದರಿಂದ ಹೆದರಿದ್ದ ಯುವತಿ ಮನೆಯಲ್ಲಿದ್ದ ಚಿನ್ನ ತಂದು ತೇಜಸ್ ಗೆ ನೀಡಿದ್ದಳು. ಹಂತ ಹಂತವಾಗಿ ಆರೋಪಿ ಮೂರುವರೆ ಲಕ್ಷ ಮೌಲ್ಯದ 75 ಗ್ರಾಂ ಚಿನ್ನಾಭರಣ ಸುಲಿಗೆ ಮಾಡಿದ್ದಾನೆ.

ಇನ್ನು ಮನೆಯಲ್ಲಿ ಚಿನ್ನಾಭರಣ ಕಾಣೆಯಾಗಿರೋದು ಯುವತಿ ತಾಯಿ ಗಮನಕ್ಕೆ ಬಂದಿದ್ದು ಮಗಳನ್ನು ವಿಚಾರಿಸಿದಾಗ ಘಟನೆ ಬೆಳಕಿಗೆ ಬಂದಿದೆ. ಸುಬ್ರಹ್ಮಣ್ಯಪುರ ಪೊಲೀಸ್ ಠಾಣೆಗೆ ಯುವತಿ ತಾಯಿ ದೂರು ನೀಡಿದ್ದು ಪೊಲೀಸರು ಆರೋಪಿಯನ್ನು ಬಂಧಿಸಿ ಚಿನ್ನಾಭರಣ ವಶಕ್ಕೆ ಪಡೆದಿದ್ದಾರೆ.

## 66 ಪ್ರಕರಣಗಳು ದೃಢ

ಇದನ್ನು ತಡೆಯುವುದು ಹೇಗೆ ಮನೆಗಳಲ್ಲಿ ಸೊಳ್ಳೆಗಳನ್ನು ತಪ್ಪಿಸಿ, ಸ್ವಚ್ಛವಾಗಿಡಿ, ಸೊಳ್ಳೆ ಪರದೆಗಳನ್ನು ಬಳಸಿ ಹೆಚ್ಚು ಕಾಲ ನೀರು ನಿಲ್ಲದಂತೆ ನೋಡಿಕೊಳ್ಳಿ ಎರಡು ದಿನಗಳ ಕಾಲ ಜ್ವರ ಮುಂದುವರೆದರೆ, ತಕ್ಷಣ ವೈದ್ಯರನ್ನು ಸಂಪರ್ಕಿಸಿ.ಮನೆಯ ಒಳಾಂಗಣ ಹಾಗೂ ಹೊರಾಂಗಣವನ್ನು ಸ್ವಚ್ಛವಾಗಿಡಬೇಕು, ನೀರು ಸಂಗ್ರಹಣಾ ಪರಿಕರಗಳನ್ನು ವಾರಕ್ಕೊಮ್ಮೆ ಸ್ವಚ್ಛಗೊಳಿಸುವುದು ಹಾಗೂ ಮುಚ್ಚಳದಿಂದ ಮುಚ್ಚಬೇಕು.

## ವಶ

ಸಾಗರ್ ಎಟಿಎಂ ಕಿಯೋಸ್ಕ್‌ಗಳ ಹೊರಗೆ ಅಡ್ಡಾಡುತ್ತಿದ್ದ. ಹಣವನ್ನು ಹಿಂಪಡೆಯಲು ಹೆಣಗಾಡುತ್ತಿರುವ ಬಳಕೆದಾರರನ್ನು ಗಮನಿಸುತ್ತಿದ್ದ. ನಂತರ ಅವರಿಗೆ ಸಹಾಯ ಮಾಡುವ ನೆಪದಲ್ಲಿ ಅವರ ಎಟಿಎಂ ಕಾರ್ಡ್ ತೆಗೆದುಕೊಂಡು ಗೊತ್ತಾಗದಂತೆ ಅದರ ಬದಲು ಬೇರೆ ಕಾರ್ಡ್ ಸ್ವೈಪ್ ಮಾಡಿ ಅದು ಕಾರ್ಯನಿರ್ವಹಿಸುತ್ತಿಲ್ಲ ಎಂದು ಹೇಳಿ ಸಾಗಹಾಕುತ್ತಿದ್ದ. ಬಳಿಕ ಎಟಿಎಂ ಕಾರ್ಡ್ ನಿಂದ ಹಣ ದೋಚುತ್ತಿದ್ದ ಎಂದು ಪೊಲೀಸರು ತಿಳಿಸಿರುವುದಾಗಿ ಪತ್ರಿಕೆಯೊಂದು ವರದಿ ಮಾಡಿದೆ.

ಬೇಗೂರು ಪೊಲೀಸರು ಎಟಿಎಂ ಕಿಯೋಸ್ಕ್‌ನ ಹೊರಗೆ ಕಾಯುತ್ತಿದ್ದಾಗಸಾಗರ್ ನನ್ನು ಬಂಧಿಸಿದ್ದಾರೆ. ಆತತಪ್ಪೊಪ್ಪಿಕೊಂಡಿದ್ದಾನೆ ಮತ್ತು ಆತನ ಬಳಿಯಿಂದ ಸದ್ಯ ಸ್ಥಗಿತಗೊಂಡಿರುವ 32 ಎಟಿಎಂ ಕಾರ್ಡ್‌ಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಸಾಗರ್ ಆಗಾಗ ಬೆಂಗಳೂರಿಗೆ ಬರುತ್ತಿದ್ದು, ಒಂದೆರಡು ದಿನ ಇಲ್ಲಿದ್ದು, ವಂಚನೆ ಕೃತ್ಯ ಎಸಗಿದ ಬಳಿಕ ಶಿವಮೊಗ್ಗಕ್ಕೆ ತೆರಳುತ್ತಿದ್ದ ಎಂದು ಪೊಲೀಸರು ತಿಳಿಸಿದ್ದಾರೆ. ಉಪ್ಪಾರಪೇಟೆ ಹಾಗೂ ಚಂದ್ರಾ ಲೇಔಟ್ ಪೊಲೀಸ್ ಠಾಣೆಗಳಲ್ಲಿ ದಾಖಲಾಗಿರುವ ಪ್ರಕರಣಗಳಲ್ಲೂ ಈತ ಶಾಮೀಲಾಗಿದ್ದಾನೆ.

ಮತ್ತೊಂದು ಘಟನೆಯಲ್ಲಿ ಸುಬ್ರಹ್ಮಣ್ಯಪುರ ಪೊಲೀಸರು ಎಟಿಎಂ ಬಳಕೆದಾರರನ್ನು ವಂಚಿಸಲು ಇದೇ ವಿಧಾನವನ್ನು ಬಳಸಿಕೊಂಡ ಇಬ್ಬರನ್ನು ಬಂಧಿಸಿದ್ದಾರೆ.

ಶಂಕಿತ ಆರೋಪಿಗಳಾದ ವಿವೇಕ್ ಕುಮಾರ್ (28) ಮತ್ತು ಚುನಿಲಾಲ್ ಕುಮಾರ್ (24) ಇಬ್ಬರೂ ಬಿಹಾರ ಮೂಲದವರಾಗಿದ್ದಾರೆ. ಅವರ ಬಳಿಯಿದ್ದ 37 ಎಟಿಎಂ ಕಾರ್ಡ್‌ಗಳನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ.

## ಪತಿ

ಇದೇ ತಿಂಗಳ 2ರಂದು ಆರೋಪಿ ತಬರೇಜ್ ತನ್ನ ಅತ್ತೆಯ ಮನೆಗೆ ನುಗ್ಗಿ ಅತ್ತೆಯ ಎದುರೇ ಪತ್ನಿಯನ್ನು ಹತ್ತಾರು ಭಾರೀ ಚಾಕುವಿನಿಂದ ಇರಿದು ಕೊಲೆ ಮಾಡಿದ್ದ. ಮನೆಗೆ ಬರುವ ಮುನ್ನ ಹಾಗೂ ಹತ್ಯೆ ವೇಳೆ ಫೇಸ್‌ಬುಕ್ ಲೈವ್ ಮಾಡಿ ಕೊಲೆ ಬಗ್ಗೆ ಲೈವ್ ನಲ್ಲೇ ವಿವರಿಸಿದ್ದ. ಇನ್ನು ಕೊಲೆ ಬಳಿಕ ಕೋಲಾರಕ್ಕೆ ಎಸ್ಕೇಪ್ ಆಗಿದ್ದ. ಈ ಘಟನೆ ಸಂಬಂಧ ಬೆಂಗಳೂರಿನ ಚಾಮರಾಜಪೇಟೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

ಆರೋಪಿ ತಬರೇಜ್ ಪಾಷಾ ಮೊಬೈಲ್ ಸ್ವಿಚ್ ಆಫ್ ಮಾಡಿ ಕೋಲಾರದ ಮಸೀದಿಯಲ್ಲಿ ನಾಲ್ಕು ದಿನ ಉಳಿದುಕೊಂಡಿದ್ದ. ನಿನ್ನೆ ಕೋಲಾರದ ಚಿಕ್ಕಮ್ಮನ ಮನೆಗೆ ತೆರಳಿದ್ದ. ಈ ವಿಚಾರ ತಿಳಿದ ಚಾಮರಾಜಪೇಟೆ ಪೊಲೀಸರ ತಂಡ ಕೋಲಾರಕ್ಕೆ ತೆರಳಿದ್ದು ಆರೋಪಿ ಬಂಧಿಸಲು ಸಜ್ಜಾಗಿತ್ತು. ಆರೋಪಿಯನ್ನು ಬಂಧಿಸಲು ಮನೆಗೆ ಎಂಟ್ರಿ ಕೊಟ್ಟಿದ್ದು ತಪ್ಪಿಸಿಕೊಳ್ಳೊ ಬರದಲ್ಲಿ ಮನೆಯ ಟೆರೇಸ್ ನಿಂದ ಜಿಗಿದ ಆರೋಪಿ ಮೃತಪಟ್ಟಿದ್ದಾನೆ.

ಟೆರೇಸ್ ನಿಂದ ಜಿಗಿದು ಮನೆಯ ಹಿಂಬದಿಯಿಂದ ಎಸ್ಕೇಪ್ ಆಗಲು ಯತ್ನಿಸಿದ ಆರೋಪಿ ತಬರೇಜ್, 12 ಅಡಿ ಎತ್ತರದಿಂದ ಬಿದ್ದ ಪರಿಣಾಮ ಅಸ್ವಸ್ಥನಾಗಿದ್ದ. ಆದರೆ ಆಸ್ಪತ್ರೆಗೆ ಸಾಗಿಸುವ ವೇಳೆ ಮೃತಪಟ್ಟಿದ್ದಾನೆ. ಎರಡು ವರ್ಷದ ಹಿಂದೆ ತಬರೇಜ್ ಬಿಟ್ಟು ಪತ್ನಿ ಸೈಯಿದಾ ಫಾಜೀಲ್ ಫಾತೀಮಾ ತನ್ನ ತಾಯಿ ಮನೆ ಸೇರಿದ್ದಳು. ಪತ್ನಿಗೆ ಪದೇ ಪದೇ ಮನೆಗೆ ಬರುವಂತೆ ಕಿರುಕುಳ ಕೊಡ್ತಿದ್ದನಂತೆ. ನಿರಾಕರಿಸಿದ್ದಕ್ಕೆ ಮನೆಗೆ ನುಗ್ಗಿ ಕೊಲೆ ಮಾಡಿದ್ದ. ಇನ್ನು ಆರೋಪಿ ತಬರೇಜ್ ಈ ಹಿಂದೆ ಕಾಟನ್ ಪೇಟೆಯ ಸರಗಳ್ಳತನ ಪ್ರಕರಣದಲ್ಲಿ ಆರೋಪಿಯಾಗಿದ್ದ.

### ದರ್ಶನ್‌ಗೆ ಮತ್ತಷ್ಟು ಸಂಕಷ್ಟ

# ಪ್ರಕರಣದ ವಿಚಾರಣೆಗೆ ವಿಶೇಷ ಕೋರ್ಟ್?

**ಬೆಂಗಳೂರು:** ರೇಣುಕಾ ಸ್ವಾಮಿ ಕೊಲೆ ನಡೆದು ಎರಡು ತಿಂಗಳು ಕಳೆಯುತ್ತಾ ಬಂದಿದೆ. ಈ ಪ್ರಕರಣದಲ್ಲಿ ದರ್ಶನ್, ಪವಿತ್ರಾ ಗೌಡ, ವಿನಯ್ ಸೇರಿ ಅನೇಕರು ಅರೆಸ್ಟ್ ಆಗಿದ್ದಾರೆ. ಎಲ್ಲರನ್ನೂ ನ್ಯಾಯಾಂಗ ಬಂಧನದಲ್ಲಿ ಇಡಲಾಗಿದೆ. ಶೀಘ್ರವೇ ಪೊಲೀಸರು ಪ್ರಾಥಮಿಕ ದೋಷಾರೋಪ ಪಟ್ಟಿ ಸಲ್ಲಿಕೆ ಮಾಡಲಿದ್ದಾರೆ. ಈ ಮಧ್ಯೆ ಪ್ರಕರಣದಲ್ಲಿ ತ್ವರಿತಗತಿಯಲ್ಲಿ ವಿಚಾರಣೆ ನಡೆಸಿ ಆರೋಪಿಗಳಿಗೆ ಶಿಕ್ಷೆ ಕೊಡಿಸಲು ಪೊಲೀಸರು ಹೊಸ ಯೋಜನೆ ರೂಪಿಸಿದ್ದಾರೆ. ಈ ಬಗ್ಗೆ ಸರ್ಕಾರಕ್ಕೆ ಮನವಿ ಮಾಡಲಾಗಿದೆ.



ಸಾಮಾನ್ಯ ಕೋರ್ಟ್‌ನಲ್ಲಿ ವಿಚಾರಣೆ ನಡೆಸುವುದಾದರೆ ಸಾಕಷ್ಟು ಸಮಯ ಹಿಡಿಯಲಿದೆ. ಹೀಗಾಗಿ, ತ್ವರಿತಗತಿಯಲ್ಲಿ ವಿಚಾರಣೆ ನಡೆಸಿ ಆರೋಪಿಗಳಿಗೆ ಶಿಕ್ಷೆ ಕೊಡಿಸಲು ಪ್ರತ್ಯೇಕ ಕೋರ್ಟ್‌ಗೆ ಪೊಲೀಸರು ಸರ್ಕಾರದ ಬಳಿ ಮನವಿ ಮಾಡಿದ್ದಾರೆ ಎಂದು ವರದಿ ಆಗಿದೆ. ಇದರಿಂದ ಆರೋಪಿಗಳಿಗೆ ಮತ್ತಷ್ಟು ಸಂಕಷ್ಟು ಎದುರಾಗುವ ಸಾಧ್ಯತೆ ಇದೆ.

ಫಾಸ್ಟ್‌ಟ್ರ್ಯಾಕ್ ನ್ಯಾಯಾಲಯಕ್ಕೆ ಅಥವಾ ಸ್ಪೆಷಲ್ ಕೋರ್ಟ್ ಬೇಕು ಎಂದು ಪೊಲೀಸರು ಮನವಿ ಮಾಡಿದ್ದಾರೆ. ಪ್ರತ್ಯೇಕ ಕೋರ್ಟ್ ವಿಚಾರವಾಗಿ ಸರ್ಕಾರ ಯಾವ ರೀತಿಯ ನಿರ್ಧಾರ ತೆಗೆದುಕೊಳ್ಳುತ್ತದೆ ಎನ್ನುವ ಕುತೂಹಲ ಮೂಡಿದೆ.

ರೇಣುಕಾಸ್ವಾಮಿ ಕೊಲೆ ಪ್ರಕರಣದ ತನಿಖೆ ಇನ್ನೂ ಮುಗಿದಿಲ್ಲ. ಪೊಲೀಸರು ಕೆಲವು ಪ್ರಮುಖ ಸಾಕ್ಷಿಗಳನ್ನು ಕಲೆ ಹಾಕುತ್ತಿದ್ದಾರೆ. ತನಿಖೆ ಮುಗಿಸಿದ ಬಳಿಕ ಚಾರ್ಜ್‌ಶೀಟ್ ಸಲ್ಲಿಕೆ ಆಗಲಿದೆ. ಚಾರ್ಜ್‌ಶೀಟ್ ಸಲ್ಲಿಸಿದ ನಂತರ ಸ್ಪೆಷಲ್ ಕೋರ್ಟ್ ಬಗ್ಗೆ ಸರ್ಕಾರ ನಿರ್ಧಾರ ತೆಗೆದುಕೊಳ್ಳುವ ಸಾಧ್ಯತೆ ಇದೆ. ಚಾರ್ಜ್‌ಶೀಟ್ ಸಲ್ಲಿಕೆ ಮಾಡಿದ ನಂತರ ಮತ್ತೆ ಸರ್ಕಾರದ ಎದುರು ಮನವಿ ಮಾಡಲು ಪೊಲೀಸರು ಮುಂದಾಗಿದ್ದಾರೆ. ಈ ತಿಂಗಳ ಅಂತ್ಯದೊಳಗೆ ಚಾರ್ಜ್‌ಶೀಟ್ ಸಲ್ಲಿಸಲು ಪೊಲೀಸರ ಸಿದ್ಧತೆ ಮಾಡಿಕೊಂಡಿದ್ದಾರೆ.

# ಮಧ್ಯರಾತ್ರಿ 1 ಗಂಟೆ ವರೆಗೂ ಮದ್ಯ ಮಾರಾಟಕ್ಕೆ ಅವಕಾಶ

**ಬೆಂಗಳೂರು:** ರಾಜ್ಯ ಅಬಕಾರಿ ಇಲಾಖೆಯಲ್ಲಿ ಬಹಳಷ್ಟು ಬೆಳವಣಿಗೆಗಳಾಗುತ್ತಿವೆ. ಇತ್ತೀಚೆಗೆ ಸ್ಕಾಚ್‌ಗಳ ಬೆಲೆಯಲ್ಲಿ ಭಾರಿ ಇಳಿಕೆ ಮಾಡುವ ಬಗ್ಗೆ ಅಬಕಾರಿ ಇಲಾಖೆ ಮಾಹಿತಿ ನೀಡಿತ್ತು. ಇದೀಗ ಮದ್ಯ ಪ್ರಿಯರಿಗೆ ಮತ್ತೊಂದು ಸಿಹಿ ಸುದ್ದಿ ನೀಡಿದೆ. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ಬಾರ್, ಹೋಟೆಲ್, ಕ್ಲಬ್, ಸ್ಟಾರ್ ಹೋಟೆಲ್ ಗಳು ಮತ್ತು ಬೋರ್ಡಿಂಗ್ ಹೌಸ್‌ಗಳಲ್ಲಿ ಮಧ್ಯರಾತ್ರಿ 1 ಗಂಟೆವರೆಗೆ ಮದ್ಯ ಮಾರಾಟಕ್ಕೆ ರಾಜ್ಯ ಸರ್ಕಾರ ಅವಕಾಶ ನೀಡಿದೆ.

ವ್ಯಾಪಾರ, ವಾಹಿವಾಟು ಸುಧಾರಿಸುವ ಉದ್ದೇಶದಿಂದ ಬಿಬಿಎಂಪಿ ವ್ಯಾಪ್ತಿಯ ಬಾರ್, ಕ್ಲಬ್ ಸೇರಿದಂತೆ ಇತರ ವ್ಯಾಪಾರ ಸಂಸ್ಥೆಗಳಲ್ಲಿ ಮಧ್ಯರಾತ್ರಿ 1 ಗಂಟೆಯವರೆಗೆ ತೆರೆದಿರಲು ಅನುಮತಿ ನೀಡಲಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಫೆಬ್ರವರಿಯಲ್ಲಿ ನಡೆದ 2024?25ನೇ ಸಾಲಿನ ಬಜೆಟ್ ಭಾಷಣೆಯಲ್ಲಿ ಈ ಬಗ್ಗೆ ಘೋಷಿಸಿದ್ದರು. ಅದರಂತೆ ಈ ಪ್ರಸ್ತಾವನೆಗೆ ಆರ್ಥಿಕ ಇಲಾಖೆ ಒಪ್ಪಿಗೆ ನೀಡಿರುವ ಹಿನ್ನೆಲೆಯಲ್ಲಿ ನಿರ್ಬಂಧವನ್ನು ವಿಸ್ತರಿಸಲಾಗಿದೆ ಎಂದು ಜುಲೈ 29ರಂದೇ ನಗರಾಭಿವೃದ್ಧಿ ಇಲಾಖೆ ಆದೇಶ ಹೊರಡಿಸಿದೆ.

ಬಿಬಿಎಂಪಿ ಮಿತಿಯಲ್ಲಿರುವ ಮದ್ಯ ವ್ಯಾಪಾರ ಸಂಸ್ಥೆಗಳಿಗೆ ಮಾತ್ರ ಈ ಆದೇಶ ಅನ್ವಯಿಸಲಿದೆ. ಈ ನಿರ್ಧಾರ ರಾಜ್ಯ ಸರ್ಕಾರಕ್ಕೆ ತನ್ನ ಆದಾಯವನ್ನು ಸುಧಾರಿಸಲು ಸಹಾಯ ಮಾಡುತ್ತದೆ. ನಗರದ ಹೋಟೆಲ್‌ಗಳು ಮತ್ತು ರೆಸ್ಟೋರೆಂಟ್‌ಗಳು ದಿನದ 24 ಗಂಟೆಯೂ ಕಾರ್ಯನಿರ್ವಹಿಸಲು ಅವಕಾಶ ನೀಡಬೇಕೆಂದು ಒತ್ತಾಯಿಸುತ್ತಿರುವ ಬೃಹತ್ ಬೆಂಗಳೂರು ಹೋಟೆಲ್‌ಗಳ ಸಂಘ, ಸರ್ಕಾರದ ನಿರ್ಧಾರವನ್ನು ಸ್ವಾಗತಿಸಿದೆ. ಇನ್ನು ಬಿಬಿಎಚ್‌ಎ ಅಧ್ಯಕ್ಷ ಪಿಸಿ ರಾವ್ ಮಾತನಾಡಿ, ವ್ಯಾಪಾರ ಸಮಯವನ್ನು 1 ಗಂಟೆಗೆ ವಿಸ್ತರಿಸಿರುವುದು ಸ್ವಾಗತಾರ್ಹ ಕ್ರಮವಾಗಿದೆ. ಇದರಿಂದ ಬೆಂಗಳೂರಿನ ಜನತೆಗೆ ಹೆಚ್ಚಿನ ಅನುಕೂಲವಾಗಲಿದೆ. ಈ ನಿರ್ಧಾರದಿಂದ ಹೆಚ್ಚಿನ ಉದ್ಯೋಗ ಸೃಷ್ಟಿಗೂ ಕಾರಣವಾಗಲಿದೆ. ಬಿಬಿಎಂಪಿ ವ್ಯಾಪ್ತಿಯಲ್ಲಿ ಮಾತ್ರ ಎಲ್ಲಾ ಬಾರ್ ಮತ್ತು ರೆಸ್ಟೋರೆಂಟ್‌ಗಳು ಮಧ್ಯರಾತ್ರಿ 1 ಗಂಟೆಯವರೆಗೆ ತೆರೆದಿರಲು ಅವಕಾಶ ನೀಡಲಾಗಿದೆ ಎಂದು ತಿಳಿಸಿದರು.

# 2017ರ ಹೊಸ ವೃಂದ, ನೇಮಕಾತಿ ನಿಯಮಗಳ ತಿದ್ದುಪಡಿಗೆ ಒತ್ತಾಯ

**ಚಾಮರಾಜನಗರ:** ಚಾಮರಾಜನಗರ ತಾಲ್ಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದಿಂದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇಢರಿಯ ಮುಂಭಾಗದಲ್ಲಿ ತಾಲ್ಲೂಕಿನ ಶಿಕ್ಷಕರು ಪ್ರತಿಭಟನೆ ಸೋಮವಾರ ನಡೆಸಿದರು. ಪ್ರತಿಭಟನೆಯಲ್ಲಿ ಮೆರವಣಿಗೆಯ ಮೂಲಕ ತಹಸಿಲ್ದಾರ್ ಕಚೇರಿಗೆ ತೆರಳಿ ಮನವಿ ಸಲ್ಲಿಸಿದರು.



2017ರ ಹೊಸ ವೃಂದ ಮತ್ತು ನೇಮಕಾತಿ ನಿಯಮಗಳನ್ನು 2016ಕ್ಕಿಂತ ಮೊದಲು ನೇಮಕಾತಿಯಾದವರಿಗೆ ಪೂರ್ವಾನ್ವಯಗೊಳಿಸಬಾರದು ಹಾಗೂ ಇದರಿಂದ ಪ್ರಾಥಮಿಕ ಶಾಲಾ ಸೇವಾನಿರತ ಶಿಕ್ಷಕರಿಗಾಗಿರುವ ಅನ್ಯಾಯವನ್ನು ಸರಿಪಡಿಸುವ ಬೇಕು, ಪದವಿ ಪೂರೈಸಿದ ಶಿಕ್ಷಕರನ್ನು ಸೇವಾ ಜೇಷತೆಯೊಂದಿಗೆ ಪದವೀಧರ ಶಿಕ್ಷಕರೆಂದು ಪದನಾಮೀಕರಿಸುಬೇಕು. ಅರ್ಹ ಪ್ರಾಥಮಿಕ ಶಾಲಾ ಶಿಕ್ಷಕರಿಗೆ 2016ರ ಪೂರ್ವದಂತೆ ಅರ್ಹತೆಯ ಆಧಾರದ ಮೇಲೆ ಪ್ರೌಢ ಶಾಲೆಗೆ ಬಡ್ತಿ ನೀಡಬೇಕು, ಪ್ರಾಥಮಿಕ ಶಾಲಾ ಶಿಕ್ಷಕರಿಗೆ 2016ರ ಪೂರ್ವದಂತೆ ಮುಖ್ಯಗುರುಗಳ ಹಾಗೂ ಹಿರಿಯ ಮುಖ್ಯ ಗುರುಗಳ ಹುದ್ದೆಗೆ ಸೇವಾ ಜೇ?ಠತೆಯ ಆಧಾರದ ಮೇಲೆ ಬಡ್ತಿ ನೀಡಬೇಕು. ಎಂದು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಚಾಮರಾಜನಗರ ತಾಲ್ಲೂಕು ಅಧ್ಯಕ್ಷ ಸಿ.ಕೆ.ರಾಮಸ್ವಾಮಿ ತಿಳಿಸಿದರು

ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾ ಕಾರ್ಯದರ್ಶಿ ಮಹದೇವಸ್ವಾಮಿ ಪ್ರತಿಭಟನೆಯಲ್ಲಿ ಮಾತನಾಡುತ್ತ ರಾಷ್ಟ್ರೀಯ ಶಿಕ್ಷಣ ನೀತಿಯ ಶಿಫಾರಸ್ಸುಗಳಿಗೆ ಅನುಕೂಲವಾಗುವಂತೆ ರಾಜ್ಯದ ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಯ ಪದನಾಮವನ್ನು ಬದಲಾಯಿಸಿ, ಹೊಸ ವೃಂದ ಹಾಗೂ ವೃಂದ ಬಲವನ್ನು ನಿರ್ಧರಿಸುವ ಕುರಿತು ವಿಶೇ? ರಾಜ್ಯ 9 20170 ಪತ್ರವನ್ನು ಪಕ್ಷ ಸ್ವಂಮೆ ಕರಿರಾಕ್ಷಕರು 1 ರಿಂದ 5ಕ್ಕೆ 1,12,467 ಹಾಗೂ ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರು ಪತ್ರವನ್ನು ಪತ್ರ ಸಂಖ್ಯೆ:434ದಿನಾಂಕ:20-05-2017 ರಂದು ಹೊರಡಿಸಿದ ಪ್ರಾಥಮಿಕ ಶಾಲಾ ಸಹ ಶಿಕ್ಷಕ ವೃಂದವನ್ನು 6 ರಿಂದ 8ಕ್ಕೆ 51,781 ಎಂದು ವೃಂದವಾರು ಹುದ್ದೆಗಳನ್ನು ಮಂಜೂರಿಸಿ ಆದೇಶಿಸಿದೆ. ತತ್ಪರಿಣಾಮವಾಗಿ 2016ಕ್ಕಿಂತ ಮೊದಲು 1 ರಿಂದ 7, 1 ರಿಂದ 8 ವೃಂದಕ್ಕೆ ನೇಮಕಾತಿಯಾದ ಎಲ್ಲಾ ಸಹ ಶಿಕ್ಷಕರು ಪ್ರಾಥಮಿಕ ಶಾಲಾ ಶಿಕ್ಷಕರು 1ರಿಂದ 5ಎಂದು ಪರಿಗಣಿಸಿದ್ದು, ಶಿಕ್ಷಕರಿಗೆ ತೀವ್ರ ಅನ್ಯಾಯವಾಗಿದೆ ಎಂದು ಹೇಳಿದರು. ಜಿಲ್ಲಾ ಮಟ್ಟದಲ್ಲಿ ಆಗಷ್ಟ್ 07 ರಂದು ಹಾಗೂ ರಾಜ್ಯ ಮಟ್ಟದಲ್ಲಿ 12 ರಂದು ಪ್ರತಿಭಟನೆ ನಡೆಸಲಾಗುವುದು ಎಂದು ತಿಳಿಸಿದರು.

ಜಿಲ್ಲಾಧ್ಯಕ್ಷ ಕೆ.ಎಸ್.ಮಾದಪ್ಪ ಪದಾಧಿಕಾರಿಗಳಾದ ಮಹದೇವಸ್ವಾಮಿ, ಗೀತಾ, ಶಶಿಕಲಾ, ಎಂ.ಡಿ.ಮಹದೇವಯ್ಯ, ಸುಧಾ. ಎನ್, ಬಿ.ಕೃಷ್ಣಮೂರ್ತಿ ಸಿ.ಮಹದೇವಸ್ವಾಮಿ. ಸವಿತಾರಾಣಿ, ಮಂಜುಳ, ಮುರುಗೇಶ್ ಕುಮಾರ್.ಸಿ.ಎಂ, ಎಸ್.ಜಿ.ರಾಜು, ರಾಚಯ್ಯ, ಸುಶೀಲ, ಸಿ.ಮಲ್ಲಿಕಾರ್ಜುನ, ನಟರಾಜು, ಸಿದ್ದಲಿಂಗಮೂರ್ತಿ, ಶಿವಕುಮಾರ.ಎಂ, ಶಭಾನಅಂಜುಮ್, ಸುನಿತಮ್ಮ, ನಂದೀಶ, ಕೆ,ಸಿ,ಚಂದ್ರು, ಸಿ.ಕೆ.ವಾಸು ಹಾಗೂ ಶಿಕ್ಷಣ ಇಲಾಖೆಯ ಹಲವಾರು ಸಂಘ ಸಂಸ್ಥೆಯ ಪದಾಧಿಕಾರಿಗಳು ಹಾಜರಿದ್ದರು.

## ಸೋಲಾರ್ ಪ್ಯಾನೆಲ್ ವಿಲೇವಾರಿಗೆ ಹೆಚ್‌ಡಿ ಸಲಹೆ

**ನವದೆಹಲಿ:** ಸೋಲಾರ್ ಪ್ಯಾನೆಲ್‌ಗಳ ವಿಲೇವಾರಿಗೆ ವೈಜ್ಞಾನಿಕ ನೀತಿ ರೂಪಿಸಬೇಕು ಎಂದು ಮಾಜಿ ಪ್ರಧಾನಿ ಹೆಚ್ .ಡಿ.ದೇವೇಗೌಡರು ಸಲಹೆ ಮಾಡಿದ್ದಾರೆ. ರಾಜ್ಯಸಭೆಯಲ್ಲಿ ಹೊಸ ಮತ್ತು ನವೀಕರಿಸಬಹುದಾದ ಇಂಧನ ಸಚಿವಾಲಯದ ಮೇಲಿನ ಚರ್ಚೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಸೋಲಾರ್ ಪ್ಯಾನೆಲ್ಗಳ ವಿಲೇವಾರಿಯಲ್ಲಿ ನಾವು ಅತ್ಯಂತ ಎಚ್ಚರಿಕೆ ವಹಿಸಬೇಕು. ಇಲ್ಲದಿದ್ದರೆ ಭವಿಷ್ಯದಲ್ಲಿ ಗಂಭೀರ ಸಮಸ್ಯೆ ಎದುರಿಸಬೇಕಾಗುತ್ತದೆ ಎಂದು ಹೇಳಿದ್ದಾರೆ. ಸೋಲಾರ್ ಪ್ಯಾನೆಲ್‌ಗಳನ್ನು 25 ವರ್ಷಗಳ ಬಳಿಕ ವಿಲೇವಾರಿ ಮಾಡಲೇಬೇಕಾಗುತ್ತದೆ. ಅವುಗಳನ್ನು ವಿಲೇವಾರಿ ಮಾಡುವ ಬಗ್ಗೆ ನಮ್ಮ ದೇಶದಲ್ಲಿ ಯಾವುದೇ ರೀತಿಯ ವೈಜ್ಞಾನಿಕ ನೀತಿ ಇರುವುದಿಲ್ಲ ಎಂದು ಅವರು ತಿಳಿಸಿದ್ದಾರೆ. ಪರಿಸರ ಸಂರಕ್ಷಣೆ ಮಾಡಿಕೊಳ್ಳುವ ಜವಾಬ್ದಾರಿ ನಮ ಮೇಲೆ ಇದೆ. ನವೀಕರಿಸಬಹುದಾದ ಇಂಧನ ಶಕ್ತಿಯಿಂದ ನಮ್ಮ ಪರಿಸರ ಹಾಗೂ ಜೀವ ವೈವಿಧ್ಯದ ಮೇಲೆ ಉಂಟಾಗುವ ದುಷ್ಪರಿಣಾಮದ ಬಗ್ಗೆಯೂ ಅತ್ಯಂತ ಮುನ್ನೆಚ್ಚರಿಕೆ ವಹಿಸಬೇಕು. ಸೋಲಾರ್ ಪ್ಯಾನೆಲ್ಗಳನ್ನು ಇದೀಗ ಕೃಷಿ, ಪರಿಸರ ಸೂಕ್ಷ್ಮ ಪ್ರದೇಶದಲ್ಲಿ ಅಳವಡಿಸಲಾಗುತ್ತಿದೆ. ಭವಿಷ್ಯದಲ್ಲಿ ಇವುಗಳನ್ನು ಕೃಷಿ ಯೋಗ್ಯವಲ್ಲದ ಪ್ರದೇಶಗಳಲ್ಲಿ ಅಳವಡಿಸಲು ಯೋಜನೆಗಳನ್ನು ರೂಪಿಸಬೇಕು ಎನ್ನುವುದು ನನ್ನ ಕಳಕಳಿಯ ಸಲಹೆಯಾಗಿದೆ ಎಂದು ಅವರು ಒತ್ತಿ ಹೇಳಿದ್ದಾರೆ. ನವೀಕರಿಸಬಹುದಾದ ಇಂಧನ ಶಕ್ತಿಗಳ ಕ್ಷೇತ್ರವನ್ನು ಕರ್ನಾಟಕವೂ ಸೇರಿ ಹಲವಾರು ರಾಜ್ಯಗಳು ಕಡೆಗಣಿಸುತ್ತಿವೆ. ಹಿಂದೆ ಕರ್ನಾಟಕ ರಾಜ್ಯವು ನವೀಕರಿಸಬಹುದಾದ ಇಂಧನ ಕ್ಷೇತ್ರದಲ್ಲಿ ಇಡೀ ದೇಶಕ್ಕೆ ನಾಯಕತ್ವ ನೀಡಿತ್ತು. ಈ ಕ್ಷೇತ್ರದಲ್ಲಿ ಗಣನೀಯ ದಾಪು ಗಾಲು ಇರಿಸಿತ್ತು. ಆದರೆ ಕೆಲ ವರ್ಷಗಳಿಂದ ಕರ್ನಾಟಕದಲ್ಲಿ ಈ ಕ್ಷೇತ್ರ ಗಣನೀಯವಾಗಿ ಹಿನ್ನಡೆ ಅನುಭವಿಸಿದೆ ಎಂದು ಅವರು ನುಡಿದಿದ್ದಾರೆ. ನಮ ದೇಶದಲ್ಲಿ ನವೀಕರಿಸಬಹುದಾದ ಇಂಧನ ಕ್ಷೇತ್ರದ ಬೆಳವಣಿಗೆ ಪ್ರಮಾಣ ಶೇ. 14ರಷ್ಟು ಇದ್ದು, ಕರ್ನಾಟಕ ರಾಜ್ಯದಲ್ಲಿ ಆ ಪ್ರಮಾಣ ಶೇ.2.58ರಷ್ಟು ಇದೆ. ಈ ಸಂದರ್ಭದಲ್ಲಿ ಈ ಕ್ಷೇತ್ರದ ಬೆಳವಣಿಗೆಯ ದರ ಕುಂಠಿತವಾಗಿರುವ ಬಗ್ಗೆ ಎಲ್ಲರೂ ಗಂಭೀರ ಚಿಂತನೆ ನಡೆಸಬೇಕು.ಈ ಕ್ಷೇತ್ರದಲ್ಲಿ ಉಂಟಾಗುವ ತ್ಯಾಜ್ಯ ವಸ್ತುಗಳ ಬಗ್ಗೆಯೂ ಗಮನ ಹರಿಸಬೇಕು ಎಂದು ಅವರು ಸಲಹೆ ಮಾಡಿದ್ದಾರೆ.



# ನಾಳೆವರೆಗೆ ರೈಲು ಸಂಚಾರ ರದ್ದು

**ಬೆಂಗಳೂರು:** ಪಶ್ಚಿಮ ಘಟ್ಟದಲ್ಲಿ ಮಳೆಯಾಗುತ್ತಿರುವ ಪರಿಣಾಮ ಭೂಕುಸಿತ ಉಂಟಾಗಿ ಎಡಕುಮರಿ- ಕಡಗವಳ್ಳಿ ರೈಲ್ವೆ ಮಾರ್ಗ ದುರಸ್ತಿ ಕಾರ್ಯ ಪೂರ್ಣಗೊಳ್ಳದ ಹಿನ್ನೆಲೆಯಲ್ಲಿ ಆ. 8ರವರೆಗೆ 12 ರೈಲುಗಳ ಸಂಚಾರವನ್ನು ಸಂಪೂರ್ಣವಾಗಿ ರದ್ದು ಮಾಡಲಾಗಿದೆ.

ಕರಾವಳಿ ಮತ್ತು ಮಲೆನಾಡು ಭಾಗದಲ್ಲಿ ಭಾರೀ ಮಳೆಯಿಂದಾಗಿ ಭೂಕುಸಿತ ಉಂಟಾಗಿತ್ತು. ಎಡಕುಮರಿ ಕಡಗವಳ್ಳಿ ರೈಲ್ವೆ ಮಾರ್ಗದಲ್ಲಿ ಭೂಕುಸಿತ ಉಂಟಾಗಿದ್ದರಿಂದ ಬೆಂಗಳೂರು- ಮಂಗಳೂರು ಮಧ್ಯೆ ರೈಲು ಸಂಚಾರವನ್ನು ರದ್ದುಗೊಳಿಸಲಾಗಿತ್ತು.

ಈ ಮಾರ್ಗದಲ್ಲಿ ದುರಸ್ತಿ ಕಾರ್ಯ ನಡೆಯುತ್ತಿತ್ತು. ಅದು ಪೂರ್ಣಗೊಳ್ಳದ ಹಿನ್ನೆಲೆಯಲ್ಲಿ ಆ.8ರವರೆಗೆ 12 ರೈಲುಗಳ ಸಂಚಾರವನ್ನು ರದ್ದು ಮಾಡಲಾಗಿದೆ. ಕೆಎಸ್‌ಆರ್ ಬೆಂಗಳೂರು- ಕಾರವಾರ ಎಕ್ಸ್ ಪ್ರೆಸ್ ರೈಲು ಸಂಚಾರ ಆ.7ರವರೆಗೆ ರದ್ದಾಗಲಿದೆ.

ಕಾರವಾರ ಕೆಎಸ್‌ಆರ್ ಬೆಂಗಳೂರು ಎಕ್ಸ್ ಪ್ರೆಸ್- ಕಾರವಾರ ಮಡಗಾಂವ್, ಮಡಗಾಂವ್- ಕಾರವಾರ ವಿಶೇಷ ರೈಲಿನ ಸಂಚಾರವನ್ನು ಆ.8ರ ವರೆಗೆ ರದ್ದು ಮಾಡಲಾಗಿದೆ. ಸರ್.ಎಂ. ವಿಶ್ವೇಶ್ವರಯ್ಯ- ಮುರ್ಡೇಶ್ವರ ಎಕ್ಸ್ ಪ್ರೆಸ್, ಯಶವಂತಪುರ- ಕಾರವಾರ ಎಕ್ಸ್ ಪ್ರೆಸ್ ರೈಲುಗಳ ಸಂಚಾರವನ್ನು ಆ. 8ರವರೆಗೆ ಸಂಪೂರ್ಣವಾಗಿ ರದ್ದು ಮಾಡಲಾಗಿದೆ.

ಕಳೆದ ವಾರ ಸುರಿದ ಭಾರೀ ಮಳೆಗೆ ದೋಣಿ ಹಗಲ್ ರೈಲು ಮಾರ್ಗದಲ್ಲಿ ಭೂಕುಸಿತ ಉಂಟಾಗಿ ರೈಲು ಸಂಚಾರ ಸ್ಥಗಿತ ಉಂಟಾಗಿತ್ತು. ಇದೀಗ ಭೂಕುಸಿತದ ಸ್ಥಳದಲ್ಲಿ ತಡೆಗೋಡೆ ಕಾಮಗಾರಿ ಪೂರ್ಣಗೊಂಡಿದ್ದು, ಹಳಿ ಮರುಸ್ಥಾಪನೆ ಕಾರ್ಯ ಬಹುತೇಕ ಪೂರ್ಣಗೊಂಡಿವೆ. ಪ್ರಾಯೋಗಿಕವಾಗಿ ಗೂಡ್ಸ್ ರೈಲು ಸಂಚಾರಕ್ಕೆ ಅವಕಾಶ ನೀಡಲಾಗಿದ್ದು, ದುರಸ್ಥಿ ಕಾರ್ಯ ನಡೆಯುತ್ತಿರುವ ಸ್ಥಳ ಹಾಗೂ ಆಸುಪಾಸಿನಲ್ಲಿ 15 ಕಿಲೋ ಮೀಟರ್ ವೇಗದಲ್ಲಿ ಗೂಡ್ಸ್ ರೈಲಿನ ಪ್ರಾಯೋಗಿಕ ಓಡಾಟಕ್ಕೆ ಅನುಮತಿ ನೀಡಲಾಗಿದೆ. ಆದರೆ ಪ್ರಯಾಣಿಕರ ರೈಲು ಸಂಚಾರಕ್ಕೆ ಇನ್ನೂ ಅವಕಾಶ ನೀಡಿಲ್ಲ. ಆ. 8ರವರೆಗೆ ಬೆಂಗಳೂರು- ಮಂಗಳೂರು ಮಧ್ಯೆ ರೈಲ್ವೇ ಸಂಚಾರ ರದ್ದುಗೊಳಿಸಿದ್ದು, ಆ. 8ರ ನಂತರ ಪ್ರಯಾಣಿಕರ ರೈಲು ಸಂಚಾರಕ್ಕೆ ಅವಕಾಶ ಸಿಗುವ ಸಾಧ್ಯತೆ ಇದೆ.



### ಚುನಾವಣೆ ಸುಧಾರಣೆ ಬಗ್ಗೆ ಯಾರೂ ಮಾತನಾಡುತ್ತಿಲ್ಲ: ರಮೇಶ್‌ಕುಮಾರ್

# ಎಂಪಿ ಸೀಟುಗಳ ರೇಟ್ ಹೆಚ್ಚಳ

**ಮೈಸೂರು:** ಮೆಡಿಕಲ್, ಇಂಜಿನಿಯರಿಂಗ್ ಸೀಟುಗಳ ರೇಟು ಹೆಚ್ಚಾದಂತೆ ಲೋಕಸಭೆಯ ಸೀಟುಗಳ ರೇಟ್ ಹೆಚ್ಚಾಗಿದೆ. ಯಾರಾದರೂ ಚುನಾವಣೆ ಸುಧಾರಣೆ ಬಗ್ಗೆ ಮಾತಾಡಿದ್ದಾರೆಯೇ ಎಂದು ಮಾಜಿ ಸಭಾಪತಿ ಕೆ.ಆರ್. ರಮೇಶ್‌ಕುಮಾರ್ ವಿಷಾದ ವ್ಯಕ್ತಪಡಿಸಿದರು.



ಮಾನಸಗಂಗೋತ್ರಿಯ ವಿಶ್ವಜ್ಞಾನಿ ಸಭಾಂಗಣದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಸಂಶೋಧನ ಹಾಗೂ ವಿಸ್ತರಣ ಕೇಂದ್ರ, ಬಿ.ಆರ್. ಅಂಬೇಡ್ಕರ್ ಎಜುಕೇಷನಲ್ ಅಂಡ್ ಕಲ್ಚರಲ್ ಟ್ರಸ್ಟ್, ಸಮಾನತೆ, ಸ್ವಾಭಿಮಾನ, ಸ್ವಾವಲಂಬನೆ ಪ್ರತಿಷ್ಠಾನ, ಸಮಾನತೆ ಪ್ರಕಾಶ ಸಹಯೋಗದಲ್ಲಿ ಮಂಗಳವಾರ ಆಯೋಜಿಸಿದ್ದ ವಿ.ಶ್ರೀನಿವಾಸಪ್ರಸಾದ್ 77ನೇ ಜನ್ಮ ದಿನಾಚರಣೆ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಹಿಂದೆ ಠೇವಣಿ ಕಟ್ಟಲು ಹಣ ಇಲ್ಲದವರನ್ನು ಜನರು ಪಾರ್ಲಿಮೆಂಟಿಗೆ ಕಳುಹಿಸುತ್ತಿದ್ದರು. ಈಗ ಒಂದು ಪಕ್ಷ ಶ್ರೀಮಂತ ವ್ಯಕ್ತಿಯನ್ನು ಅಭ್ಯರ್ಥಿಯನ್ನಾಗಿಸಿದರೆ ಉಳಿದ ಪಕ್ಷಗಳು ಶ್ರೀಮಂತರನ್ನೇ ಕಣಕ್ಕಿಳಿಸುತ್ತವೆ. ಉದ್ಯಮಿಗಳಾದವರು ಮತಗಳನ್ನು ಖರೀದಿ ಮಾಡುತ್ತಾರೆ. ಹಣವಿಲ್ಲದವರು ಚುನಾವಣೆಗೆ ಸ್ಪರ್ಧಿಸಲಾಗದ ಸ್ಥಿತಿಗೆ ತಲುಪಿದ್ದೇವೆ ಎಂದರು.

ಮೌಲ್ಯಗಳನ್ನು ಬೆಂಬಲಿಸುವ ಜನರು ಅಸಂಘಟಿತರಾಗಿದ್ದಾರೆ. ಭ್ರಷ್ಟಾಚಾರ ಮತ್ತು ಚುನಾವಣೆ ಪ್ರತ್ಯೇಕವಾದ ವಿಚಾರ ಅಲ್ಲ. ಚುನಾವಣಾ ರಾಜಕಾರಣದ ತೊಡಕುಗಳನ್ನು ಸೂಕ್ಷ್ಮವಾಗಿ ಪರಿಶೀಲಿಸಿ ಸರಿಪಡಿಸಬೇಕಿದೆ ಎಂದು ಅಭಿಪ್ರಾಯಪಟ್ಟರು.

ಕೋಗಿಲೆ, ಕಾಗೆಯನ್ನು ಬಿಡದ ನಾವುಗಳು ಮನುಷ್ಯರನ್ನು ಬಿಡುತ್ತೇವೆಯೇ ಇವತ್ತಿಗೂ ಈ ದೇಶದಲ್ಲಿ ದಲಿತೇತರರಿಗೆ ಅಂಬೇಡ್ಕರ್ ಯಾಕೆ ಪರಿಚಯವಾಗುತ್ತಿಲ್ಲ. ಅಂಬೇಡ್ಕರ್ ಹೆಸರಲ್ಲಿ ವೃತ್ತಿ ಮಾಡಿಕೊಳ್ಳುವುದನ್ನು ನಿಲ್ಲಿಸಬೇಕು. ಸಂವಿಧಾನ ಕೊಟ್ಟ ಅಧಿಕಾರವನ್ನು ಮರ್ಜಿಗೆ ಬಳಸುವುದಾದರೆ ಸಂವಿಧಾನದ ಹೆಸರಲ್ಲಿ ಯಾಕೆ ಪ್ರತಿಜ್ಞೆ ಸ್ವೀಕರಿಸಬೇಕು ಎಂದು ಹೇಳಿದರು.

ಅಂದಿನಿಂದ ಇಂದಿಗೆ ಹಿಂದಕ್ಕೆ ಚಲಿಸುತ್ತಿದ್ದೇವೆ. ನಮಗೇ ಎಲ್ಲ ಸೌಕರ್ಯಗಳು ಸಿಕ್ಕಿವೆ. ಮನುಷ್ಯರಾಗಿದ್ದೇವೆಯೇ ಪೂನಾ ಒಪ್ಪಂದದ ಬಳಿಕ ಈ ದೇಶದಲ್ಲಿ ಎಷ್ಟು ಸುಧಾರಿಸಿದ್ದೇವೆ. ನಮ್ಮನ್ನು ಪ್ರಶ್ನಿಸಿಕೊಂಡರೆ ನಿರಾಸೆ ಮೂಡುತ್ತದೆ ಎಂದರು.

ಸ್ವಾಭಿಮಾನ ಪ್ರಚಾರದ ವಸ್ತುವಲ್ಲ, ಅದು ನಿಷ್ಠೆಯ ವಿಚಾರ. ಅಂಬೇಡ್ಕರ್ ಅವರು ವ್ಯಕ್ತಿಗತವಾದ ಅವಮಾನವನ್ನು ಸ್ವಾಭಿಮಾನ, ಛಲದಿಂದ ಎದುರಿಸಿದರು. ಸಂವಿಧಾನ ತಿದ್ದುಪಡಿಗೆ ರೂಪಿಸಿರುವ ನಿಯಾಮವಳಿಗಳು ಭಾರತದಲ್ಲಿ ಮತ್ತೊಂದು ನಾಗರಿಕ ಯುದ್ಧವಾಗುವುದನ್ನು ತಪ್ಪಿಸಿದೆ ಎಂದು ತಿಳಿಸಿದರು. ಸಮಾಜ ಕಲ್ಯಾಣ ಸಚಿವ ಡಾ. ಚ್.ಸಿ.ಮಹದೇವಪ್ಪ ಸಮಾರಂಭ ಉದ್ಘಾಟಿಸಿ ಮಾತನಾಡಿ, ವಿ.ಶ್ರೀನಿವಾಸಪ್ರಸಾದ್ ಶ್ರೇಷ್ಠವಾದ ಸಾಂಸ್ಕೃತಿಕ ಮತ್ತು ಗುಣಾತ್ಮಕ ನಾಯಕ. 5 ದಶಕಗಳ ರಾಜಕೀಯ ಜೀವನದಲ್ಲಿ ಕಪ್ಪುಚುಕ್ಕೆ ಇಲ್ಲದಂತೆ ಸ್ವಚ್ಛವಾದ ಸಾರ್ವಜನಿಕ ಬದುಕು ನಿರ್ವಹಿಸಿದವರು ಎಂದರು.

ಕೊಳ್ಳೇಗಾಲದ ಗೋಪಿನಾಥಂನಿಂದ ಪಿರಿಯಾಪಟ್ಟಣದವರೆಗೆ ದೌರ್ಜನ್ಯ ಸಂಭವಿಸಿದಾಗ ದಲಿತರು ನೆನಪಿಸಿಕೊಳ್ಳುವ ಶಕ್ತಿ ಮತ್ತು ದನಿ ಶ್ರೀನಿವಾಸಪ್ರಸಾದ್ ಅವರಾಗಿದ್ದರು. ಯಾರ ಮುಲಾಜು, ಹಂಗಿಲ್ಲದೇ ರಾಜಕಾರಣ ಮಾಡಿದರು. ಸಂವಿಧಾನ ಅಪಾದಯಲ್ಲಿರುವಾಗ ಪ್ರಜಾಪ್ರಭುತ್ವ ದುರ್ಬಲಗೊಳಿಸುವ ಪ್ರಯತ್ನ ತಡೆಗೆ ಪ್ರಸಾದ್ ಅವರು ತಮ್ಮ ಹೋರಾಟದ ಬದುಕಿನಿಂದ ಪ್ರೇರಣೆಯಾಗಿರುತ್ತಾರೆ ಎಂದು ಹೇಳಿದರು.

ಪತ್ರಕರ್ತ ರವೀಂದ್ರ ಭಟ್ಟ ಅವರು ಶ್ರೀನಿವಾಸಪ್ರಸಾದ್ ವ್ಯಕ್ತಿತ್ವ ಕುರಿತು ಮಾತನಾಡಿ, ಪ್ರಧಾನಿ ನರೇಂದ್ರ ಮೋದಿ ಅವರ ಹೇಳಿಕೆ ಸರಿಯಲ್ಲವೆಂದು ಪ್ರತ್ಯುತ್ತರ ನೀಡುವ, ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗವತ್ ಅವರಿಗೆ ಚರ್ಚೆ ಮಾಡಬೇಕಾದ್ದು ಮೀಸಲಾತಿ ಬಗ್ಗೆ ಅಲ್ಲ. ಅಸ್ಪೃಶ್ಯತೆ ಮತ್ತು ಜಾತೀಯತೆ ಬಗ್ಗೆ ಎಂದು ಬಿಜೆಪಿಯೊಳಗಿದ್ದು ಪ್ರತ್ಯುತ್ತರ ನೀಡುವ ಎದೆಗಾರಿಕೆ ಪ್ರಸಾದ್ ಅವರಿಗಿತ್ತು. ಆ ಗುಣದವರನ್ನು ಇಂದು ಕಾಣುವುದು ಕಷ್ಟ ಎಂದರು.

ಅಂಬೇಡ್ಕರ್ ಅಧ್ಯಯನ ಮತ್ತು ಸಂಶೋಧನಾ ಕೇಂದ್ರದ ನಿರ್ದೇಶಕ ಪ್ರೊ.ಜೆ.ಸೋಮಶೇಖರ್ ಮಾತನಾಡಿ, ಕೇಂದ್ರದ ರಜತ ಮಹೋತ್ಸವದ ನಿಮಿತ್ತ ವರ್ಷಪೂರ್ತಿ ಕಾರ್ಯಕ್ರಮಗಳನ್ನು ರೂಪಿಸಲಾಗುತ್ತಿದ್ದು, ಸರ್ಕಾರದಿಂದ 10 ಕೋಟಿ ರೂ.ಗಳ ಅನುದಾನ ಕೊಡಿಸುವಂತೆ ಸಚಿವ ಮಹದೇವಪ್ಪ ಅವರಿಗೆ ಮನವಿ ಮಾಡಿದರು.

ವಿಶ್ವಮೈತ್ರಿ ಬುದ್ಧ ವಿಹಾರದ ಡಾ.ಕಲ್ಯಾಣಸಿರಿ ಭಂತೇಜಿ ಸಾನಿಧ್ಯ ವಹಿಸಿದ್ದರು. ಪ್ರಸಾದ್ ಅವರ ಪುತ್ರಿ ಪ್ರತಿಮಾ ಪ್ರಸಾದ್, ಪ್ರತಿಷ್ಠಾನದ ಅಧ್ಯಕ್ಷ ಪ್ರೊ.ಸಿ. ಬಸವರಾಜು, ಪ್ರಕಾಶಕ ಭರತ್ ರಾಮಸ್ವಾಮಿ ಇದ್ದರು. ಅಮ್ಮರಾಮಚಂದ್ರ ಮತ್ತು ತಂಡದವರು ಬುದ್ಧ, ಅಂಬೇಡ್ಕರ್ ಗೀತೆಗಳನ್ನು ಹಾಡಿದರು.

### ಶ್ರೀನಿವಾಸಪ್ರಸಾದ್ ಸ್ವಾಭಿಮಾನದ ಪಂಜು

**ವಿ.ಶ್ರೀನಿವಾಸಪ್ರಸಾದ್ ಅವರು ಸ್ವಾಭಿಮಾನದ ಪಂಜು ಎಂದು ಸಂಸ್ಕೃತಿಕ ಚಿಂತಕ ಬಂಜಗೆರೆ ಜಯಪ್ರಕಾಶ್ ಅಭಿಪ್ರಾಯಪಟ್ಟರು. ಶ್ರೀನಿವಾಸಪ್ರಸಾದ್ ಹೋರಾಟದ ನೆಲೆಗಳು ವಿಷಯ ಕುರಿತು ಮಾತನಾಡಿದ ಅವರು, ಮೈಸೂರು ಸೀಮೆ ದಟ್ಟವಾದ ಕಾಡು ಮತ್ತು ಮಂಟೇಸ್ವಾಮಿ ಪ್ರಭಾವವಿರುವ ನೆಲದಲ್ಲಿ ಶೋಷಿತರ ವಿಮೋಚನೆಗಾಗಿ ಸ್ವಾಭಿಮಾನದ ಪಂಜನ್ನು ಹಿಡಿದವರು ಪ್ರಸಾದ್. ಜಾತಿಯನ್ನು ಮೀರಿ ಮನುಷ್ಯರಾಗಬೇಕೆಂಬ ತತ್ವ, ಪ್ರಾಮಾಣಿಕತೆ, ಭ್ರಷ್ಟಾಚಾರ ರಹಿತ, ಅಧಿಕಾರಕೋಸ್ಕರ ತಮ್ಮ ತ ನವನ್ನು ಮಾರಿಕೊಳ್ಳಲಿಲ್ಲ. ರಾಜಕೀಯ ಮತ್ತು ಸ್ವಾಭಿಮಾನ ಸಮಾಜಮುಖಿ ಹೋರಾಟವಾಗಿತ್ತು ಎಂದು ನುಡಿದರು.**

## 346 ಕೋಟಿ ರೂ. ನೇರ ಪಾವತಿ

**ಬೆಂಗಳೂರು:** ತುಮಕೂರು ಜಿಲ್ಲೆಯಲ್ಲಿ ರೈತರಿಂದ ಖರೀದಿಸಲ್ಪಟ್ಟ ಉಂಡೆ ಕೊಬ್ಬರಿ ಮೊತ್ತ 346.50 ಕೋಟಿ ರೂ. ರೈತರ ಖಾತೆಗೆ ನೇರವಾಗಿ ಪಾವತಿಸಲಾಗಿದೆ ಎಂದು ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ಸಚಿವ ವಿ.ಸೋಮಣ್ಣ ತಿಳಿಸಿದ್ದಾರೆ. 2024ನೇ ಸಾಲಿನಲ್ಲಿ ತುಮಕೂರು ಜಿಲ್ಲೆಯ ಸುಮಾರು 27,000 ರೈತರಿಂದ ಒಟ್ಟು 3,15,000 ಕ್ವಿಂಟಾಲ್ ಉಂಡೆ ಕೊಬ್ಬರಿಯನ್ನು ಕನಿಷ್ಟ ಬೆಂಬಲ ಬೆಲೆಯಡಿಯಲ್ಲಿ ಖರೀದಿಸಲಾಗಿತ್ತು. ಈ ಸಂಬಂಧ ಒಟ್ಟು ಬಾಬ್ತು ರೂ.378 ಕೋಟಿಗಳನ್ನು ತುಮಕೂರಿನ ಕೊಬ್ಬರಿ ಬೆಳೆಗಾರರಿಗೆ ಪಾವತಿಸ ಬೇಕಾಗಿತ್ತು. ಈ ಸಂಬಂಧ 2024 ಆಗಸ್ಟ್ 5ರ ವರೆಗೆ ಸುಮಾರು 346.50 ಕೋಟಿ ಮೊತ್ತವನ್ನು (ಪ್ರತಿಶತ 92 ರಷ್ಟು) ರೈತರ ಖಾತೆಗೆ ನೇರವಾಗಿಪಾವತಿಸಲಾಗಿದೆ.ಶೀಘ್ರ ಹಣ ಪಾವತಿಗೆ ಸಚಿವ ಸೋಮಣ್ಣಅವರ ಮನವಿ ಮಾಡಿದ್ದರು. ಈ ಬಗ್ಗೆ ಮಾಹಿತಿ ನೀಡಿರುವ ಸಚಿವರು ಸುಮಾರು 24600 ರೈತರಿಗೆ ಈ ಬಾಬ್ತು ನೇರವಾಗಿ ಡಿಬಿಟಿ ಮೂಲಕ ರೈತರ ಖಾತೆಗೆ ಪಾವತಿಸ ಲಾಗಿದೆಯೆಂದು ತಿಳಿಸಿದ್ದಾರೆ,ಬಾಕಿ ಉಳಿದ ಸುಮಾರು 2438 ರೈತರ ಖಾತೆಗೆ ಇನ್ನು 31.64ಕೋಟಿ ಬಾಬ್ತನ್ನು ರೈತರಿಗೆ ಪಾವತಿಸಬೇಕಾಗಿದೆ ಇದು ಶೀಘ್ರದಲ್ಲಿ ತುಮಕೂರಿನ ರೈತರಿಗೆ ಪಾವತಿಸುವಂತೆ ರಾಜ್ಯದಲ್ಲಿನ ಸಂಬಂಧಪಟ್ಟ ಏಜೆನ್ಸಿಗೆ ನಿರ್ದೇಶನ ನೀಡಲಾಗಿದೆ ಎಂದು ಸಚಿವ ವಿ.ಸೋಮಣ್ಣ ತಿಳಿಸಿದ್ದಾರೆ.

# ಶ್ರೀಕಂಠೇಶ್ವರ ಹುಂಡಿಯಲ್ಲಿ 1.12ಕೋಟಿ ರೂಪಾಯಿ ಸಂಗ್ರಹ

**ನಂಜನಗೂಡು:** ಶ್ರೀಕಂಠೇಶ್ವರ ಸ್ವಾಮಿ ಹುಂಡಿಯ ಏಣಿಕೆ ಮಾಡಲಾಗಿದ್ದು, ದೇಗುಲದ 35 ಹುಂಡಿಯಲ್ಲಿ 1 ಕೋಟಿ 12 ಲಕ್ಷ 92 ಸಾವಿರದ 56 ರೂಪಾಯಿಗಳು ಸಂಗ್ರಹವಾಗಿವೆ. ಜತೆಗೆ 51 ಗ್ರಾಂ 350 ಮಿಲಿ ಗ್ರಾಂ ಚಿನ್ನ ಒಂದು ಕೆಜಿ 800 ಗ್ರಾಂ ಬೆಳ್ಳಿ. 46 ವಿದೇಶಿ ಕರೆನ್ಸಿಗಳು ದೊರೆತಿದ್ದು. ಅದರಲ್ಲಿ ಭಕ್ತಾಧಿಗಳು ಬರೆದ ಪತ್ರಗಳು ದೊರೆತಿವೆ.

ಈ ಪತ್ರದಲ್ಲಿ ನಂಜನಗೂಡು ದೇವಸ್ಥಾನದಲ್ಲಿ ನಡೆಯುವಂತಹ ಅಧಿಕಾರಿಗಳ ದಬ್ಬಾಳಿಕೆ ಮಧ್ಯವರ್ತಿಗಳ ಹಾವಳಿ. ಸೆಕ್ಯೂರಿಟಿಗಳ ಬೇಜವಾಬ್ದಾರಿ. ಆಡಳಿತ ಮಂಡಳಿಯಿಂದ ಭಕ್ತಾಧಿಗಳಿಗೆ ಸರಿಯಾದ ರೀತಿ ಕುಡಿಯುವ ವ್ಯವಸ್ಥೆ ಊಟದ ವ್ಯವಸ್ಥೆ ವಸತಿ ವ್ಯವಸ್ಥೆ ಇಲ್ಲದೆ ಪರದಾಡುತ್ತಿರುವುದು ಮತ್ತು ಶ್ರೀಕಂಠೇಶ್ವರ ಸ್ವಾಮಿ ಗೋಲಕಕ್ಕೆ ಕೋಟಿಗಟ್ಟಲೆ ವರಮಾನ ಇದ್ದರೂ ಯಾವುದೇ ತರಹ ವಸತಿಗೃಹಗಳನ್ನು ನಿರ್ಮಿಸದೆ. ಅಕ್ಕ ಪಕ್ಕದ ಖಾಸಗಿ ವಸತಿಗೃಹ ಬೆಳಗ್ಗೆ ಜೋತು ಬಿದ್ದು ಅವರು ಕೊಡುವ ಕಾಸಿಗೋಸ್ಕರ. ಯಾವುದೇ ವಸತಿ ಗೃಹವನ್ನು ನಿರ್ಮಾಣ ಮಾಡದೆ ಇರುವುದನ್ನು ಪತ್ರದಲ್ಲಿ ಭಕ್ತಾಧಿಗಳು ತೋಡಿಕೊಂಡಿದ್ದಾರೆ. ಪತ್ರವನ್ನು ಹುಂಡಿಯಲ್ಲಿ ಹಾಕಿ ತಮ್ಮ ಭಕ್ತಿಯನ್ನು ನಮ್ಮ ತಾತ ಮುತ್ತಾತ ನಮ್ಮ ತಂದೆ ನಾವುಗಳು ಸೇರಿದಂತೆ ಶ್ರೀಕಂಠೇಶ್ವರ ಸ್ವಾಮಿಯ ದರ್ಶನ ಪಡೆಯಲು ಬಂದರೆ ಯಾವುದೇ ರೀತಿ ಇಲ್ಲಿ ಸೌಕರ್ಯವಿಲ್ಲದೆ ಪ್ರತಿ ತಿಂಗಳು ವಂಚಿತರಾಗುತ್ತಿದ್ದೇವೆ ಆದುದರಿಂದ ಶ್ರೀಕಂಠೇಶ್ವರ ಸ್ವಾಮಿ ನೀನೆ ಅವರಿಗೆ ಒಳ್ಳೆಯ ಬುದ್ದಿ ಕೊಡು ಎಂದು ಪತ್ರದಲ್ಲಿ ಬರೆದಿದ್ದಾರೆ. ಎಣಿಕೆ ಕಾರ್ಯದಲ್ಲಿ ಶ್ರೀಕಂಠೇಶ್ವರ ಸ್ವಾಮಿ ದೇವಸ್ಥಾನದ ನಿರ್ವಾಹಾಧಿಕಾರಿ ಜಗದೀಶ್. ವೆಂಕಟೇಶ್. ಸತೀಶ್. ಮುಜರಾಯಿ ಇಲಾಖೆಯ ತಾಲೂಕು ಅಧಿಕಾರಿ ವಿದ್ಯಾ ಲತಾ ಮತ್ತು ಕೆನರಾ ಬ್ಯಾಂಕ್ ಅಧಿಕಾರಿ ವರ್ಗ ಭಾಗವಹಿದ್ದರು.



# ಸ್ವಾತಂತ್ರ್ಯ ದಿನಾಚರಣೆಗೆ ಸಿದ್ಧತೆ



**ಯಳಂದೂರು:** ಈ ಬಾರಿಯ ಆ.15ರಂದು ಸ್ವಾತಂತ್ರ್ಯ ದಿನವನ್ನು ಅರ್ಥಪೂರ್ಣವಾಗಿ ಆಚರಣೆ ಮಾಡಲು ಇಲಾಖೆ ಅಧಿಕಾರಿಗಳು ತಾಲೂಕು ಆಡಳಿತ ಸಕಲ ಸಿದ್ಧತೆಗಳನ್ನು ಮಾಡಿಕೊಳ್ಳಬೇಕು ಎಂದು ತಹಸೀಲ್ದಾರ್ ಜಯಪ್ರಕಾಶ್ ಸಲಹೆ ನೀಡಿದರು.

ಅವರು ಪಟ್ಟಣದ ತಾಲೂಕು ತಹಸೀಲ್ದಾರ್ ಸಭಾಂಗಣದಲ್ಲಿಗುರುವಾರ ನಡೆದ ಪೂರ್ವಭಾವಿ ಸಭೆಯಲ್ಲಿ ಭಾಗವಹಿಸಿ ಮಾತನಾಡಿದರು. ಸ್ವಾತಂತ್ರ್ಯ ದಿನಾಚರಣೆ ಹಾಗೂ ಗಣತಂತ್ರ ದಿನಾಚರಣೆಗಳು ರಾಷ್ಟ್ರೀಯ ಹಬ್ಬಗಳ ಸಾಲಿನಲ್ಲಿ ಮಹತ್ತರ ಪಡೆದುಕೊಂಡಿರುವ ಭಾರತೀಯರ ಪ್ರಮುಖ ಉತ್ಸವಗಳಾಗಿವೆ. ಇದನ್ನು ಎಲ್ಲರೂ ಸೇರಿ ಆಚರಿಸುವ ಪರಿಪಾಠ ಬೆಳೆಸಿಕೊಳ್ಳಬೇಕು. ತಾಲೂಕು ಆಡಳಿತದ ವತಿಯಿಂದ ನಡೆಯುವ ಈ ಕಾರ್ಯಕ್ರಮದಲ್ಲಿ ತಪ್ಪದೆ ಎಲ್ಲಾ ಇಲಾಖೆಯ ನೌಕರರು, ಪಿಯುಸಿ, ಪದವಿ ಕಾಲೇಜಿನ ನೌಕರರು, ಉಪನ್ಯಾಸಕರು ಸೇರಿ ಕಡ್ಡಾಯವಾಗಿ ಭಾಗವಹಿಸಬೇಕು, ಇಲ್ಲವಾದಲ್ಲಿ ಅಂತಹರವ ವಿರುದ್ಧ ಶಿಸ್ತು ಕ್ರಮ ಜರುಗಿಸಲಾಗುವುದು. ಇಲಾಖೆಗಳು ತಮಗೆ ವಹಿಸಿರುವ ಜವಾಬ್ದಾರಿಯನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು. ಶಾಲಾ ಮಕ್ಕಳನ್ನು ಸಾಂಸ್ಕೃತಿ ಕಾರ್ಯಕ್ರಮಗಳಿಗೆ ತಯಾರುಗೊಳಿಸುವ ಕೆಲಸ ಶಿಕ್ಷಣ ಇಲಾಖೆ ನಿರ್ವಹಿಸಬೇಕು. ಜತೆಗೆ ಈ ಬಾರಿ ಸಾಕಷ್ಟು ಪ್ರಮಾಣ ಮಳೆಯಿಂದ ರಾಜ್ಯ ಹಾಗೂ ಕೇರಳ ಪ್ರದೇಶದಲ್ಲಿ ಹೆಚ್ಚು ಸಾವು ನೋವುಗಳು ಉಂಟಾಗಿರುವ ಪರಿಣಾಮ ಸರ್ಕಾರವು ಯಾವ ರೀತಿಯ ಆದೇಶ ನೀಡುತ್ತದೆ ಎಂಬುದನ್ನು ಗಮನಿಸಿ ಮುಂದಿನ ಸಿದ್ದತೆ ಮಾಡಿಕೊಂಡಲಾಗುವುದು, ಜತೆಗೆ ಮಳೆಯ ಬಂದರೆ ತಾಲೂಕು ತಹಸೀಲ್ದಾರ್ ಆವರಣ, ಇಲ್ಲವಾದರೆ ಪಿಯುಸಿ ಕಾಲೇಜು ಆವರಣದಲ್ಲಿ ಮಾಡಲು ಸಿದ್ದತೆಯನ್ನು ಮಾಡುಕೊಳ್ಳುಬೇಕು, ಎಲ್ಲಾ ಇಲಾಖೆ ಅಧಿಕಾರಿಗಳು ಸೂಕ್ತ ಜವಾಬ್ದಾರಿಯನ್ನು ಆಯಾ ಇಲಾಖೆಗಳು ಚಾಚುತಪ್ಪದೆ ನಿರ್ವಹಿಸಬೇಕು ಎಂದು ತಿಳಿಸಿದರು. ಪಪಂ ಮುಖ್ಯಾಧಿಕಾರಿ ಮಹೇಶ್ ಕುಮಾರ್, ಬಿಇಒ ಕೆ.ಕಾಂತರಾಜು, ಸಮಾಜ ಸೇವಕ ಪಿ.ವೀರಭದ್ರಪ್ಪ, ಪ.ಪಂ ಸದಸ್ಯರಾದ ಮಹೇಶ್, ಮಾಜಿ. ತಾ.ಪಂ. ಸದಸ್ಯ ವೈ.ಕೆ.ಮೋಳೆ ನಾಗರಾಜು, ಕೃಷಿ ಸಹಾಯಕ ನಿರ್ದೇಶಕ ಅಮೃತೇಶ್ವರ, ಕಸಾಪ ಅಧ್ಯಕ್ಷ ಯರಿಯೂರು ನಾಗೇಂದ್ರ, ಕಂದಹಳ್ಳಿ ನಾರಯಣ್ ಸೇರಿದಂತೆ ಅನೇಕರು ಇದ್ದರು.

## ಶೀಘ್ರ ಕಾರ್ಯರೂಪಕ್ಕೆ ಜಲಜೀವನ್ ಮಿಷನ್

**ಚಾಮರಾಜನಗರ:** ಜಲಜೀವನ್ ಮಿಷನ್ ಯೋಜನೆಯನ್ನು ಆದಷ್ಟು ಬೇಗ ಕಾರ್ಯರೂಪಕ್ಕೆ ತಂದು ಜಿಲ್ಲೆಯಲ್ಲಿ ಶುದ್ದ ಕುಡಿಯುವ ನೀರು ಪ್ರತಿಯೊಬ್ಬರಿಗೂ ದೊರೆಯುವಂತೆ ಮಾಡಿ ಜಿಲ್ಲೆಯನ್ನು ಮಾದರಿ ಜಿಲ್ಲೆ ಮಾಡಲು ಶ್ರಮಿಸುತ್ತೇನೆಂದು ನೂತನವಾಗಿ ಅಧಿಕಾರ ವಹಿಸಿಕೊಂಡ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಕಾರ್ಯಪಾಲಕ ಇಂಜಿನಿಯರ್ ಎಸ್.ಆನಂದಮೂರ್ತಿ ತಿಳಿಸಿದರು. ಅವರು ಮಂಗಳವಾರ ನಗರದ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ ಕಚೇರಿಯಲ್ಲಿ ಕಾರ್ಯಪಾಲಕ ಇಂಜಿನಿಯರ್ ಆಗಿ ಸೇವೆ ಸಲ್ಲಿಸಿ ವರ್ಗಾವಣೆಗೊಂಡ ಎ.ಎನ್.ಮಧುಸೂದನ್ ಅವರಿಂದ ಅಧಿಕಾರ ಹಸ್ತಂತಾರ ಪಡೆದು ಮಾತನಾಡಿದರು. ಜಿಲ್ಲೆಯಲ್ಲಿ ನಡೆಯುತ್ತಿರುವ ಕುಡಿಯುವ ನೀರಿನ ಕಾಮಗಾರಿಗಳನ್ನು ಆದಷ್ಟು ಬೇಗ ಮುಗಿಸಿ ಎಲ್ಲರಿಗೂ ಶುದ್ದ ಕುಡಿಯುವ ನೀರು ಒದಗಿಸಿ ಚಾಮರಾಜನಗರ ಜಿಲ್ಲೆಯನ್ನು ಮೊದಲ ಸ್ಥಾನ ಪಡೆಯಲು ಎಲ್ಲರೂ ಸಹಕಾರ ನೀಡಬೇಕೆಂದು ಕೋರಿದರು. ವರ್ಗಾವಣೆಗೊಂಡ ಎ.ಎನ್.ಮಧುಸೂದನ್ ಮಾತನಾಡಿ, ಶುದ್ದ ಕುಡಿಯುವ ನೀರು ಕಾಮಗಾರಿ ವೇಗವಾಗಿ ನಡೆಯುತ್ತಿದ್ದು ಇದಕ್ಕೆ ಜಿಲ್ಲೆಯ ಎಲ್ಲರೂ ಸಹ ಸಹಕಾರ ನೀಡಿದ್ದಾರೆ. ಮುಂದೆಯೂ ಸಹ ಸಹಕಾರ ನೀಡಬೇಕೆಂದು ಕೋರಿದರು. ಈ ಸಂದರ್ಭದಲ್ಲಿ ಪಂಚಾಯತ್ ರಾಜ್ ಇಂಜಿನಿಯರ್ ಇಲಾಖೆಯ ಕಾರ್ಯಪಾಲಕ ಅಭಿಯಂತರ ರಮೇಶ್‌ಕುಮಾರ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ಗಳಾದ ಶ್ರೀನಿವಾಸ್, ಮಧುಸೂದನ್, ಹರೀಷ್, ಲೆಕ್ಕಾಧಿಕಾರಿ ಮಂಜು, ಅಧೀಕ್ಷಕ ಲಿಂಗರಾಜು ಮತ್ತು ಸಿಬ್ಬಂದಿವರ್ಗ ಹಾಜರಿದ್ದರು.

# ಡಿವೈಎಸ್ಪಿ ಅಪರಾಧ ಪತ್ತೆ ದಳದಿಂದ ಖತರ್ನಾಕ್ ಕಳ್ಳನ ಬಂಧನ

**ಚಾಮರಾಜನಗರ :** ಜಿಲ್ಲೆಯ ಕೊಳ್ಳೇಗಾಲ, ಮೈಸೂರು ಜಿಲ್ಲೆ ಎರಡು ಹಾಗೂ ಕೊಳ್ಳೇಗಾಲ ಉಪ ವಿಭಾಗ ವ್ಯಾಪ್ತಿಯಲ್ಲಿ ಐದು ಕಳ್ಳತನ ಪ್ರಕರಣದಲ್ಲಿ ತನ್ನ ಕೈ ಚಳಕ ತೋರಿಸಿ ಸುಮಾರು 10.65 ಲಕ್ಷ ಬೆಲೆ ಬಾಳುವ 204 ಗ್ರಾಂ ಚಿನ್ನಾಭರಣಗಳನ್ನು ಕಳವು ಮಾಡಿದ್ದ ಖತರ್ನಾಕ್ ಆರೋಪಿಯನ್ನು ಮಾಲು ಸಮೇತ ಕೊಳ್ಳೇಗಾಲ ಡಿವೈಎಸ್ಪಿ ಅಪರಾಧ ಪತ್ತೆ ದಳದ ಪೊಲೀಸರು ಬಂಧಿಸಿದ್ದಾರೆ. ಮೈಸೂರು ಜಿಲ್ಲೆಯ ನಂಜನಗೂಡು ತಾಲೂಕಿನ ಹೆಡತಲೆ ಗ್ರಾಮದ ನಿವಾಸಿ ಗಿರೀಶ್ ಕುಮಾರ್ (33) ಅಲಿಯಾಸ್ ಹ್ಯಾಂಡ್ ಕ್ಯಾಪ್ ಗಿರಿ ಬಂಧಿತ ಆರೋಪಿ. ಬಂಧಿತ ಆರೋಪಿ ಜು.31ರಂದು ಡಿವೈಎಸ್ಪಿ ಅಪರಾಧ ಪತ್ತೆದಳದ ಎಎಸ್‌ಐ ತಕೀವುಲ್ಲ, ಕಾನ್ಸ್ ಟೇಬಲ್ ಬಿಳಿಗೌಡ, ಪಟ್ಟಣದ ಚಿನ್ನ ಬೆಳ್ಳಿ ಅಂಗಡಿ ಬೀದಿಯಲ್ಲಿ ಗಸ್ತಿನಲ್ಲಿದ್ದ ವೇಳೆ ಬಂಧಿತ ಆರೋಪಿ ಬೈಕ್ ನಿಲ್ಲಿಸಿ ಕೊಂಡು ಅನುಮಾನಸ್ಪದವಾಗಿ ನಿಂತಿದ್ದನ್ನು ಗಮನಿಸಿದ್ದಾರೆ. ಈ ವೇಳೆ ಆತನನ್ನು ವಶಕ್ಕೆ ಪಡೆದು ಪಟ್ಟಣ ಠಾಣೆಯಲ್ಲಿ ವಿಚಾರಣೆಗೊಳಪಡಿಸಿದಾಗ ಜು.30 ರಂದು ಪಟ್ಟಣದ ಭಾರತ್ ಬೇಕರಿ ಬಳಿ ಸ್ಕೂಟಿಯ ಒಳಗೆ ಬ್ಯಾಗಿನಲ್ಲಿದ್ದ ಚಿನ್ನದ ಚೈನು ಹಾಗೂ ಶಿವನ ಸಮುದ್ರ, ಮಾರಮ್ಮನ ದೇವಸ್ಥಾನದ ಬಳಿ ನಿಲ್ಲಿಸಿದ್ದ ಬೈಕ್ನಲ್ಲಿದ್ದ ಚಿನ್ನದ ಚೈನು, ಬಸ್ ನಿಲ್ದಾಣದಲ್ಲಿ ಮಹಿಳೆಯಿಂದ ಕಳವು ಮಾಡಿದ್ದ ಚಿನ್ನದ ಸರ, ತಾಲೂಕಿನ ಚಿಲಕವಾಡಿ ಗ್ರಾಮದ ಬಳಿ ಮಹಿಳೆ ಯಿಂದ ಕತ್ತಿನ ನಕ್ಲೆಸ್ ಕಳುವು ಮಾಡಿ ಪರಾರಿಯಾಗಿದ್ದ ಬಗ್ಗೆ ಬಾಯಿಬಿಟ್ಟಿದ್ದಾನೆ. ಅಲ್ಲದೆ, ಮೈಸೂರು ಜಿಲ್ಲೆಯಲ್ಲಿ 2 ಕಳ್ಳತನ ಪ್ರಕರಣ ನಡೆಸಿರುವ ಕುರಿತು ಮಾಹಿತಿ ಬಿಚ್ಚಿಟ್ಟಿದ್ದಾನೆ. ಹಾಗಾಗಿ, ಈ ಎಲ್ಲಾ ಕಳವು ಪ್ರಕರಣಗಳ ಸಂಬಂಧ ಮಾಲುಗಳನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಕವಿತಾ, ಡಿವೈಎಸ್ಪಿ ಧರ್ಮೇಂದ್ರ, ಸಿಪಿಐ ಶಿವಮಾದಯ್ಯ ಅವರ ಮಾರ್ಗದರ್ಶನದಲ್ಲಿ ಪಟ್ಟಣ ಪೊಲೀಸ್ ಠಾಣೆಯ ಅಪರಾಧ ವಿಭಾಗದ ಎಸೈ ಉಮಾವತಿ, ಡಿವೈಎಸ್ಪಿ ಅಪರಾಧ ಪತ್ತೆದಳದ ಎಎಸ್‌ಐ ತಕೀವುಲ್ಲ, ಹೆಡ್ ಕಾನ್ಸ್ ಟೇಬಲ್ ಗಳಾದ ರವಿಕುಮಾರ್, ವೆಂಕಟೇಶ್, ಕಿಶೋರ್, ಕಾನ್ ಟೇಬಲ್ ಗಳಾದ ಬಿಳಿಗೌಡ, ಶಿವಕುಮಾರ್, ಅಮರೇಶ್, ಸವಿರಾಜ್, ಬಸವರಾಜು, ಸಚಿನ್, ರೋಹಿತ್ ಅವರನ್ನೊಳಗೊಂಡ ತಂಡ ಜಪ್ತಿ ಮಾಡಿದ್ದು, ಆರೋಪಿಯನ್ನು ಶನಿವಾರ ನ್ಯಾಯಾಂಗ ಬಂಧನಕ್ಕೊಪ್ಪಿಸಿದೆ.



ಸಾರ್ವಜನಿಕ ಆಸ್ಪತ್ರೆ, ಕೆ.ಆರ್. ಪುರ
ಆಡಳಿತ ವೈದ್ಯಾಧಿಕಾರಿಗಳ ಕಛೇರಿ, ಕೆ.ಆರ್. ಪುರ, ಬೆಂಗಳೂರು-560064
ದೂರವಾಣಿ: 080-25612238, ಇ-ಮೇಲ್: amoghkrpuram@gmail.com
ಸಂ.: ಸಾಆಕೃ/ಸರಬ/ಟೆಂ/01/24-25 ದಿನಾಂಕ: 05.08.2024
ಇ-ಟೆಂಡರ್ ಅಧಿಸೂಚನೆ
ಸಾರ್ವಜನಿಕ ಆಸ್ಪತ್ರೆ, ಕೆ.ಆರ್. ಪುರ, ಬೆಂಗಳೂರು ಇಲ್ಲಿ 2024-25ನೇ ಸಾಲಿಗೆ ಒಳರೋಗಿಗಳಿಗೆ ಚಿಕಿತ್ಸೆಗೆ ಬೇಕಾಗುವ Ortho implants ಸರಬರಾಜು ಮಾಡಲು ಕರ್ನಾಟಕ ಸಾರ್ವಜನಿಕ ಪಾರದರ್ಶಕ ಅಧಿನಿಯಮ 1999 ಮತ್ತು ನಿಯಮಗಳು 2000ರಂತೆ ಟೆಂಡರ್‌ಗಳನ್ನು ದ್ವಿ ಲಕೋಟೆಯಲ್ಲಿ ಇ-ಪ್ರೊಕ್ಯೂರ್‌ಮೆಂಟ್ ಮೂಲಕ ಇ-ಟೆಂಡರ್ ಆಹ್ವಾನಿಸಿದ್ದು, ವಿವರಗಳು ಇ-ಪ್ರೊಕ್ಯೂರ್‌ಮೆಂಟ್ ವೆಬ್‌ಸೈಟ್ **https://kppp.karnataka.gov.in** ಟೆಂಡರ್ ನಂ. **DHFWS/2024-25/IND0828**ರಲ್ಲಿ ಲಭ್ಯವಿರುತ್ತದೆ. ಹೆಲ್ಪ್‌ಲೈನ್ ನಂ. 080-2550 1216/227 ಟೆಂಡರ್‌ನ ಎಲ್ಲಾ ನಿಬಂಧನೆಗಳನ್ನು ಟೆಂಡರ್ ಬಿಡ್‌ನಲ್ಲಿ ನೀಡಲಾಗಿದೆ. ಹೆಚ್ಚಿನ ಮಾಹಿತಿಯನ್ನು ಎಲ್ಲಾ ಕೆಲಸದ ದಿನಗಳಲ್ಲಿ ಆಸ್ಪತ್ರೆಯ ಕಛೇರಿಯಿಂದ ಪಡೆದುಕೊಳ್ಳಬಹುದು.
**ವಿಷಯದ ಷೆಡ್ಯೂಲ್‌ಗಳು:** (1) ಅರ್ಜಿ ಸಲ್ಲಿಸಲು ಪ್ರಾರಂಭದ ದಿನಾಂಕ: **05.08.2024**ರಂದು **ಬೆಳಿಗ್ಗೆ 11:30 ಗಂಟೆಯಿಂದ.** (2) ಟೆಂಡರ್ ಸಲ್ಲಿಕೆಗೆ ಕಡೇ ದಿನಾಂಕ ಮತ್ತು ಸಮಯ: **22.08.2024**ರಂದು **ಸಂಜೆ 5:30 ಗಂಟೆಗೆ.** (3) ತಾಂತ್ರಿಕ ಬಿಡ್ಡನ್ನು ತೆರೆಯುವ ದಿನಾಂಕ ಮತ್ತು ಸಮಯ: **26.08.2024**ರಂದು **ಬೆಳಿಗ್ಗೆ 11:00 ಗಂಟೆಗೆ.** ಆರ್ಥಿಕ ಬಿಡ್ಡನ್ನು ತೆರೆಯುವ ದಿನಾಂಕ ಮತ್ತು ಸಮಯ: **28.08.2024**ರಂದು **ಬೆಳಿಗ್ಗೆ 11:30 ಗಂಟೆಗೆ.**
ವಾಸಾಸಂಇ/ವಾಪ್ರ/ಎಲ್‌ಸಿ/1310/2024-25
ಸಹಿ/-, ಟೆಂಡರ್ ಸಮಿತಿ ಅಧ್ಯಕ್ಷರು/ಆಡಳಿತ ವೈದ್ಯಾಧಿಕಾರಿಗಳು
ಸಾರ್ವಜನಿಕ ಆಸ್ಪತ್ರೆ, ಕೆ.ಆರ್.ಪುರ, ಬೆಂಗಳೂರು

# ನಾಳೆಯಿಂದ ಲಾಲ್‌ಬಾಗ್‌ನಲ್ಲಿ ಫಲಪುಷ್ಪ ಪ್ರದರ್ಶನ

**ಬೆಂಗಳೂರು:** ಸ್ವಾತಂತ್ರ್ಯೋತ್ಸವದ ಅಂಗವಾಗಿ ಈ ಬಾರಿ ವಿಶ್ವಜ್ಞಾನಿ, ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಪರಿಕಲ್ಪನೆಯಡಿ ಸಸ್ಯಕಾಶಿ ಲಾಲ್‌ಬಾಗ್‌ನಲ್ಲಿ ಆ.8ರಿಂದ 19ರ ವರೆಗೆ ಫಲಪುಷ್ಪ ಪ್ರದರ್ಶನ ಹಮಿಕೊಳ್ಳಲಾಗಿದೆ ಎಂದು ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ ಕಾರ್ಯದರ್ಶಿ ಡಾ.ಶಮ್ಲಾ ಇಕ್ಬಾಲ್ ತಿಳಿಸಿದ್ದಾರೆ.

ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಈ ಬಾರಿ ಡಾ.ಬಿ.ಆರ್.ಅಂಬೇಡ್ಕರ್ ಹಾಗೂ ನೂತನ ಸಂಸತ್ ಭವನದ ವಿಷಯಾಧಾರಿತ ಕಲಾಕೃತಿಗಳನ್ನು ರಚಿಸಲಾಗಿದೆ. ಸುಮಾರು 6ಲಕ್ಷ ಹೂಗಳಿಂದ ಸಂಸತ್ ಭವನವನ್ನು ನಿರ್ಮಾಣ ಮಾಡಲಾಗಿದ್ದು, 3.4 ಲಕ್ಷ ಡಚ್ ಗುಲಾಬಿ ಹೂಗಳನ್ನು ಬಳಸಲಾಗುತ್ತಿದ್ದು, ಅಂಬೇಡ್ಕರ್ ಅವರ ಪ್ರತಿಕೃತಿ ಮತ್ತು ಚೈತನ್ಯ ಭೂಮಿ ನಿರ್ಮಾಣಕ್ಕೆ ವಿವಿಧ ಬಗೆಯ ಹೂಗಳನ್ನು ಬಳಸಲಾಗಿದೆ ಎಂದು ತಿಳಿಸಿದರು.

ಗ್ಲಾಸೌಸ್‌ನಲ್ಲಿ ಈ ಪ್ರತಿಕೃತಿಯನ್ನು ನಿರ್ಮಾಣ ಮಾಡಲಾಗುತ್ತಿದ್ದು, ವಿವಿಧ ದೇಶಗಳಿಂದ 85 ಬಗೆಯ ಹೂಗಳನ್ನು ಬಳಸಲಾಗಿದೆ ಎಂದು ಹೇಳಿದರು.ಅಂಬೇಡ್ಕರ್ ಅವರಿಗೆ ಸಂಬಂಧಿಸಿದ 15 ವಿಭಿನ್ನ ವಿಚಾರಗಳನ್ನು ಫಲಪುಷ್ಪ ಪ್ರದರ್ಶನದ ಮೂಲಕ ಬಿಂಬಿಸಲಾಗುವುದು. ಆ.8ರಿಂದ 19ರ



ವರೆಗೆ ಪ್ರದರ್ಶನ ನಡೆಯಲಿದ್ದು, ಮೊದಲ ಆರು ದಿನಗಳ ನಂತರ ಹೂಗಳನ್ನು ಬದಲಾಯಿಸಲಾಗುವುದು. ನಂತರ 3 ಲಕ್ಷ ಹೊಸ ಹೂಗಳನ್ನು ಬಳಸಲಾಗುತ್ತಿದ್ದು, ಇದಕ್ಕೆ ಸಂಸತ್ ಭವನಕ್ಕೆ 1.80 ಲಕ್ಷ, ಅಂಬೇಡ್ಕರ್ ಜನಸ್ಥಳ ಸ್ಥಾಪನೆಗೆ 1.70 ಲಕ್ಷ ಹೂಗಳನ್ನು ಬಳಸಲಾಗುವುದು ಎಂದರು.

ಈ ಬಾರಿ ಸುಮಾರು 10 ಲಕ್ಷಕ್ಕೂ ಹೆಚ್ಚು ಪ್ರವಾಸಿಗರನ್ನು ನಿರೀಕ್ಷಿಸಲಾಗಿದೆ ಎಂದರು. ತೋಟಗಾರಿಕೆ ಇಲಾಖೆ ಜಂಟಿ ನಿರ್ದೇಶಕ ಡಾ.ಎನ್.ಜಗದೀಶ್ ಮಾತನಾಡಿ, ಈ ಬಾರಿ ಹೆಚ್ಚಿನ ಸಂಖ್ಯೆಯಲ್ಲಿ ಪ್ರವಾಸಿಗರು ಆಗಮಿಸಲಿದ್ದು, ಪಾರ್ಕಿಂಗ್ ವ್ಯವಸ್ಥೆ ಹಾಗೂ ಭದ್ರತೆಗಾಗಿ ಸಿಸಿ ಕ್ಯಾಮೆರಾಗಳನ್ನು ಅಳವಡಿಸಲಾಗಿದೆ. ಶಾಲೆಯ ಗುರುತಿನ ಚೀಟಿ ಹಾಗೂ ಸಮವಸ್ತ್ರದಲ್ಲಿ ಬರುವ ವಿದ್ಯಾರ್ಥಿಗಳಿಗೆ ಉಚಿತ ಪ್ರವೇಶವಿರಲಿದ್ದು, ವಯಸ್ಕರಿಗೆ 80ರೂ., ಮತ್ತು ಮಕ್ಕಳಿಗೆ 30ರೂ. ನಿಗದಿಪಡಿಸಲಾಗಿದೆ ಎಂದು ಹೇಳಿದರು.

216ನೇ ಫಲಪುಷ್ಪ ಪ್ರದರ್ಶನ ಇದಾಗಿದ್ದು, ಈಗಾಗಲೇ ತೋಟಗಾರಿಕೆ ಇಲಾಖೆ ಸಕಲ ಸಿದ್ಧತೆ ಮಾಡಿಕೊಳ್ಳುತ್ತಿದ್ದು, ಆ.8ರಿಂದ 19ರ ವರೆಗೆ ಫಲಪುಷ್ಪ ಪ್ರದರ್ಶನ ನಡೆಯಲಿದೆ. ಮೋಡಕವಿದ ವಾತಾವರಣವಿದ್ದು, ಇದೇ ವಾತಾವರಣ ಮುಂದುವರೆದರೆ ಹೂಗಳು ಅಷ್ಟೇನೂ ಬಾಡುವುದಿಲ್ಲ ಎಂದರು. ಫಲಪುಷ್ಪ ಪ್ರದರ್ಶನವನ್ನು ತೋಟಗಾರಿಕಾ ಸಚಿವ ಎಸ್.ಎಸ್.ಮಲ್ಲಿಕಾರ್ಜುನ ಅವರ ಮಾರ್ಗದರ್ಶನದಲ್ಲಿ ಹಮಿಕೊಳ್ಳಲಾಗಿದೆ. 8ರಂದು ಸಿಎಂ ಸಿದ್ದರಾಮಯ್ಯ ಅವರು ಪ್ರದರ್ಶನವನ್ನು ಉದ್ಘಾಟಿಸಲಿದ್ದಾರೆ ಎಂದು ತಿಳಿಸಿದರು. ತೋಟಗಾರಿಕೆ ಇಲಾಖೆ ನಿರ್ದೇಶಕ ರಮೇಶ್, ಉಪನಿರ್ದೇಶಕರಾದ ಕುಸುಮಾ ಮತ್ತಿತರರು ಇದ್ದರು.

# ತೆರಿಗೆ ಕಟ್ಟದಿದ್ದರೆ ಅಭಿವೃದ್ಧಿ ಅಸಾಧ್ಯ



**ಮೈಸೂರು:** ಪ್ರತಿ ಮೂರು ತಿಂಗಳಿಗೆ ಒಮ್ಮೆ ಸಂಚಿಕೆ ರೂಪದಲ್ಲಿ ಮಾಹಿತಿ ಕೈಪಿಡಿ ಹೊರತರುವುದರ ಜತೆಗೆ ಆರೋಗ್ಯ, ವಿದ್ಯುತ್ ಎಲ್ಲವನ್ನು ಸಾರ್ವಜನಿಕರು ಕೊಡುವ ತೆರಿಗೆಯಿಂದ ಒದಗಿಸಲು ಅನುಕೂಲವಾಗಲಿದೆ ಎಂದು ಜ್ಞಾನ ಸರೋವರ ಇಂಟರ್ ನ್ಯಾಷನಲ್ ರೆಸಿಡೆನ್ಸಿಯಲ್ ಸ್ಕೂಲ್ ಅಧ್ಯಕ್ಷ ಸುಧಾಕರ್ ಎಸ್.ಶೆಟ್ಟಿ ಹೇಳಿದರು.

ನಗರದ ಲಿ ರುಚಿ ದಿ ಪ್ರಿನ್ಸ್ ಹೋಟೆಲ್‌ನಲ್ಲಿ ಅಖಿಲ ಭಾರತ ತೆರಿಗೆ ಸಲಹೆಗಾರರ ಒಕ್ಕೂಟ ಮತ್ತು ಕರ್ನಾಟಕ ರಾಜ್ಯ ತೆರಿಗೆ ಸಲಹೆಗಾರರ ಸಂಘದ ವತಿಯಿಂದ ಸೋಮವಾರ ಆಯೋಜಿಸಿದ್ದ ರಾಷ್ಟ್ರೀಯ ತೆರಿಗೆ ಸಮ್ಮೇಳನ ಮತ್ತು ತೆರಿಗೆ ಸಲಹೆಗಾರರ ದಿನ ಉದ್ಘಾಟಿಸಿ ಮಾತನಾಡಿದ ಅವರು, ಯಾವುದೇ ಸಮಸ್ಯೆ ಬಗೆಹರಿಸಲು ಅಸೋಸಿಯೇಷನ್ ಮುಖ್ಯವಾಗಿದ್ದು ನಾಯಕತ್ವ ಬೆಳೆಸಿಕೊಳ್ಳಲು ಶ್ರಮವಹಿಸಬೇಕಾಗಿದೆ. ಯಾವುದೇ ಉದ್ಯಮ ಅಥವಾ, ಕಂಪನಿಗೆ, ಮೊದಲ ಫೌಂಡೇಶನ್ ತೆರಿಗೆ ಅಸೋಸಿಯೇಷನ್ ಎನ್ನಬಹುದು. ತೆರಿಗೆ ತರಬೇತಿ (ಟ್ಯಾಕ್ಸ್ ಪ್ರಾಕ್ಟೀಷನರ್ಸ್) ಗಳಿಂದ ನಮಗೆ ಈ ಹಿಂದೆ ಭಯ ಆಗುತ್ತಿತ್ತು. ಅಲ್ಲದೇ ಸರ್ಕಾರಕ್ಕೆ ತೆರಿಗೆ ಕಟ್ಟುವುದನ್ನು ಬೆಳೆಸುವುದಿಲ್ಲವೋ ನಾವು ಕೂಡ ಬೆಳೆಯಲು ಸಾಧ್ಯವಿಲ್ಲ ಎಂದರು. ಆದಾಯ ತೆರಿಗೆ ಕುರಿತು ಉದ್ಯಮಿಗಳಲ್ಲಿನ ಭಯ ಹೋಗಲಾಡಿಸುವ ತೆರಿಗೆ ಸಲಹೆಗಾರರಿಗೆ ಜಿಎಸ್‌ಟಿ ಕೌನ್ಸಿಲ್‌ನಲ್ಲಿ ಸ್ಥಾನ ಕಲ್ಪಿಸಬೇಕು. ತೆರಿಗೆ ಸಲಹೆಗಾರರು ಒತ್ತಡದಲ್ಲಿಯೂ ಉತ್ತಮವಾಗಿ ಕಾರ್ಯ ನಿರ್ವಹಿಸಿದ್ದರಿಂದ ಜಿಎಸ್‌ಟಿ ಸಂಗ್ರಹದಲ್ಲಿ ರಾಜ್ಯ ದೇಶಕ್ಕೆ 2ನೇ ಸ್ಥಾನ ಪಡೆದಿದೆ. ಸರ್ಕಾರ ಬೇರೆ ಕ್ಷೇತ್ರಗಳಿಗೆ ನೀಡಿದಂತೆಯೇ ವಿಮೆ ಸೌಲಭ್ಯ ತೆರಿಗೆ ಸಲಹೆಗಾರರಿಗೂ ನೀಡಬೇಕು. ಪ್ರತ್ಯೇಕ ಕಾನೂನು ರೂಪಿಸುವುದರ ಜತೆಗೆ ಜಿಎಸ್‌ಟಿ ಕೌನ್ಸಿಲ್‌ನಲ್ಲಿ ಸ್ಥಾನ ನೀಡಬೇಕು ಎಂದು ಆಗ್ರಹಿಸಿದರು.

ರಾಜ್ಯದ ಆರ್ಥಿಕತೆ ಬೆಳವಣಿಗೆಯಲ್ಲಿ ತೆರಿಗೆದಾರರ ಪಾತ್ರ ಮಹತ್ವದ್ದಾಗಿದೆ. ಆರಂಭದಲ್ಲಿ ಬಹುತೇಕರು ಜಿಎಸ್‌ಟಿ ವಿರೋಧಿಸಿದ್ದರು. ಆದರೆ, ಈಗ ಎಲ್ಲರೂ ಒಪ್ಪಿಕೊಂಡಿರುವುದರಿಂದ ಉತ್ತಮವಾಗಿ ತೆರಿಗೆ ಸಂಗ್ರಹವಾಗುತ್ತಿದೆ ಎಂದು ಅಭಿಪ್ರಾಯಪಟ್ಟರು. ಸಣ್ಣ ಕೈಗಾರಿಕೆಗಳು ದೇಶದ ಆರ್ಥಿಕತೆಯ ಬೆನ್ನುಲುಬಾಗಿದ್ದು, ಅತಿ ಹೆಚ್ಚು ಉದ್ಯೋಗ ಸೃಷ್ಟಿಸಿವೆ. ತೆರಿಗೆ ಪಾವತಿ ಸೇರಿದಂತೆ ಆರ್ಥಿಕ ವಹಿವಾಟಿಗೆ ಚಾರ್ಟೆಡ್ ಅಕೌಂಟೆಂಟ್, ಕಂಪನಿ ಕಾರ್ಯದರ್ಶಿಗಳನ್ನು ಅವಲಂಬಿಸಿಲ್ಲ. ಬದಲಾಗಿ ತೆರಿಗೆ ಸಲಹೆಗಾರರನ್ನು ನೆಚ್ಚಿಕೊಂಡಿವೆ ಎಂದರು.

ಬ್ಯಾಂಕ್‌ಗಳಿಂದ ಆರ್ಥಿಕ ನೆರವು ಸೇರಿದಂತೆ ಪೂರಕ ಸಹಕಾರ ನೀಡುತ್ತಿರುವುದರಿಂದ ದೇಶದಲ್ಲಿ 5.3 ಕೋಟಿ ಸಣ್ಣ ಉದ್ಯಮಗಳು ತಲೆ ಎತ್ತಿವೆ. ಸಲಹೆಗಾರರು ಆದಾಯ ತೆರಿಗೆ ಬಗ್ಗೆ ಸಣ್ಣ ಉದ್ದಿಮೆದಾರರಿಗೆ ಭಯ ಬೀಳಿಸಬಾರದು. ಐಟಿ, ಟಿಡಿಎಸ್, ಪಿಎಸ್‌ಐ, ಪಿಎಫ್ ಸೌಲಭ್ಯಗಳನ್ನು ಮನವರಿಕೆ ಮಾಡಿಕೊಡಬೇಕು ಎಂದು ಸಲಹೆ ನೀಡಿದರು. ಪ್ರತಿಯೊಬ್ಬ ಉದ್ಯಮಿಯೂ ಜಿಎಸ್‌ಟಿ ನೋಂದಣಿ ಮಾಡಿಕೊಳ್ಳಬೇಕಿದೆ. ಅವರ ದನಿಯನ್ನು ಮಂಡಳಿ ಆಲಿಸಬೇಕು. ಹೀಗಾಗಿ ಸ್ಥಾನ ಕಲ್ಪಿಸಬೇಕು ಎಂದು ಪ್ರತಿಪಾದಿಸಿದರು. ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಮಹಾಸಂಸ್ಥೆ (ಎಫ್‌ಕೆಸಿಸಿಐ) ಅಧ್ಯಕ್ಷ ರಾಮಚಂದ್ರ ಲಹೋಟಿ, ಮೈಸೂರು ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ಅಧ್ಯಕ್ಷ ಕೆ.ಬಿ.ಲಿಂಗರಾಜು, ರಾಜ್ಯ ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ಗೋಪಾಲಕೃಷ್ಣ ಶೆಟ್ಟಿ, ಅಖಿಲ ಭಾರತ ತೆರಿಗೆ ಸಲಹೆಗಾರರ ಒಕ್ಕೂಟದ ಕಾರ್ಯದರ್ಶಿ ರಾಮ್‌ದಿಯೊ ಕಾಕ್ರ, ದಕ್ಷಿಣ ವಲಯ ಉಪಾಧ್ಯಕ್ಷ ಡಿ.ಎಂ.ಭತ್ತದ, ಪ್ರಧಾನ ಕಾರ್ಯದರ್ಶಿ ಮುಕುಂದ ಪೋತ್ನಿಸ್, ಮೈಸೂರು ಉಪಮುಖ್ಯಸ್ಥ ಎಸ್. ಪ್ರಸಾದ್, ಸುದರ್ಶನ್ ಹಾಜರಿದ್ದರು.



**ಮಾಜಿ ಸಚಿವ ಹಾಗೂ ಹಾಲಿ ಶಾಸಕ ಪಿ.ಎಂ.ನರೇಂದ್ರಸ್ವಾಮಿ ಅವರ ತಂದೆ ಪಿ.ಎಲ್.ಮಲ್ಲಯ್ಯ ಸೋಮವಾರ ಮಧ್ಯರಾತ್ರಿ ನಿಧನರಾಗಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ಮಳವಳ್ಳಿ ತಾಲ್ಲೂಕಿನ ಪೂರಿಗಾಲಿಯಲ್ಲಿ ಅಂತಿಮ ದರ್ಶನ ಪಡೆದರು.**

### ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಡಾ. ಕುಮಾರ ಸೂಚನೆ

# ಡೆಂಗ್ಯೂ ಬಗ್ಗೆ ಜಾಗೃತಿ ಮೂಡಿಸಿ

**ಮಂಡ್ಯ:** ಜಿಲ್ಲೆಯಲ್ಲಿ ಡೆಂಗ್ಯೂ ಪ್ರಕರಣಗಳು ಹೆಚ್ಚಾಗುತ್ತಿರುವ ಹಿನ್ನೆಲೆ ಶಾಲಾ ಕಾಲೇಜುಗಳಲ್ಲಿ ಹೆಚ್ಚಿನ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಿ ಎಂದು ಜಿಲ್ಲಾಧಿಕಾರಿ ಡಾ. ಕುಮಾರ ತಿಳಿಸಿದರು.

ಅವರು ಸೋಮವಾರ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಡೆಂಗ್ಯೂ ನಿಯಂತ್ರಣ ಕಾರ್ಯಕ್ರಮ ಕುರಿತು ಜಿಲ್ಲಾ ಮಟ್ಟದ ಟಾಸ್ಕ್ ಫೋರ್ಸ್ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜಿಲ್ಲೆಯಲ್ಲಿ ಜುಲೈ ಮಾಹೆಯಲ್ಲಿ ಒಟ್ಟು 395 ಪ್ರಕರಣಗಳು ದಾಖಲಾಗಿವೆ. ಮಂಡ್ಯ ನಗರ – 75, ಮಂಡ್ಯ ಗ್ರಾಮಾಂತರ – 147, ಮದ್ದೂರು – 61, ಮಳವಳ್ಳಿ – 24, ಪಾಂಡವಪುರ – 19, ಶ್ರೀರಂಗಪಟ್ಟಣ – 34, ಕೆ ಆರ್ ಪೇಟೆ – 14, ನಾಗಮಂಗಲ – 21 ಪ್ರಕರಣಗಳು ದಾಖಲಾಗಿವೆ. ಜಿಲ್ಲೆಯಾದ್ಯಂತ ಸಾರ್ವಜನಿಕರು ಡೆಂಗ್ಯೂ ಜ್ವರ ಬಾರದಂತೆ ಮುನ್ನೆಚ್ಚರಿಕ ಕ್ರಮಗಳನ್ನು ಅನುಸರಿಸಬೇಕು ಎಂದರು.

**ಹಾಟ್ ಸ್ಪಾಟ್ ಗ್ರಾಮ:** ಒಂದು ಗ್ರಾಮ, ಪ್ರದೇಶದಲ್ಲಿ 100 ಮೀಟರ್ ಅಂತರದಲ್ಲಿ 2 ಡೆಂಗ್ಯೂ ಪ್ರಕರಣಗಳು ವರದಿಯಾದಲ್ಲಿ ಅಂತಹ ಗ್ರಾಮ, ಪ್ರದೇಶವನ್ನು ಡೆಂಗೀ ಹಾಟ್ ಸ್ಪಾಟ್ ಎಂದು ಗುರುತಿಸಿ ಡೆಂಗ್ಯೂ ರೋಗ ನಿಯಂತ್ರಣವನ್ನು ಸಮರೋಪಾದಿಯಲ್ಲಿ ಮಾಡಲಾಗುತ್ತಿದೆ. ತ್ವರಿತ ಜ್ವರ ಸಮೀಕ್ಷೆ ಹಾಗೂ ಈಡಿಸ್ ಲಾರ್ವ ಸಮೀಕ್ಷೆ ಕಾರ್ಯವನ್ನು ನಡೆಸಲಾಗುತ್ತಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ ಮೋಹನ್ ತಿಳಿಸಿದರು.

**ಫಿವರ್ ಕ್ಲಿನಿಕ್:** ಹಾಟ್ ಸ್ಪಾಟ್ ಗ್ರಾಮಗಳಲ್ಲಿ ತಾತ್ಕಾಲಿಕ ಕ್ಲಿನಿಕ್ ತೆರೆದು ಡೆಂಗ್ಯೂ ಜ್ವರ ರೋಗಿಗಳಿಗೆ ಚಿಕಿತ್ಸೆ ನೀಡಲಾಗುತ್ತಿದೆ. ಡೆಂಗ್ಯೂ ಜ್ವರ ಪ್ರಕರಣಗಳಿಗೆ ರಕ್ತ ಲೇಪನ ಪರೀಕ್ಷೆ ಹಾಗೂ ಸಂಶಯಾಸ್ಪದ ಡೆಂಗೀ ಪ್ರಕರಣಗಳಿಂದ ರಕ್ತ ಮಾದರಿ ಸಂಗ್ರಹಿಸಿ ಜಿಲ್ಲಾ ಸರ್ವೆಲೆನ್ಸ್ ಲ್ಯಾಬ್ ನಲ್ಲಿ ಪರೀಕ್ಷೆಗೋಳಪಡಿಸಲಾಗುತ್ತಿದೆ.



**ಫಿವರ್ ಕ್ಲಿನಿಕ್**

**ಹಾಟ್ ಸ್ಪಾಟ್ ಗ್ರಾಮಗಳಲ್ಲಿ ತಾತ್ಕಾಲಿಕ ಕ್ಲಿನಿಕ್ ತೆರೆದು ಡೆಂಗ್ಯೂ ಜ್ವರ ರೋಗಿಗಳಿಗೆ ಚಿಕಿತ್ಸೆ ನೀಡಲಾಗುತ್ತಿದೆ. ಡೆಂಗ್ಯೂ ಜ್ವರ ಪ್ರಕರಣಗಳಿಗೆ ರಕ್ತ ಲೇಪನ ಪರೀಕ್ಷೆ ಹಾಗೂ ಸಂಶಯಾಸ್ಪದ ಡೆಂಗೀ ಪ್ರಕರಣಗಳಿಂದ ರಕ್ತ ಮಾದರಿ ಸಂಗ್ರಹಿಸಿ ಜಿಲ್ಲಾ ಸರ್ವೆಲೆನ್ಸ್ ಲ್ಯಾಬ್ ನಲ್ಲಿ ಪರೀಕ್ಷೆಗೋಳಪಡಿಸಲಾಗುತ್ತಿದೆ. ಇದುವರೆಗೂ 6 ಫಿವರ್ ಕ್ಲಿನಿಕ್ ಕರ್ತವ್ಯ ನಿರ್ವಹಿಸಲಾಗುತ್ತಿದೆ.**

> **“ಜಿಲ್ಲೆಯಲ್ಲಿ ಜುಲೈ ಮಾಹೆಯಲ್ಲಿ ಒಟ್ಟು 395 ಪ್ರಕರಣಗಳು ದಾಖಲಾಗಿವೆ. ಮಂಡ್ಯ ನಗರ – 75, ಮಂಡ್ಯ ಗ್ರಾಮಾಂತರ – 147, ಮದ್ದೂರು – 61, ಮಳವಳ್ಳಿ – 24, ಪಾಂಡವಪುರ – 19, ಶ್ರೀರಂಗಪಟ್ಟಣ – 34, ಕೆ ಆರ್ ಪೇಟೆ – 14, ನಾಗಮಂಗಲ – 21 ಪ್ರಕರಣಗಳು ದಾಖಲಾಗಿವೆ.**
>
> **– ಡಾ. ಕುಮಾರ** ಜಿಲ್ಲಾಧಿಕಾರಿ

ಇದುವರೆಗೂ 6 ಫಿವರ್ ಕ್ಲಿನಿಕ್ ಕರ್ತವ್ಯ ನಿರ್ವಹಿಸುತ್ತಿದೆ ಎಂದರು.

ನೀಮ್ ಆಯಿಲ್ ವಿತರಣೆ ಹಾಟ್ ಸ್ಪಾಟ್ ವರದಿಯಾದ ಗ್ರಾಮಗಳಲ್ಲಿ ಬಿಪಿಎಲ್ ಕುಟುಂಬದವರಿಗೆ ಬೇವಿನ ಎಣ್ಣೆಯನ್ನು ವಿತರಿಸಲಾಗುತ್ತಿದೆ. ಜೊತೆಗೆ ಜಿಲ್ಲೆಯ ಎಲ್ಲಾ ಶಾಲೆ ಮತ್ತು ಹಾಸ್ಟಲ್ ವಿದ್ಯಾರ್ಥಿಗಳಿಗೆ ಡೆಂಗ್ಯೂ ನಿಯಂತ್ರಣದ ಬಗ್ಗೆ ಆರೋಗ್ಯ ಶಿಕ್ಷಣ ನೀಡಿ ಅರಿವು ಮೂಡಿಸಿ ಬೇವಿನ ಎಣ್ಣೆಯನ್ನು ವಿತರಿಸಲಾಗುತ್ತಿದೆ. ಇದುವರೆಗೂ 50 ಎಂ ಎಲ್ ನ 4903 ಬಾಟಲಿಗಳನ್ನು ವಿತರಿಸಲಾಗಿದೆ ಎಂದರು. ಜಿಪಂ ಸಿಇಒ ಶೇಕ್ ತನ್ವೀರ್ ಆಸೀಫ್, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕಿ ತುಷಾರಮಣಿ, ನಿವೃತ್ತ ಡಿ ಹೆಚ್ ಒ ಡಾ ಮರೀಗೌಡ, ಮಲೇರಿಯಾ ನಿಯಂತ್ರಣಾಧಿಕಾರಿ ಡಾ ಕಾಂತಾರಾಜು, ಶಿಕ್ಷಣಾಧಿಕಾರಿ ಚಂದ್ರಕಾಂತ, ಮಿಮ್ಸ್ ವೈದ್ಯರಾದ ಡಾ ಹರೀಶ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಭಾರತೀಯ ಸಂಸ್ಕೃತಿಯ ಮಾಯಾಲೋಕ ಸೃಷ್ಟಿ

**ಮೈಸೂರು:** ಕರ್ನಾಟಕ ಮುಕ್ತ ವಿಶ್ವವಿದ್ಯಾಲಯದ ಘಟಿಕೋತ್ಸವ ಭವನದಲ್ಲಿ ಹೊಸದೊಂದು ಗಾಂಧರ್ವ ಲೋಕ ಸೃಷ್ಟಿಯಾಗಿತ್ತು. ಮುಂದಿನ ಎರಡು ಗಂಟೆಗಳ ಕಾಲ ಅಲ್ಲಿ ಮಿನಿ ಭಾರತೀಯ ಸಾಂಸ್ಕೃತಿಕ ಮಾಯಾಲೋಕವೊಂದು ಸೃಷ್ಟಿಯಾಗಿತ್ತು.

ನಗರದ ಪೂರ್ಣ ಚೇತನ ಶಾಲೆಯ ಪೂರ್ವ ಪ್ರಾಥಮಿಕದಿಂದಿಡಿದು, ಹತ್ತನೇ ತರಗತಿಯವರೆಗಿನ ಸುಮಾರು 550 ವಿದ್ಯಾರ್ಥಿಗಳು ನೃತ್ಯದ ಮೂಲಕವೇ ಮಾಯಾ ಲೋಕವೊಂದನ್ನು ಸೃಷ್ಟಿಸಿದ್ದರು. ಯಾವುದೇ ವಿರಾಮವಿಲ್ಲದೆ, ಎರಡು ಗಂಟೆಗಳ ಕಾಲ ಸತತವಾಗಿ, ಹಿಮಾಲಯದಲ್ಲಿ ಹುಟ್ಟಿ, ಈ ನೆಲವನ್ನು ಪಾವನಗೊಳಿಸುವ ಗಂಗೆಯ ಪ್ರವಾಹದಂತೆ, ಪಶ್ಚಿಮ ಘಟ್ಟದಲ್ಲಿ ಹುಟ್ಟಿ ಝರಿಗಳಲ್ಲಿ ಹರಿಯುತ್ತಾ ಬಯಲು ಪ್ರದೇಶದಲ್ಲಿ ಗಂಭೀರವದನೆಯಾಗಿ ಸಾಗುವ ತುಂಗೆಯಂತೆ, ವಿದ್ಯಾರ್ಥಿಗಳು ಈ ನೆಲದ ಹೆಮ್ಮೆಯ ನೃತ್ಯಗಳನ್ನು, ಪ್ರತಿ ಭಾರತೀಯರು ಎದೆ ಉಬ್ಬಿಸಿ ಹೆಮ್ಮೆ ಪಡುವಂತೆ ಪ್ರದರ್ಶಿಸಿದರು. ಮಕ್ಕಳ ನೃತ್ಯ ಪ್ರದರ್ಶನ ಕೊನೆಗೊಳ್ಳುತ್ತಿದ್ದಂತೆ, ಮಾರ್ದನಿಸಿದ ಪ್ರೇಕ್ಷಕರ ಚಪ್ಪಾಳೆ, ಭಾರತ್ ಮಾತಾಕಿ ಜೈ ಅನ್ನುವ ಘೋಷಣೆಗಳು ಪ್ರತಿಯೊಬ್ಬರಲ್ಲೂ ವಿದ್ಯುತ್ ಸಂಚಾರವಾದಂತಹ ಅನುಭವ ನೀಡಿತು.

ಈ ಎಲ್ಲಾ ಪ್ರದರ್ಶನಗಳಿಗೂ ಕಿರೀಟ ಸದೃಶದಂತೆ ವಿದ್ಯಾರ್ಥಿಗಳು ಪ್ರಸ್ತುತ ಪಡಿಸಿದ ಕಾಶ್ಮೀರದಲ್ಲಿ ಈ ನಾಡಿನ ಮಣ್ಣಿನ ರಕ್ಷಣೆಗೆ ಜೀವ ತ್ಯಾಗಗೈಯುವ ವೀರ ಯೋಧರ ಬಲಿದಾನದ ಸಾಹಸ ಗಾಥೆ ಎಲ್ಲೆಡೆ ವಂದೇ ಮಾತರಂ ಘೋಷಣೆ ಪ್ರತಿಧ್ವನಿಸುವಂತೆ ಮಾಡಿತು. ಅಮರನಾಥಯಾತ್ರೆಯ ಸಂದರ್ಭದಲ್ಲಿ ಭಯೋತ್ಪಾದಕರ ದಾಳಿಯ ಕತೆಯ ಎಳೆಯ ಈ ನೃತ್ಯ ರೂಪಕ ನಮ್ಮ



ವೀರ ಸೈನಿಕರ ಸಾಹಸ, ತ್ಯಾಗ, ಅಪ್ರತಿಮ ವೀರ ಸಂಕಲ್ಪಕ್ಕೆ ನಮ್ಮೆಲ್ಲರ ಕೃತಜ್ಞತೆಯಾಗಿತ್ತು. ಪಾಕ್ ಪ್ರೇರಿತ ಭಯೋತ್ಪಾದಕರ ಹುಟ್ಟಡಗಿಸುತ್ತಾ, ಅಪ್ರತಿಮ ಸಾಹಸ ತೋರುವ ಸೈನಿಕರಿಗೆ ಮಕ್ಕಳೆಲ್ಲಾ ವೀರ ವಂದನೆ ಸಲ್ಲಿಸಿದ ಕ್ಷಣ ಅಲ್ಲೊಂದು ದೇಶಾಭಿಮಾನದ ವಾತಾವರಣ ಸೃಷ್ಟಿಸಿತು. ಈ ನೃತ್ಯ ರೂಪಕ ನೆರೆದಿದ್ದ ಪ್ರತಿಯೊಬ್ಬರಲ್ಲಿಯೂ ಕಣ್ಣೀರು ಜಿನುಗುವಂತೆ ಮಾಡಿತ್ತು.

ಈಶಾನ್ಯ ಭಾರತದ ಪ್ರಸಿದ್ಧ ಬಿದಿರು ನೃತ್ಯ, ಕರ್ನಾಟಕದ ಪಿಳಿ ನಲಿಕೆ, ವೀರಗಾಸೆ, ಕೋಲಾಟ, ಡೊಳ್ಳು ಕುಣಿತ, ಜಾರ್ಖಂಡ್‌ನ ಪೈಕಾ, ಲಡಾಕ್‌ನ ಕಥೋಕ್ ಚೆನ್ಮೋ, ಮಧ್ಯಪ್ರದೇಶದ ಮಟ್ಕಿ, ನಾಗಾಲ್ಯಾಂಡ್ ರಾಜ್ಯದ ಚಾಂಗ್ ಲೂ, ಹಿಮಾಚಲ ಪ್ರದೇಶದ ನಾತಿ, ತ್ರಿಪುರಾದ ಹೊಜಗಿರಿ ಹೀಗೆ ಮೈಸೂರಿನ ನೃತ್ಯಪ್ರಿಯರಿಗೆ ಅಪರಿಚಿತವಾದ ಸುಮಾರು 36 ಬಗೆಯ ನೃತ್ಯಗಳನ್ನು ವಿದ್ಯಾರ್ಥಿಗಳು ಪ್ರದರ್ಶಿಸಿದರು. ಎಳೆಯ ಮಕ್ಕಳು ತಮ್ಮ ಮುಖ ಭಾವ, ವಾದ್ಯ–ತಾಳಕ್ಕೆ ತಕ್ಕ ಹಾಗೆ ಹೆಜ್ಜೆ ಹಾಕುತ್ತಾ, ವೈವಿಧ್ಯತೆಯಲ್ಲಿ ಏಕತೆಯ ಸಂದೇಶ ಸಾರಿದರು.

ಪೂರ್ಣ ಚೇತನ ಶಾಲೆಯ ಅಧ್ಯಕ್ಷ ಡಾ.ವಿದ್ಯಾಸಾಗರ್ ಪ್ರಕಾರ, ಈ ನೃತ್ಯಗಳು ಹಾಗೂ ನೃತ್ಯ ರೂಪಕದ ಮೂಲಕ ವಿಶ್ವದಾಖಲೆ ಸೃಷ್ಟಿಸಿದ ಪ್ರಯತ್ನದ ಹಿಂದಿನ ಮೂಲ ಉದ್ದೇಶ ನಮ್ಮ ಮುಂದಿನ ಪೀಳಿಗೆಗೆ ಈ ದೇಶದ ಶ್ರೇಷ್ಠತೆ, ಪರಂಪರೆ, ಹಾಗೂ ತಾಯ್ನಾಡಿಗಾಗಿ ತ್ಯಾಗದ ಸಂದೇಶ ರವಾನೆ.

ಈಶಾನ್ಯ ಭಾರತದ ನೃತ್ಯ ಪ್ರಕಾರಗಳು ದಕ್ಷಿಣ ಭಾರತೀಯರಿಗೆ ಇನ್ನು ಪೂರ್ಣವಾಗಿ ಪರಿಚಯವಾಗಿಲ್ಲ, ಅದಕ್ಕೆ ಬೇಕಾದ ಉಡುಗೆ–ತೊಡುಗೆಗಳು ಇಲ್ಲಿ ದೊರಕುವುದಿಲ್ಲ. ನೃತ್ಯ ಸಂಯೋಜನೆ ಕೂಡಾ ತೀರಾ ಹೊಸತು. ಇದರ ಎಲ್ಲಾ ಜವಾಬ್ದಾರಿಗಳನ್ನು ನಾವೇ ವಹಿಸಿಕೊಂಡು ಈ ಹೊಸ ಪ್ರಯತ್ನ ಮಾಡಿದೆವು ಎಂದು ಶಾಲೆಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಬಿ.ದರ್ಶನ್ ರಾಜ್ ತಿಳಿಸಿದರು.

ಖ್ಯಾತ ಕಲಾವಿದೆಯೂ ಆಗಿರುವ ಶಾಲೆಯ ಮುಖ್ಯ ಆಡಳಿತಾಧಿಕಾರಿ ಮಾಧುರ್ಯ ರಾಮಸ್ವಾಮಿ ಮಾತನಾಡಿ, ಎಳವೆಯಲ್ಲೇ ದೇಶ ಸೇವೆಯ ಪ್ರೇರೇಪಣೆ ನಮ್ಮ ಮಕ್ಕಳಿಗೆ ನೀಡುವುದು ನಮ್ಮ ಪ್ರಮುಖ ಗುರಿ ಎಂದು ತಿಳಿಸಿದರು. ಎಲೈಟ್ ವರ್ಲ್ಡ್ ರೆಕಾರ್ಡ್‌ನ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಲು ಥಿನ್ ಫೋಹ್ ಟಾಯ್ ವನ್ ಚಿಂಗ್ ಮಾತನಾಡಿ, ಇಂತಹ ಒಂದು ಪ್ರಯತ್ನವನ್ನು ತಾವು ಎಲ್ಲಿಯೂ ಇಂದಿನವರೆಗೆ ನೋಡಿಲ್ಲ. ವಿದ್ಯಾರ್ಥಿಗಳ ಪ್ರದರ್ಶನ ಒಂದು ಅನನ್ಯ ಸಾಧನೆ ಎಂದು ಬಣ್ಣಿಸಿದರು.

## ಸಾಲ ಸೌಲಭ್ಯಕ್ಕಾಗಿ ಅರ್ಜಿ

**ಚಾಮರಾಜನಗರ:** ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ ಹಿಂದುಳಿದ ವರ್ಗಕ್ಕೆ ಸೇರಿದವರಿಗೆ ವಿವಿಧ ಯೋಜನೆಗಳನ್ನು ಅನುಷ್ಠಾನಗೊಳಿಸಲು (ಸೇವಾ ಸಿಂಧು ಪೋರ್ಟಲ್) ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿದೆ. ಡಿ.ದೇವರಾಜ ಅರಸು ಸ್ವಯಂ ಉದ್ಯೋಗ ವೈಯಕ್ತಿಕ ಸಾಲ ಯೋಜನೆಯಡಿ ಹಿಂದುಳಿದ ವರ್ಗಕ್ಕೆ ಸೇರಿದ ನಿರುದ್ಯೋಗಿ ಫಲಾನುಭವಿಗಳು ಕೃಷಿ ಅವಲಂಬಿತ ಚಟುವಟಿಕೆ, ವ್ಯಾಪಾರ, ಕೈಗಾರಿಕೆ, ಸಾರಿಗೆ ಮತ್ತು ಸೇವಾ ವಲಯದಲ್ಲಿ ಆರ್ಥಿಕ ಚಟುವಟಿಕೆ ಕೈಗೊಳ್ಳಲು ಗರಿಷ್ಠ 2 ಲಕ್ಷ ರೂ.ಗಳವರೆಗೆ ಆರ್ಥಿಕ ನೆರವು, ಕನಿಷ್ಠ 1 ಲಕ್ಷ ರೂ. ವರೆಗಿನ ಸಾಲದಲ್ಲಿ ಶೇ.20ರಷ್ಟು 20 ಸಾವಿರ ರೂ. ಸಹಾಯಧನ ಹಾಗೂ ಗರಿಷ್ಠ 1 ಲಕ್ಷ ರೂ.ಗಳಿಂದ 2 ಲಕ್ಷ ರೂ. ಗಳವರೆಗೆ ಶೇ.15ರಷ್ಟು ಗರಿಷ್ಠ 30 ಸಾವಿರ ರೂ. ಸಹಾಯಧನ ಉಳಿಕೆ ಮೊತ್ತ ಶೇ.4ರ ಬಡ್ಡಿದರದಲ್ಲಿ ನಿಗಮದಿಂದ ನೇರ ಸಾಲಸೌಲಭ್ಯ ಪಡೆಯಬಹುದು. ಹಿಂದುಳಿದ ವರ್ಗಗಳ ಪ್ರವರ್ಗ 1, 2ಎ, 3ಎ ಮತ್ತು 3ಬಿ ಗೆ ಸೇರಿದವರಾಗಿರಬೇಕು. ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ಪ್ರದೇಶದವರಾಗಿದ್ದಲ್ಲಿ 98 ಸಾವಿರ ರೂ. ಹಾಗೂ ಪಟ್ಟಣ ಪ್ರದೇಶದವರಾಗಿದ್ದಲ್ಲಿ 1,20,000 ರೂ. ಗಳ ಒಳಗಿರಬೇಕು. ಅರ್ಜಿದಾರರ ವಯಸ್ಸು 18 ರಿಂದ 55 ವರ್ಷಗಳ ಮಿತಿಯಲ್ಲಿರಬೇಕು. 10ನೇ ತರಗತಿ, ದ್ವಿತೀಯ ಪಿ.ಯು.ಸಿ., ಡಿಪ್ಲೋಮ, ಪದವಿ, ಎಂಜಿನಿಯರಿಂಗ್ ವ್ಯಾಸಂಗವನ್ನು ಪೂರ್ಣ ಗೊಳಿಸಿರಬೇಕು. ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಜಾತಿ ಪಟ್ಟಿಯಲ್ಲಿ ನಮೂದಿಸಿದ ನಿಗಮದ ವ್ಯಾಪ್ತಿಗೆ ಒಳಪಡುವ ಜಾತಿಗಳಿಗೆ ಸೇರಿದವರಾಗಿರಬೇಕು. ಅರ್ಜಿದಾರರ ವಯಸ್ಸು 18 ರಿಂದ 25 ವರ್ಷಗಳ ಒಳಗಿರಬೇಕು. ಪ್ರವರ್ಗ–1ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಕುಟುಂಬಕ್ಕೆ ಆದಾಯ ಮಿತಿ ಇರುವುದಿಲ್ಲ. ಪ್ರವರ್ಗ–2ಎ, 3ಎ ಮತ್ತು 3ಬಿಗೆ ಸೇರಿದ ಅರ್ಜಿದಾರರ ಕುಟುಂಬದ ವಾರ್ಷಿಕ ಆದಾಯ 8 ಲಕ್ಷ ರೂ.ಗಳಿಗಿಂತ ಕಡಿಮೆ ಇರಬೇಕು. ಅರ್ಜಿದಾರರು http://www.kaushalakar.com. ಜಾಲತಾಣದಲ್ಲಿ ಅರ್ಜಿಯನ್ನು ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ನಿಗಮದ ವೆಬ್‌ಸೈಟ್ www.dbcdc.karnataka.gov.in. ಇಲ್ಲಿ ಸಂಪರ್ಕಿಸಬಹುದು. ಅಥವಾ ನಗರದ ಜಿಲ್ಲಾಡಳಿತ ಭವನದಲ್ಲಿರುವ ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಜಿಲ್ಲಾ ಕಚೇರಿ ದೂ. ಸಂ 08226–223587 ಅನ್ನು ಸಂಪರ್ಕಿಸುವಂತೆ ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತಿ

**ಮಂಡ್ಯ:** ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವತಿಯಿಂದ 2024–25 ನೇ ಸಾಲಿನಲ್ಲಿ ಪ್ರತಿಷ್ಠಿತ ಸಂಸ್ಥೆಗಳ ಮೂಲಕ ಐಎಎಸ್–ಕೆಎಎಸ್ ಪರೀಕ್ಷಾ ಪೂರ್ವ ತರಭೇತಿಗೆ ಜಿಲ್ಲಾದ್ಯಾಂತ ಅಲ್ಪಸಂಖ್ಯಾತರ ಸಮುದಾಯದ ಅಭ್ಯರ್ಥಿಗಳಿಗೆ ಆರ್ಥಿಕ ಹೊರೆ ತಪ್ಪಿಸಲು ಅಭ್ಯರ್ಥಿಗಳ ಸುರಕ್ಷತಾ ಹಿತದೃಷ್ಠಿಯಿಂದ ಕಲಿಕಾ ಪೂರಕ ವಾತಾವರಣ ಒದಗಿಸಲು ಉತ್ತಮ ಫಲಿತಾಂಶ ಮತ್ತು ಸರ್ಕಾರಿ ಉದ್ಯೋಗ ಪಡೆದುಕೊಳ್ಳಲು ಅನುಕೂಲವಾಗುವಂತೆ ಬೆಂಗಳೂರು ನಗರದಲ್ಲಿ ನಿರ್ಮಿಸಿರುವ ಹಜ್ ಭವನದಲ್ಲಿ 10 ತಿಂಗಳ ವಸತಿ ಸಹಿತ ಐಎಎಸ್–ಕೆಎಎಸ್ ಮತ್ತು ಸ್ಪರ್ಧಾತ್ಮಕ ಪರೀಕ್ಷೆಗಳ ತರಭೇತಿ ನೀಡಲು ಆನ್‌ಲೈನ್ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಆಗಸ್ಟ್ 31 ಕೊನೆಯ ದಿನವಾಗಿದ್ದು, ಅರ್ಹ ವಿದ್ಯಾರ್ಥಿಗಳು ಸೇವಾಸಿಂಧು ಪೋರ್ಟಲ್ ನ ವೆಬ್ ಸೈಟ್ https://sevasindhu.karnataka.gov.in ಮೂಲಕ ಅರ್ಜಿಗಳನ್ನು ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಅಲ್ಪಸಂಖ್ಯಾತರ ನಿರ್ದೇಶನಾಲಯದ ವೆಬ್ ಸೈಟ್ https:// dom.karnataka.gov.in ನ್ನು ಹಾಗೂ 2024–25 ನೇ ಸಾಲಿನ ಐಎಎಸ್/ಕೆಎಎಸ್ ಸ್ಪರ್ಧಾತ್ಮಕ ಪರೀಕ್ಷೆಗಳ ತರಭೇತಿ ಸಹಾಯವಾಣಿ 8277799990 ಗೆ ಕರೆ ಮಾಡಬಹುದು ಅಥವಾ ಜಿಲ್ಲಾ ಅಲ್ಪಸಂಖ್ಯಾತರ ಅಧಿಕಾರಿಗಳ ಕಛೇರಿ ದೂ. ಸಂ: 08232–297240, ಮಂಡ್ಯ ತಾಲ್ಲೂಕು ವಿಸ್ತರಣಾಧಿಕಾರಿ ದೂ.ಸಂ–7259138868, ಪಾಂಡವಪುರ –8892212574, ಮಂಡ್ಯ ತಾಲ್ಲೂಕು ಮಾಹಿತಿ ಕೇಂದ್ರ– 9880743927, ಮಳವಳಿ– 9986682921, ಪಾಂಡವಪುರ ತಾಲ್ಲೂಕು ಮಾಹಿತಿ ಕೇಂದ್ರ– 7353860464, ನಾಗಮಂಗಲ–9663180791, ಶ್ರೀರಂಗಪಟ್ಟಣ– 9036485386, ಮದ್ದೂರು– 9886786913, ಕೆ.ಆರ್.ಪೇಟೆ? 9035251834 ಸಂಪರ್ಕಿಸಿ ಮಾಹಿತಿಯನ್ನು ಪಡೆದುಕೊಳ್ಳಬಹುದು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ತಿಳಿಸಿದ್ದಾರೆ.

## ಸಂಗೀತ ಸಂಜೆ ಕಾರ್ಯಕ್ರಮ

**ಮೈಸೂರು:** ಮೈಸೂರಿನ ರಾಘವೇಂದ್ರ, ರತ್ನಾಕರ್ ನೇತೃತ್ವದಲ್ಲಿ ಸಂಗೀತ ಸಾಮ್ರಾಟ್ ಮಹಮ್ಮದ್ ರಫೀ ಸಂಗೀತ ಸಂಜೆ ಕಾರ್ಯಕ್ರಮ ನಾದಬ್ರಹ್ಮ ಸಂಗೀತ ಸಭಾದಲ್ಲಿ ನೆರವೇರಿತು. ಕಾರ್ಯಕ್ರಮಕ್ಕೆ ಚಾಲನೆ ನೀಡಿದ ನಿವೃತ್ತ ಪ್ರಾಧ್ಯಾಪಕ ಡಾ.ಶಿವರಾಜಪ್ಪ ಮಾತನಾಡಿ, ಮೈಸೂರು ಸಾಂಸ್ಕೃತಿಕ ಕ್ಷೇತ್ರದ ರಾಯಭಾರಿ. ಕಲೆಗಳನ್ನು ಪ್ರೋತ್ಸಾಹಿಸುವ ನೆಲೆವೀಡು. ಇಲ್ಲಿ ಸಾಧು ಸಂತರಿಂದ ಹಿಡಿದು ರಾಜಮನೆತನದವರೆಗೆ ಸಂಗೀತವನ್ನು ಪ್ರೋತ್ಸಾಹಿಸಿ ಬೆಳೆಸಿದ್ದಾರೆ. ಅಂತಹ ವಿರಳರಲ್ಲಿ ರಾಘವೇಂದ್ರ, ರತ್ನಾಕರ್ ಅವರು ಸಂಗೀತವನ್ನೇ ಜೀವನವನ್ನಾಗಿಸಿಕೊಂಡು ಬದುಕಿದವರು. ಅದರಲ್ಲೂ ಮುಖ್ಯವಾಗಿ ಕನ್ನಡದ ಹಾಡುಗಳ ಜತೆಗೆ ಸಂಗೀತ ಸಾಮ್ರಾಟ್ ಮಹಮ್ಮದ್ ರಫೀ ಅವರ ಹಾಡುಗಳನ್ನು ಯಥಾವತ್ತಾಗಿ ಹಾಡುಗಳನ್ನು ಹಾಡಿ ನಮಗೆ ಹಳೆಯ ಚಲನಚಿತ್ರದ ನೆನಪುಗಳನ್ನು ಮೆಲುಕು ಹಾಕಲು ಅವಕಾಶ ಮಾಡಿಕೊಟ್ಟಿರುವುದು ನಿಜಕ್ಕೂ ಅವಿಸ್ಮರಣೀಯ ಎಂದರು. ಯಾವುದೇ ಆಗಲಿ ಅದೃಷ್ಟ ನಂಬದೆ ಆತ್ಮಬಲ ನಂಬಿ ಬದುಕನ್ನು ರೂಪಿಸಿಕೊಂಡು ಜೀವನ ಸಾರ್ಥಕತೆ ಕಂಡುಕೊಳ್ಳಬೇಕು ಅಂತಹ ಅಪರೂಪದ ಕಲಾವಿದ ಕುಟುಂಬ ರತ್ನಾಕರ್ ಕುಟುಂಬ. ಇಂತಹ ಮಹನೀಯರಿಗೆ ಸರ್ಕಾರ ಹಾಗೂ ಸಂಘ ಸಂಸ್ಥೆಗಳು ಹೆಚ್ಚಿನ ಪ್ರೋತ್ಸಾಹ ಮತ್ತು ಸಹಕಾರದೊಂದಿಗೆ ಬದುಕಲು ಅವಕಾಶ ನೀಡಬೇಕೆಂದು ಮನವಿ ಮಾಡಿದರು. ಕಾರ್ಯಕ್ರಮದಲ್ಲಿ ಕಲಾವಿದರಾದ ರಾಘವೇಂದ್ರ, ರತ್ನಾಕರ್, ಡಾ.ಪ್ರೀತಂ ರಾಘವೇಂದ್ರ, ಶ್ರೇಷ್ಠ ಕೆ ರಾಘ್, ಕಲಾ ಪೋಷಕರಾದ ಟಿ.ಆರ್. ಹರೀಶ್ ಪ್ರಸಾದ್, ಎಂ.ಕೆ.ಪುರಾಣಿಕ್, ಉದ್ಯಮಿ ರವಿಗೌಡ, ಸಮಾಜ ಸೇವಕರಾದ ಕೆ.ರಘುರಾಮ್ ವಾಜಪೇಯಿ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷರಾದ ಮಡ್ಡಿಗೆರೆ ಗೋಪಾಲ್, ಸೋಮಶೇಖರ್ ಆರಾಧ್ಯ ಉಪಸ್ಥಿತರಿದ್ದರು.

# 20ರಂದು ದೇವರಾಜ ಅರಸು 109ನೇ ಜನ್ಮದಿನಾಚರಣೆ

**ಮೈಸೂರು:** ಕರ್ನಾಟಕದ ಮಾಜಿ ಮುಖ್ಯಮಂತ್ರಿ ದಿ. ಡಿ.ದೇವರಾಜ ಅರಸು ಅವರ 109ನೇ ಜನ್ಮದಿನಾಚರಣೆಯನ್ನು ಆಗಸ್ಟ್ 20ರಂದು ಬೆಳಗ್ಗೆ 11:30ಕ್ಕೆ ಕಲಾಮಂದಿರದಲ್ಲಿ ಆಚರಿಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ಡಾ.ಪಿ.ಶಿವರಾಜು ಮಾಹಿತಿ ನೀಡಿದರು.

ಸೋಮವಾರ ಜಿಲ್ಲಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ನಡೆದ ಡಿ.ದೇವರಾಜ ಅರಸು ಅವರ 109ನೇ ಜನ್ಮದಿನಾಚರಣೆಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಆಗಸ್ಟ್ 20 ರಂದು ಸರ್ಕಾರಿ ಶಾಲಾ ಕಾಲೇಜುಗಳು ಸೇರಿದಂತೆ ಹಿಂದುಳಿದ ವರ್ಗಗಳ ಮೆಟ್ರಿಕ್ ಪೂರ್ವ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳು ಹಾಗೂ ಆಶ್ರಮ ಶಾಲೆಗಳು ಕಡ್ಡಾಯವಾಗಿ ಜಯಂತಿಯನ್ನು ಆಚರಿಸಬೇಕು. ದೇವರಾಜ ಅರಸು ದನಿ ಇಲ್ಲದವರ ದನಿಯಾಗಿದ್ದರು. ಸಾಮಾಜಿಕ ನ್ಯಾಯಹಹ ಹರಿಕಾರರಾಗಿದ್ದರು. ಹೀಗಾಗಿ ಜಯಂತಿಯನ್ನು ಕಡ್ಡಾಯವಾಗಿ ಆಚರಣೆ ಮಾಡುವ ಮೂಲಕ ಅವರಿಗೆ ಗೌರವ ಸಲ್ಲಿಸಬೇಕು ಎಂದು ಹೇಳಿದರು.

ಅರಸು ಅವರ ಜನ್ಮದಿನಾಚರಣೆ ಅಂಗವಾಗಿ 2023–24ನೇ ಸಾಲಿನ ಎಸ್‌ಎಸ್‌ಎಲ್‌ಸಿ, ಪಿಯುಸಿ ಹಾಗೂ ಸ್ನಾತಕೋತ್ತರ ಪದವಿಗಳಲ್ಲಿ ಅತಿ ಹೆಚ್ಚು ಅಂಕ ಪಡೆದ ನಿಲಯಾರ್ಥಿಗಳನ್ನು ಗುರುತಿಸಿ ಸನ್ಮಾನಿಸುವುದು, ಹಾಗೂ ವಿದ್ಯಾರ್ಥಿ ನಿಲಯಗಳಲ್ಲಿ ರಸಪ್ರಶ್ನೆ, ಪ್ರಬಂಧ, ಕ್ರೀಡಾ ಚಟುವಟಿಕೆ ಹಾಗೂ ಇನ್ನಿತರ ಕಾರ್ಯಕ್ರಮಗಳನ್ನು ಆಯೋಜಿಸಿ ಗೆದ್ದ ಸ್ಪರ್ಧಿಗಳಿಗೆ ಬಹುಮಾನ ವಿತರಿಸಬೇಕು. ಕಾರ್ಯಕ್ರಮವನ್ನು ಯಾವುದೇ



ಲೋಪವಿಲ್ಲದಂತೆ ಅಚ್ಚುಕಟ್ಟಾಗಿ ಆಯೋಜಿಸಬೇಕು ಎಂದು ಸೂಚಿಸಿದರು.

ಸರ್ಕಾರದ ಶಿಷ್ಟಾಚಾರದಂತೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು. ಈ ಸಂಬಂಧ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಮಾಡಲು ಅಗತ್ಯ ಕ್ರಮ ವಹಿಸಲಾಗುವುದು. ದಿನಾಚರಣೆ ನಡೆಯುವ ಸ್ಥಳದ ಸ್ವಚ್ಚತೆ, ಕುಡಿಯುವ ನೀರಿನ ವ್ಯವಸ್ಥೆ, ಶಾಮಿಯಾನ ವ್ಯವಸ್ಥೆ ಮಾಡಲು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಅಧಿಕಾರಿಗಳಿಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ಸಭೆಯಲ್ಲಿ ಸೂಚಿಸಿದರು.

> **» ಶಾಲಾ ಕಾಲೇಜು, ವಿದ್ಯಾರ್ಥಿ ನಿಲಯ, ಆಶ್ರಮ ಶಾಲೆಗಳಲ್ಲಿ ಕಡ್ಡಾಯವಾಗಿ ಜಯಂತಿ ಆಚರಿಸಬೇಕು: ಶಿವರಾಜು**

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾಧಿಕಾರಿ ರಾಘವೇಂದ್ರ, ಅವರು ಮಾತನಾಡಿ, ಕಾರ್ಯಕ್ರಮದಲ್ಲಿ ಕಲಾತಂಡಗಳಿಂದ ಗೀತ ಗಾಯನ ಏರ್ಪಡಿಸಲಾಗುವುದು. ಆಹ್ವಾನ ಪತ್ರಿಕೆಯ ಮುದ್ರಣ ಮಾಡಿ ಸರ್ಕಾರದ ಶಿಷ್ಟಾಚಾರದಂತೆ ಜನ ಪ್ರತಿನಿಧಿಗಳನ್ನು ಆಹ್ವಾನಿಸಲಾಗುವುದು. ಈ ಸಂಬಂಧ ಸಮಿತಿಯವರು ಸಹಕರಿಸಬೇಕು. ಕಾರ್ಯಕ್ರಮದಲ್ಲಿ ಯಾವುದೇ ತೊಂದರೆ ಆಗದಂತೆ ಅಧಿಕಾರಿಗಳು ನೋಡಿಕೊಳ್ಳಬೇಕು ಎಂದು ತಿಳಿಸಿದರು.

ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಎಂ.ಡಿ ಸುದರ್ಶನ್ ಸೇರಿದಂತೆ ಇನ್ನಿತರ ಸಂಘ ಸಂಸ್ಥೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ವರಮಹಾಲಕ್ಷ್ಮಿ ಹಬ್ಬಕ್ಕೆ ಸೀರೆಗಳ ಸಂಭ್ರಮ

**ಮೈಸೂರು:** ಜೆಎಸ್‌ಎಸ್ ಅರ್ಬನ್ ಹಾತ್‌ನಲ್ಲಿ ಆಯೋಜನೆ ಮಾಡಿರುವ ಗಾಂಧಿ ಶಿಲ್ಪ ಬಜಾರ್ ಮೇಳದಲ್ಲಿ ಸುಮಾರು 60ಕ್ಕೂ ಹೆಚ್ಚು ಕುಶಲಕರ್ಮಿಗಳು ಮತ್ತು ಕೈಮಗ್ಗ ನೇಕಾರರು ತಮ್ಮ ಕರಕುಶಲ ವಸ್ತುಗಳು ಮತ್ತು ಕೈಮಗ್ಗ ಉತ್ಪನ್ನಗಳನ್ನು ಪ್ರದರ್ಶನ ಮತ್ತು ಮಾರಾಟ ಮಾಡುತ್ತಿದ್ದಾರೆ. ಅವರ ಕೌಶಲ ಹಾಗೂ ಕಲಾವಂತಿಕೆ ಮೈಸೂರಿನ ಕಲಾಸಕ್ತರನ್ನು ಮೇಳದತ್ತ ಸೆಳೆಯುತ್ತಿದೆ. ಇದು ಮೇಳಕ್ಕೆ ಮತ್ತಷ್ಟು ಆಕರ್ಷಣೆ, ಮೆರುಗು ನೀಡುತ್ತಿದೆ.

ಮೈಸೂರಿನ ಮರದ ಕೆತ್ತನೆಗಳು, ಶಿಲಾ ಶಿಲ್ಪ, ಕಂಚಿನ ವಿಗ್ರಹಗಳು, ಮರದ ಕುಂದಣ ಕಲೆ, ಮಣ್ಣಿನ ಮಡಿಕೆಗಳು, ಪೇಪರ್ ವಸ್ತುಗಳು, ರತ್ನಗಂಬಳಿ, ಹತ್ತಿಯ ಜಮಕಾನ, ಅಲಂಕಾರಿಕ ವಸ್ತುಗಳು, ಆಭರಣಗಳು, ಮರದ ಅರಗಿನ ಕಲಾವಸ್ತುಗಳು, ಬಾಟಿಕ್, ಕಲಾಂಕಾರಿ ಚಿತ್ರಕಲೆ, ಚರ್ಮದ ಆಕರ್ಷಕ ವಸ್ತುಗಳು, ಕಲಾತ್ಮಕ ಚರ್ಮದ ಚಪ್ಪಲಿಗಳು, ಚನ್ನಪಟ್ಟಣದ ಗೊಂಬೆಗಳು, ಕಸೂತಿ ಕಲೆ, ಕರ್ನಾಟಕದ ರೇಷ್ಮೆ ಸೀರೆಗಳು, ತಮಿಳುನಾಡಿನ ಚರ್ಮದ ಉತ್ಪನ್ನಗಳು, ಕಲ್ಲಿನ ವಿಗ್ರಹಗಳು, ಪಶ್ಚಿಮ ಬಂಗಾಳದ ರೇಷ್ಮೆ ಸೀರೆಗಳು, ಕಾಟನ್ ಸೀರೆಗಳು, ಟೆರಕೋಟ ಜ್ಯುವೆಲ್ಲರಿಗಳು, ಉತ್ತರಾಖಂಡ್‌ನ ಮೆಟಲ್ ಕ್ರಾಫ್ಟ್, ಗೋವಾದ ಎಂಬ್ರಾಯ್ಡರಿ ಬೆಡ್‌ಶೀಟ್‌ಗಳು, ಅಸ್ಸಾಂನ ಕೈಮಗ್ಗ ಉತ್ಪನ್ನಗಳು, ಮಧ್ಯಪ್ರದೇಶದ ಗೊಂಡ್ ಚಿತ್ರಕಲೆಗಳು, ರಾಜಸ್ಥಾನದ ಮಿನಿಚರ್ ಪೇಂಟಿಂಗ್‌ಗಳು, ಅಪ್ಲಿಕ್ ಬೆಡ್‌ಶೀಟ್‌ಗಳು, ಚರ್ಮದ ಉತ್ಪನ್ನಗಳು, ಉತ್ತರ ಪ್ರದೇಶದ ಚಿಕನ್ ಕಾರಿ ಬಟ್ಟೆಗಳು, ಜಾರ್ಖಂಡ್‌ನ ರೇಷ್ಮೆ ಸೀರೆಗಳು, ಬಿಹಾರದ ತಸ್ಸರ್ ಸಿಲ್ಕ್ ಸೀರೆಗಳು, ಗುಜರಾತಿನ ಎಂಬ್ರಾಯ್ಡರಿ ಕುರ್ತಾ, ಆಂಧ್ರಪ್ರದೇಶದ ಕೈಮಗ್ಗ ಉತ್ಪನ್ನಗಳು, ಕೇರಳದ ಚಿತ್ರಕಲೆಗಳು,



ಒರಿಸ್ಸಾದ ಚಿಪ್ಪಿನ ಕಲಾಕೃತಿಗಳು, ರಾಜಸ್ತಾನದ ಎಂಬ್ರಾಯ್ಡರಿ ವಸ್ತುಗಳು, ಪಂಜಾಬ್‌ನ ಫುಲ್ಕಾರಿ ಬಟ್ಟೆಗಳು, ಚರ್ಮದ ಚಪ್ಪಲಿಗಳು, ಮಹಾರಾಷ್ಟ್ರದ ಚರ್ಮದ ಬ್ಯಾಗುಗಳು ಮೇಳದ ಪ್ರಮುಖ ಆಕರ್ಷಣೆಗಳಾಗಿವೆ. ಕುಶಲಕರ್ಮಿಗಳಿಂದ ನೇರವಾಗಿ ಗ್ರಾಹಕರ ಕೈಗೇ ತಲುಪುತ್ತಿರುವ ಈ ವಸ್ತುಗಳು ಮೇಳಕ್ಕೆ ಮೆರುಗು ನೀಡುತ್ತಿವೆ. ಕಲಾತ್ಮಕ ವಸ್ತುಗಳ ಪ್ರದರ್ಶನ ಹಾಗೂ ಮಾರಾಟಕ್ಕೆ ಅವಕಾಶ ಇರುವ ಈ ಮೇಳದಲ್ಲ ಗ್ರಾಹಕರ ಆಯ್ಕೆಗೆ ಹಲವು ಅವಕಾಶಗಳೂ ಇವೆ. ಈ ಪ್ರದರ್ಶನದಲ್ಲಿ ಮಧ್ಯವರ್ತಿಗಳಿಲ್ಲದೆ, ಕುಶಲಕರ್ಮಿಗಳಿಂದ ನೇರವಾಗಿ ಖರೀದಿದಾರರಿಗೆ ಮಾರಾಟದ ವ್ಯವಸ್ಥೆ ಕಲ್ಪಿಸಲಾಗಿದೆ.

# ಸಂಜೆ ಟಿಪ್ಸ್




## ಫ್ಲಿಪ್ ಟ್ರೆಂಡ್ ವರದಿ 2024 ಬಿಡುಗಡೆ

ಹಬ್ಬದ ಸೀಸನ್ ಆರಂಭವಾಗುತ್ತಿರುವ ಈ ಸಂದರ್ಭದಲ್ಲಿ ಫ್ಲಿಪ್ ಕಾರ್ಟ್ ತನ್ನ ಬಹುನಿರೀಕ್ಷಿತ ಎಚ್1 ಆವೃತ್ತಿ (ಜನವರಿಯಿಂದ ಜೂನ್ 2024 ರವರೆಗೆ) 'ಫ್ಲಿಪ್ ಟ್ರೆಂಡ್ಸ್' ವರದಿಯನ್ನು ಬಿಡುಗಡೆ ಮಾಡಿದ್ದು, ಇದರಲ್ಲಿ ಹಲವಾರು ಆಸಕ್ತಿದಾಯಕ ಅಂಶಗಳನ್ನು ಕಾಣುವ ಜೊತೆಗೆ ಈ ಅವಧಿಯಲ್ಲಿ 500 ಮಿಲಿಯನ್ ಗೂ ಅಧಿಕ ಬಳಕೆದಾರರು ನೋಂದಣಿ ಮಾಡಿಸಿಕೊಳ್ಳುವ ಮೂಲಕ ಮಹತ್ವದ ಸಾಧನೆ ಮಾಡಿದೆ. ಮೆಟ್ರೋ ಮತ್ತು ಶ್ರೇಣಿ 3+ ಪ್ರದೇಶಗಳ ನಡುವೆ ಅತ್ಯಂತ ಹೆಚ್ಚು ಜನಪ್ರಿಯ ಆಯ್ಕೆಗಳು ಯಾವುವು? ಈ ಪ್ರದೇಶಗಳಲ್ಲಿನ ಗ್ರಾಹಕರಲ್ಲಿ ಕಂಡು ಬಂದ ಸಾಮಾನ್ಯ ಮತ್ತು ವಿಭಿನ್ನ ಶಾಪಿಂಗ್ ಹವ್ಯಾಸಗಳೇನು? 2024 ರಲ್ಲಿ ಇದುವರೆಗೆ ನಿರ್ದಿಷ್ಟ ಸೀಸನ್ ಗಳಲ್ಲಿ ಕಂಡು ಬಂದ ಬಹುಎತ್ತರಕ್ಕೆ ಅಂದರೆ ಅತಿ ಹೆಚ್ಚು ಮಾರಾಟವಾದ ಅನಿರೀಕ್ಷಿತ ಖರೀದಿಗಳು ಯಾವುವು?

ಈ 'ಸೀಸನಲ್ ಟ್ರೆಂಡ್ಸ್' ಇನ್ನೂ ಚಾಲ್ತಿಯಲ್ಲಿವೆಯೇ ಅಥವಾ ವರ್ಷಪೂರ್ತಿ ಟ್ರೆಂಡ್ಸ್ ಇನ್ನೂ ಎತ್ತರದ ಸ್ಥಾನದಲ್ಲಿವೆಯೇ? ಈ ತಿಂಗಳುಗಳಲ್ಲಿ ಯಾವುದೇ ಪ್ರೀಮಿಯಂ ಉತ್ಪನ್ನಗಳು ಬಹು ಬೇಡಿಕೆ ಪಡೆದುಕೊಂಡಿವೆಯೇ? ಈ ಎಲ್ಲಾ ಅಂಶಗಳನ್ನು ಫ್ಲಿಪ್ ಕಾರ್ಟ್ ಬಿಡುಗಡೆ ಮಾಡಿರುವ ಫ್ಲಿಪ್ ಟ್ರೆಂಡ್ಸ್ ವರದಿಯಲ್ಲಿ ಪ್ರಸ್ತಾಪಿಸಲಾಗಿದೆ. ಈ ಫ್ಲಿಪ್ ಟ್ರೆಂಡ್ಸ್ ವರದಿಯು ಗ್ರಾಹಕರ ಶಾಪಿಂಗ್ ಟ್ರೆಂಡ್ಸ್ ನ ಒಂದು ಶ್ರೇಣಿಯ ಒಳನೋಟಗಳನ್ನು ಬಹಿರಂಗಪಡಿಸಿದ್ದು, ಇದರಲ್ಲಿ ಕೆಲವು ನಿರೀಕ್ಷಿತ ಮತ್ತು ಅನೇಕ ಆಶ್ಚರ್ಯಕರವಾದ ಅಂಶಗಳನ್ನು ನೀಡುತ್ತದೆ. 2024 ರ ಮೊದಲ ಅರ್ಧದ ಅವಧಿಯಲ್ಲಿ 'ವೆಕೇಶನ್ ವೇರ್' ಅತ್ಯಂತ ಹೆಚ್ಚು ಸರ್ಚ್ ಮಾಡಿದ ಉತ್ಪನ್ನವಾಗಿದೆ. ವಿಶೇಷವಾಗಿ ಬೇಸಿಗೆ ಸಮಯದಲ್ಲಿ ಈ ಉತ್ಪನ್ನಗಳ ಖರೀದಿಯಲ್ಲಿ ಗ್ರಾಹಕರು ಮುಗಿಬಿದ್ದಿರುವುದು ಕಂಡುಬಂದಿದೆ. ಮಹಿಳಾ ಗ್ರಾಹಕರು ರೊಸೆಟ್ಟೆ ಟಾಪ್ಸ್, ಚಿಕ್ ಬ್ಯಾಂಡ್ ಟಾಪ್ಸ್, ಡ್ರೆಸ್ ಗಳು, ಆರಾಮದಾಯಕ ಮ್ಯೂಲ್ಸ್, ಸೇರಿದಂತೆ ಇನ್ನೂ ಅನೇಕ ಉತ್ಪನ್ನಗಳನ್ನು ಹೆಚ್ಚು ಆಯ್ಕೆ ಮಾಡಿಕೊಂಡಿದ್ದಾರೆ.

## ಮಸಾಲ ವಡೆ

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಕಡಲೆಬೇಳೆ- 3/4 ಬಟ್ಟಲು, ಉದ್ದಿನ ಬೇಳೆ- 1/4 ಬಟ್ಟಲು, ತೊಗರಿಬೇಳೆ- 1/4 ಬಟ್ಟಲು, ತುರಿದ ಎಲೆಕೋಸು- 2 ಬಟ್ಟಲು, ಹಸಿಮೆಣಸಿನ ಕಾಯಿ- ಸಣ್ಣಗೆ ಹೆಚ್ಚಿದ್ದು ಸ್ವಲ್ಪ, ಕೊತ್ತಂಬರಿ ಸೊಪ್ಪು- ಸಣ್ಣಗೆ ಹೆಚ್ಚಿದ್ದು ಸ್ವಲ್ಪ, ಸಬ್ಬಕ್ಕಿ ಸೊಪ್ಪು- - ಸಣ್ಣಗೆ ಹೆಚ್ಚಿದ್ದು ಸ್ವಲ್ಪ, ಕರಿಬೇವು- ಸಣ್ಣಗೆ ಹೆಚ್ಚಿದ್ದು ಸ್ವಲ್ಪ, ಜೀರಿಗೆ- 1 ಚಮಚ, ಇಂಗು-ಚಿಟಿಕೆಯಷ್ಟು, ಉಪ್ಪು-ರುಚಿಗೆ ತಕ್ಕಷ್ಟು, ಎಣ್ಣೆ-ಕರಿಯಲು

### ಮಾಡುವ ವಿಧಾನ

ಮೊದಲು ತೊಗರಿಬೇಳೆ, ಕಡಲೆಬೇಳೆ, ಉದ್ದಿನಬೇಳೆಯನ್ನು ತೊಳೆದು 2 ಗಂಟೆಗಳ ಕಾಲ ನೆನೆಸಿಟ್ಟುಕೊಳ್ಳಬೇಕು. ನಂತರ ನೀರು ಹಾಕದೆ ಬೇಳೆಯನ್ನು ತರಿತರಿಯಾಗಿ ರುಬ್ಬಿಕೊಳ್ಳಬೇಕು. ರುಬ್ಬಿಕೊಂಡ ಬೇಳೆಗೆ ತುರಿದ ಎಲೆಕೋಸು, ಹಸಿಮೆಣಸಿನ ಕಾಯಿ, ಕೊತ್ತಂಬರಿ ಸೊಪ್ಪು, ಸಬ್ಬಕ್ಕಿ ಸೊಪ್ಪು, ಕರಿಬೇವು, ಜೀರಿಗೆ, ಇಂಗು, ಉಪ್ಪು ಹಾಕಿ ಚೆನ್ನಾಗಿ ಮಿಶ್ರಣ ಮಾಡಿಕೊಳ್ಳಬೇಕು. ನಂತರ ವಡೆ ರೀತಿ ತಟ್ಟಿ ಕಾದ ಎಣ್ಣೆಯಲ್ಲಿ ಹಾಕಿ ಕೆಂಪಗೆ ಕರಿದರೆ ರುಚಿಕರವಾದ ಎಲೆಕೋಸು ಮಸಾಲೆ ವಡೆ ಸವಿಯಲು ಸಿದ್ಧ.

## ಗರ್ಭಿಣಿಯರ ಕಾಲು ಊತ ಸಮಸ್ಯೆಗೆ ಪರಿಹಾರ





### ಹೆಲ್ತ್ ಟಿಪ್ಸ್

ಗರ್ಭಾವಸ್ಥೆಯಲ್ಲಿ ಕಾಲು ಊದಿಕೊಳ್ಳುವುದು ಸಾಮಾನ್ಯ. ಪ್ರತಿಯೊಬ್ಬ ಗರ್ಭಿಣಿ ಇದನ್ನು ಅನುಭವಿಸುತ್ತಾರೆ. ಆದರೆ ಇದು ಅಷ್ಟು ಹೆದರುವಂತಹ ಸಮಸ್ಯೆ ಏನಲ್ಲ. ಮನೆಯಲ್ಲಿಯೇ ಕಾಲು ಊದಿಕೊಳ್ಳುವುದಕ್ಕೆ ಪರಿಹಾರ ಕಂಡುಕೊಳ್ಳಬಹುದು.

ದೇಹದಲ್ಲಿ ಪೊಟ್ಯಾಶಿಯಮ್ ಅಂಶ ಕಡಿಮೆಯಾದರೆ ಕಾಲುಗಳು ಊದಿಕೊಳ್ಳುತ್ತವೆ.

ಹಾಗಾಗಿ ಪೊಟ್ಯಾಶಿಯಮ್ ಹೆಚ್ಚಿರುವ ಬೀನ್ಸ್, ಬಾಳೆಹಣ್ಣು ನಂತಹ ಆಹಾರ ಪದಾರ್ಥಗಳನ್ನು ಸೇವಿಸಿ. ಆರೋಗ್ಯವನ್ನು ಸರಿದೂಗಿಸಿಕೊಳ್ಳಿ.

ಕಾಫಿ ಸೇವನೆ ಗರ್ಭಿಣಿಯರಿಗೆ ಹೆಚ್ಚು ಸೂಕ್ತವಲ್ಲ. ಕೆಫೇನ್ ಅಂಶ ಕಾಲುಗಳು ಊದಿಕೊಳ್ಳುವಂತೆ ಮಾಡಿಬಿಡುತ್ತವೆ. ಆದಷ್ಟು ಕಾಫಿ ಸೇವನೆ ಕಡಿಮೆ ಮಾಡಿಕೊಂಡರೆ ಒಳ್ಳೆಯದು.

ಸಾಮಾನ್ಯವಾಗಿ ಗರ್ಭಾವಸ್ಥೆಯಲ್ಲಿ ಅತೀ ಹೆಚ್ಚು ಉಪ್ಪು, ಉಪ್ಪಿನಕಾಯಿ ಸೇವನೆ ಆರೋಗ್ಯಕ್ಕೆ ಒಳ್ಳೆಯದಲ್ಲ. ಇಂತಹ ಸಂದರ್ಭದಲ್ಲಿ ಕಾಲು ಊದಿಕೊಂಡರೆ ಉಪ್ಪಿನ ಸೇವನೆ ಸಧ್ಯದ ಮಟ್ಟಿಗೆ ನಿಲ್ಲಿಸಿಬಿಡಿ. ಕಾರಣ ಉಪ್ಪು ಹೆಚ್ಚು ತಿಂದರೆ ಅದು ದೇಹದಲ್ಲಿ ಹೆಚ್ಚುವರಿ ನೀರನ್ನು ತನ್ನಲ್ಲಿ ಸಂಗ್ರಹಿಸಿಟ್ಟುಕೊಳ್ಳುತ್ತದೆ. ಇದರಿಂದ ಕಾಲು ಊದಿಕೊಳ್ಳುತ್ತವೆ.

ಗರ್ಭಾವಸ್ಥೆಯಲ್ಲಿ ಕಾಲುಗಳು ಊದಿಕೊಂಡರೆ ಹೆಚ್ಚು ನೀರು ಕುಡಿಯಿರಿ. ದೇಹ ನಿರ್ಜಲೀಕರಣಗೊಂಡಾಗ ಕಾಲುಗಳು ಹೀಗೆ ಊದಿಕೊಳ್ಳುತ್ತವೆ. ಹಾಗಾಗಿ ಗರ್ಭಾವಸ್ಥೆಯಲ್ಲಿ ಹೆಚ್ಚು ನೀರು ಕುಡಿಯುವುದರಿಂದ ಈ ಸಮಸ್ಯೆಗೆ ಪರಿಹಾರ ಕಂಡುಕೊಳ್ಳಬಹುದು. ಅತೀ ಹೆಚ್ಚಿನ ನೀರು ಸೇವನೆ ಬೇಡ. ನಿಮ್ಮ ಸಾಮರ್ಥ್ಯಕ್ಕೆ ತಕ್ಕಷ್ಟು ನೀರು ಕುಡಿಯಿರಿ.

ಗರ್ಭಿಣಿಯರಿದ್ದಾಗ ಕಾಲುಗಳು ಊದಿಕೊಂಡರೆ ಯಾವುದಾದರೂ ಎಣ್ಣೆ ಹಚ್ಚಿ ಮೃದುವಾಗಿ ಮಸಾಜ್ ಮಾಡಿಕೊಳ್ಳಿ. ನಿಮಗೆ ಬಗ್ಗಿ ಪಾದಗಳನ್ನು ಮಸಾಜ್ ಮಾಡಿಕೊಳ್ಳಲು ಆಗದಿದ್ದಾಗ ಮನೆಯ ಸದಸ್ಯರ ಬಳಿ ಮಸಾಜ್ ಮಾಡಿಸಿಕೊಳ್ಳಿ.

ಮತ್ತೊಂದು ಪರಿಹಾರವೇನೆಂದರೆ, ಒಂದು ಬಕೆಟ್ನಲ್ಲಿ ಅರ್ಧ ಬಕೆಟ್ ಉಗುರುಬೆಚ್ಚಗಿನ ನೀರು ಹಾಕಿ, ಅದಕ್ಕೆ ಎರಡು ಸ್ಪೂನ್ ಉಪ್ಪು ಹಾಕಿ ಇಪ್ಪತ್ತು ನಿಮಿಷ ಪಾದಗಳನ್ನು ಅದರಲ್ಲಿ ಇಡಿ. ಕಾಲು ಬಾವು ಕಡಿಮೆ ಆಗುತ್ತದೆ. ಗರ್ಭಿಣಿಯರಿದ್ದಾಗ ಎಡಕ್ಕೆ ತಿರುಗಿ ಮಲಗಿದ್ರೆ, ಆರೋಗ್ಯಕ್ಕೆ ಉತ್ತಮ ಹಾಗು ಪಾದಗಳ ಊತವನ್ನು ಕಡಿಮೆ ಮಾಡುತ್ತದೆ.

## ತಲೆಹೊಟ್ಟು ನಿವಾರಣೆಗೆ ಮನೆಮದ್ದು

### ಬ್ಯೂಟಿ ಟಿಪ್ಸ್



ಹವಾಮಾನ ಬದಲಾಗುತ್ತಿದ್ದಂತೆ ತಲೆಹೊಟ್ಟಿನ ಸಮಸ್ಯೆಯೂ ಕಾಡುತ್ತದೆ. ಅದರಲ್ಲೂ ಕಚೇರಿಗೆ ತೆರಳಿ ಎಸಿ ಕೆಳಗೆ ಕೆಲಸ ಮಾಡುವವರ ತಲೆಯಲ್ಲಿ ಡ್ಯಾಂಡ್ರಫ್ ತಪ್ಪುವುದೇ ಇಲ್ಲ. ಕೆಲವು ಮನೆಮದ್ದುಗಳ ಮೂಲಕ ಇದರಿಂದ ಮುಕ್ತಿ ಹೊಂದಬಹುದು.

ಬೇವಿನ ಎಲೆಗಳಿಂದ ತಯಾರಿಸಿ ಪ್ಯಾಕ್ ನಿಮ್ಮ ಸಮಸ್ಯೆ ಬಗೆಹರಿಸಲು ನೆರವಾಗುತ್ತದೆ. ಒಂದು ಮುಷ್ಠಿ ಬೇವಿನ ಎಲೆಗಳನ್ನು ರುಬ್ಬಿ ಪೇಸ್ಟ್ ತಯಾರಿಸಿ. ಅದಕ್ಕೆ ಕಾಲು ಕಪ್ ತೆಂಗಿನ ಹಾಲು ಹಾಗೂ ಬೀಟ್ ರೂಟ್ ಪ್ಯೂರಿ ಸೇರಿಸಿ. ಒಂದೆರಡು ಚಮಚ ತೆಂಗಿನೆಣ್ಣೆ ಬೆರೆಸಿ. ಈ ಮಿಶ್ರಣವನ್ನು ನಿಮ್ಮ ತಲೆಗೆ ಸಂಪೂರ್ಣವಾಗಿ ಹಚ್ಚಿ. ಇಪ್ಪತ್ತು ನಿಮಿಷಗಳ ಬಳಿ ಶ್ಯಾಂಪೂವಿನಿಂದ ತಲೆ ತೊಳೆಯಿರಿ. ವಾರಕ್ಕೆರಡು ಬಾರಿ ಹೀಗೆ ಮಾಡುವುದರಿಂದ ತಿಂಗಳೊಳಗೆ ನೀವು ಹೊಟ್ಟಿನ ಸಮಸ್ಯೆಯಿಂದ ಮುಕ್ತಿ ಪಡೆಯಬಹುದು.

ಹಿಂದಿನ ರಾತ್ರಿ ನೆನೆಹಾಕಿದ ಮೆಂತೆಕಾಳಿಗೆ ಒಂದು ಚಮಚ ವಿನೆಗರ್ ಸೇರಿಸಿ ಬೆಳಿಗ್ಗೆ ರುಬ್ಬಿ. ಬೆಳಿಗ್ಗೆ ಪೇಸ್ಟ್ ತಯಾರಿಸಿ ಹೊಟ್ಟಿರುವ ಜಾಗಕ್ಕೆ ಹಚ್ಚಿಕೊಂಡು ಅರ್ಧ ಗಂಟೆ ಬಳಿಕ ಸ್ನಾನ ಮಾಡುವುದರಿಂದ ಹೊಟ್ಟು ಹಾಗೂ ಅದರ ಕೆರೆತದ ಸಮಸ್ಯೆಯಿಂದ ಮುಕ್ತಿ ಪಡೆಯಬಹುದು.

## ಬಿಗ್ ಬಾಸ್ ನಿರೂಪಣೆಗೆ ನಟ ಕಮಲ್ ಹಾಸನ್ ಗುಡ್‌ಬೈ!






ಪ್ರಸ್ತುತ ತಮಿಳು, ತೆಲುಗಿನಲ್ಲಿ ಬಿಗ್ ಬಾಸ್ ತಂಡ ತನ್ನ 8ನೇ ಸೀಸನ್ನೊಂದಿಗೆ ಮತ್ತೆ ಬರುತ್ತಿದೆ. ನಿಮಗೆ ಗೊತ್ತಿರುವ ಹಾಗೆ ಹಿಂದಿ ಬಿಗ್ ಬಾಸ್ ಕಾರ್ಯಕ್ರಮವನ್ನ ಬಾಲಿವುಡ್ ಸ್ಟಾರ್ ನಟ ಸಲ್ಮಾನ್ ಖಾನ್ ನಡೆಸುತ್ತಿದ್ದಾರೆ, ಕನ್ನಡದಲ್ಲಿ ಎಂದಿನಂತೆ ಕಿಚ್ಚ ಸುದೀಪ್ ನಡೆಸಿಕೊಡುತ್ತಾರೆ.

ಕಿಚ್ಚ ಸುದೀಪ್ ಹೊರತು ಬೇರೆ ಯಾರೇ ನಡೆಸಿಕೊಟ್ಟರೂ ಸಪ್ಪೆ ಅನಿಸಿಬಿಡುವಷ್ಟು ಜನರು ಕಿಚ್ಚ ಸುದೀಪ್ ಕನ್ನಡ ರಿಯಾಲಿಟಿ ಶೋದ ಬಿಗ್ ಬಾಸ್ ಎಂದು ಒಪ್ಪಿಕೊಂಡಿದ್ದಾರೆ. ಇನ್ನು ತೆಲುಗಿನಲ್ಲಿ ನಟ ಅಕ್ಕಿನೇನಿ ನಾಗರ್ಜುನ್ ನಡೆಸಿಕೊಡುತ್ತಾರೆ. ಈಗಾಗಲೇ ತೆಲುಗು ಬಿಗ್ ರಿಯಾಲಿಟಿ ಶೋ 8ನೇ ಸೀಸನ್ ಕೂಡ ನಾಗರ್ಜುನ ನಡೆಸಿಕೊಡಲಿದ್ದಾರೆ. ಆದರೆ ಇದೀಗ ತಮಿಳಿನಲ್ಲಿ ಹೊಸ ಅಪ್ಡೇಟ್ ಬಂದಿದ್ದು, ರಿಯಾಲಿಟಿ ಶೋ ಪ್ರೇಕ್ಷಕರಿಗೆ ಕಮಲ್ ಹಾಸನ್ ಶಾಕಿಂಗ್ ಸುದ್ದಿ ನೀಡಿದ್ದಾರೆ. ಇಲ್ಲಿವರೆಗೆ ಅಂದರೆ ಏಳು ಸೀಸನ್ವರೆಗೆ ಬಿಗ್ ರಿಯಾಲಿಟಿ ಶೋ ಉತ್ತಮವಾಗಿ ನಡೆಸಿಕೊಟ್ಟಿದ್ದ ನಟ ಕಮಲ್ ಹಾಸನ್ ಇದೀಗ 8ನೇ ಸೀಸನ್ ಬಿಗ್ಬಾಸ್ನಿಂದ ಹೊರಬಂದಿದ್ದಾರೆ.

ಈಗಾಗಲೇ ತೆಲುಗು ಸೀಸನ್ನ ಅಪ್ಡೇಟ್ಗಳು ಬಂದಿವೆ. ಕಿಂಗ್ ನಾಗ್ ಹೋಸ್ಟ್ ಆಗಿ ಎಂಟನೇ ಸೀಸನ್ ಅನ್ನು ಮುನ್ನಡೆಸಲಿದ್ದಾರೆ. ಆದರೆ ತಮಿಳಿನ ಬಿಗ್ ಬಾಸ್ ಶೋನಲ್ಲಿ ಬದಲಾವಣೆ ಅಗತ್ಯ ಎಂದು ತಿಳಿದು ಬಂದಿದೆ. ಇಲ್ಲಿಯವರೆಗೆ ಕಮಲ್ ಹಾಸನ್ ಅವರು ಬಿಗ್ ಬಾಸ್ ಕಾರ್ಯಕ್ರಮವನ್ನು ಉತ್ತಮ ಯಶಸ್ಸಿನೊಂದಿಗೆ ಮುನ್ನಡೆಸಿದ್ದಾರೆ. ಅವರು ಏಳು ಸೀಸನ್ಗಳಿಗೆ ಬಿಗ್ ಬಾಸ್ನ ನಿರೂಪಕರಾಗಿದ್ದರು. ಆದರೆ ಇದೀಗ ಕಮಲ್ ಹಾಸನ್ ಬಿಗ್ ಬಾಸ್ ಶೋಗೆ ಬಂದಿದ್ದಾರೆ. ಈ ಸೀಸನ್ಗೆ ಹೋಸ್ಟ್ ಮಾಡುವುದಿಲ್ಲ ಎಂದು ಕಮಲ್ ಹಾಸನ್ ಹೇಳಿದ್ದಾರೆ. ಈ ಬಗ್ಗೆ ಇನ್ಸ್ಟಾಗ್ರಾಮ್ ಖಾತೆಯಲ್ಲಿ ಪೋಸ್ಟ್ ಮಾಡಿರುವ ಕಮಲ್ ಹಾಸನ್, ಬಿಗ್ ಬಾಸ್ ರಿಯಾಲಿಟಿ ಶೋದಿಂದ ಹೊರನಡೆದಿರುವ ಬಗ್ಗೆ ಬರೆದುಕಕೊಂಡಿದ್ದಾರೆ. ಹೊರನಡೆದಿರುವ ಬಗ್ಗೆ ಕಾರಣವನ್ನೂ ಸಹ ನೀಡಿದ್ದಾರೆ.

ಈ ಮೊದಲೇ ಒಪ್ಪಿಕೊಂಡ ಸಿನಿಮಾಗಳ ಕೆಲಸದ ಕಾರಣದಿಂದ ನನಗೆ ಈ ಬಾರಿಯ ಬಿಗ್ ಬಾಸ್ ಶೋ ನಿರೂಪಣೆ ಮಾಡಲು ಸಾಧ್ಯವಾಗುತ್ತಿಲ್ಲ' ಎಂದು ಕಮಲ್ ಹಾಸನ್ ಹೇಳಿದ್ದಾರೆ.

'ನಿಮ್ಮ ಮನೆಗಳನ್ನು ತಲುಪುವ ಅವಕಾಶ ನನಗೆ ಸಿಕ್ಕಿತ್ತು. ನೀವು ನನಗೆ ಪ್ರೀತಿ ನೀಡಿದ್ದೀರಿ. ಅದಕ್ಕಾಗಿ ನಾನು ಚಿರಋಣಿ. ನಿಮ್ಮ ಬೆಂಬಲದಿಂದಾಗಿ ಬಿಗ್ ಬಾಸ್ ತಮಿಳು ರಿಯಾಲಿಟಿ ಶೋ ನನ್ನ ಪಾಲಿನ ಬೆಸ್ಟ್ ಶೋ ಆಯಿತು. ಕಲಿಕೆಯ ಅನುಭವ ನೀಡಿದ ಈ ಕಾರ್ಯಕ್ರಮಕ್ಕಾಗಿ ನಾನು ಋಣಿ ಆಗಿದ್ದೇನೆ. ನಿಮ್ಮೆಲ್ಲರಿಗೆ ಹಾಗೂ ಸ್ಪರ್ಧಿಗಳಿಗೆ ನಾನು ಧನ್ಯವಾದ ಅರ್ಪಿಸುತ್ತೇನೆ' ಎಂದು ಪತ್ರದಲ್ಲಿ ಬರೆದಿದ್ದಾರೆ ಕಮಲ್ ಹಾಸನ್. ಹೊಸ ಸೀಸನ್ಗೆ ಯಾರು ನಿರೂಪಣೆ ಮಾಡುತ್ತಾರೆ ಎಂಬ ಮಾಹಿತಿಯನ್ನು ವಾಹಿನಿಯವರು ಇನ್ನಷ್ಟೇ ನೀಡಬೇಕಿದೆ.

## ಪತ್ನಿ ಅಗಲಿ ಒಂದು ವರ್ಷ : ಭಾವುಕತೆಯ ಪೋಸ್ಟ್ ಹಾಕಿದ ವಿಜಯ ರಾಘವೇಂದ್ರ



ನಟ ವಿಜಯ ರಾಘವೇಂದ್ರ ಪತ್ನಿ ಸ್ಪಂದನಾ ಅಗಲಿ ಇಂದಿಗೆ ಒಂದು ವರ್ಷ ಕಳೆದಿವೆ. ಹಾಗಾಗಿ ಮಗ ಮತ್ತು ಪತ್ನಿ ಜೊತೆಗಿರೋ ಫೋಟೋವನ್ನು ನಟ ವಿಜಯ ರಾಘವೇಂದ್ರ ಸೋಷಿಯಲ್ ಮೀಡಿಯಾದಲ್ಲಿ ಹಂಚಿಕೊಂಡು ಭಾವುಕ ಪೋಸ್ಟ್ ಮಾಡಿದ್ದಾರೆ. ಪತ್ನಿಯೊಂದಿಗಿನ ನೆನಪುಗಳನ್ನು ಅವರು ಹಂಚಿಕೊಂಡಿದ್ದಾರೆ. ಪತ್ನಿಯ ನಿಧನದ ನಂತರ ಮೌನಕ್ಕೆ ಶರಣಾಗಿದ್ದ ವಿಜಯ ನಂತರ ದಿನಗಳಲ್ಲಿ ಚೇತರಿಸಿಕೊಂಡು ಸ್ಪಂದನಾ ಬಗ್ಗೆ ಭಾವುಕರಾಗಿ ವೀಡಿಯೋ ಮೂಲಕ ಮನದಾಳದ ಭಾವನೆಗಳನ್ನ ಅಕ್ಷರ ರೂಪಕ್ಕೆ ಇಳಿಸಿದ್ದರು. ಸ್ಪಂದನಾ ನೆನಪನ್ನ ತಮ್ಮೊಳಗಿನ ಪ್ರೀತಿಯನ್ನ ಅವರು ಈ ಹಿಂದೆಯೂ ಬಿಚ್ಚಿಟ್ಟಿದ್ದರು. ಸ್ಪಂದನಾ ಹೆಸರಿಗೆ ತಕ್ಕ ಜೀವ. ಉಸಿರಿಗೆ ತಕ್ಕ ಭಾವ. ಅಳತೆಗೆ ತಕ್ಕ ನುಡಿ. ಬದುಕಿಗೆ ತಕ್ಕ ನಡೆ. ನಮಗೆಂದೇ ಮಿಡಿದ ನಿನ್ನ ಹೃದಯವ. ನಿಲ್ಲದು ನಿನ್ನೊಂದಿಗಿನ ಕಲರವ. ನಾನೆಂದೂ ನಿನ್ನವ. ಕೇವಲ ನಿನ್ನವ ಎಂದು ವಿಜಯ್ ರಾಘವೇಂದ್ರ ಅವರು ಭಾವನ್ಮಾತಕವಾಗಿ ಸಾಲುಗಳನ್ನು ಹೇಳಿಕೊಂಡಿದ್ದರು. ಪ್ರೀತಿಸಿ ಗುರುಹಿರಿಯರ ಸಮ್ಮತಿ ಪಡೆದು ಆಗಸ್ಟ್ 26ರ 2017ರಲ್ಲಿ ವಿಜಯ-ಸ್ಪಂದನಾ ಮದುವೆಯಾದರು. ಅವರ ದಾಂಪತ್ಯಕ್ಕೆ ಪ್ರೀತಿಗೆ ಶೌರ್ಯ ಎಂಬ ಪುತ್ರ ಸಾಕ್ಷಿಯಾಗಿದ್ದಾರೆ. ಸ್ಪಂದನಾ ಅನಿರೀಕ್ಷಿತ ಅಗಲಿಕೆ ಕುಟುಂಬಕ್ಕೆ ಶಾಕ್ ನೀಡಿತ್ತು. ಆಗಸ್ಟ್ 6ರಂದು ಹೃದಯಾಘಾತದಿಂದ ಸ್ಪಂದನಾ ಬ್ಯಾಂಕಾಂಕ್‌ನಲ್ಲಿ ನಿಧನರಾದರು. ಆಗಸ್ಟ್ 9ರಂದು ಸ್ಪಂದನಾ ಅಂತ್ಯಕ್ರಿಯೆ ಹರಿಶ್ಚಂದ್ರ ಘಾಟ್‌ನಲ್ಲಿ ನೆರವೇರಿತ್ತು.

## ವೈನವಿ.ಬಿ.ಸಿಗೆ ಒಲಿದ ಸುವರ್ಣ ಕರ್ನಾಟಕ ಕಣ್ಮಣಿ ರಾಜ್ಯ ಪ್ರಶಸ್ತಿ



ಭಾನುವಾರ ದಾವಣಗೆರೆಯ ಕುವೆಂಪು ಕನ್ನಡ ಭವನದಲ್ಲಿ ಕಲಾಕುಂಚ ಸಾಂಸ್ಕೃತಿಕ ಸಂಸ್ಥೆ ಸಾಲಿಗ್ರಾಮ ಗಣೇಶ್ ಶಣೈರವರ ಸಾರಥ್ಯದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಸಾಧಕರಿಗೆ ಸನ್ಮಾನಿಸಿ ಗೌರವಿಸಲಾಯಿತು ಇದೇ ವೇದಿಕೆಯಲ್ಲಿ ಬೆಂಗಳೂರಿನ ವೈನವಿ ಬಿ.ಸಿ. ಅವರಿಗೆ ಸುವರ್ಣ ಕರ್ನಾಟಕ ಕಣ್ಮಣಿ ರಾಜ್ಯ ಪ್ರಶಸ್ತಿ ನೀಡಿ ಅಭಿನಂದಿಸಲಾಯಿತು.

ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಸಾಲಿಗ್ರಾಮ ಗಣೇಶ್ ಶಣೈ, ವೈನವಿ ಬಿ.ಸಿ. ಸಾಧನೆ ಅತ್ಯದ್ಭುತ. ತನ್ನ 5ನೇ ವಯಸ್ಸಿಗೆ ಭಗವದ್ಗೀತೆಯ 18 ಅಧ್ಯಾಯ700 ಶ್ಲೋಕಗಳನ್ನು ಕಂಠಸ್ತ ಮಾಡಿ ಹಾಗೂ ಸನಾತನ ಧರ್ಮದ ಶ್ಲೋಕ, ಸ್ತೋತ್ರ, ದೇವರ ನಾಮಗಳನ್ನು ಕಲಿತು ವಿವಿಧ ದಾಖಲೆಗಳನ್ನು ತನ್ನ ಮುಡಿಗೆರಿಸಿಕೊಂಡಿರುವುದು ನಮ್ಮೆಲ್ಲರಿಗೂ ಹೆಮ್ಮೆಯ ಸಂಗತಿ. ಈಗಾಗಲೇ ವೈನವಿ ಬಿ. ಸಿ. ನನ್ನ ಕಿರಿಯ ವಯಸ್ಸಿಗೆ ರಾಷ್ಟ್ರಮಟ್ಟದಲ್ಲಿ ಸನಾತನ ಧರ್ಮ ಹಾಗೂ ಭಗವದ್ಗೀತೆಯ ಪ್ರಚಾರ ರಾಯಭಾರಿಯಾಗಿ ಗುರುತಿಸಿಕೊಂಡಿದ್ದು, ಮುಂದೊಂದು ದಿನ ಅಂತರಾಷ್ಟ್ರೀಯಮಟ್ಟದಲ್ಲಿ ಗುರುತಿಸಿಕೊಳ್ಳುವುದು ಬಾಕಿ ಇದೆ. ಇಂಥ ಅದ್ಬುತ ಹಾಗೂ ವಿಶೇಷ ಪ್ರತಿಭೆಗೆ ರಾಜ್ಯ ಪ್ರಶಸ್ತಿ ನೀಡಿ ಗೌರವಿಸುವುದು ನಮ್ಮ ಸಂಸ್ಥೆಗೆ ಹೆಮ್ಮೆ ಎನಿಸುತ್ತದೆ ಎಂದು ಹರ್ಷ ವ್ಯಕ್ತಪಡಿಸಿದರು,

ಕಾರ್ಯಕ್ರಮದಲ್ಲಿ ಡಾ.ಕಬ್ಬಿನಾಲೆ ವಸಂತ ಭಾರದ್ವಾಜ್ , ರಾಜೇಂದ್ರ ಪಾಟೀಲ್, ಗಿರಿಜಾ ಮಾಲಿ ಪಾಟೀಲ್, ಹಾಗೂ ಹೇಮಾ ಶಾಂತಪ್ಪ ಪೂಜಾರಿ ಹಾಗೂ ಸಂಸ್ಥೆಯ ಪದಾಧಿಕಾರಿಗಳು ಉಪಸ್ಥಿತರಿದ್ದರು.



**ಜಯಶ್ರೀ.ಬಿ.ಆರ್**
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

## ರಾಶಿ ಭವಿಷ್ಯ

**ಮೇಷ:** ಮನೆಯಲ್ಲಿ ದೇವತಾ ಕಾರ್ಯ, ಉದ್ಯೋಗದಲ್ಲಿ ಪ್ರಗತಿ, ಶೀತ ಸಂಬಂಧ ರೋಗಗಳು.

**ವೃಷಭ:** ಹಳೆ ಸಾಲ ಮರುಪಾವತಿ, ಹೇಳಿಕೆ ಮಾತಿನಿಂದ ಅಸಮಾಧಾನ, ಅನಾವಶ್ಯಕ ಖರ್ಚಿನಿಂದ ದೂರವಿರಿ.

**ಮಿಥುನ:** ಅಧಿಕ ತಿರುಗಾಟ, ಋಣ ಭಾದೆ, ದುಷ್ಟ ಜನರಿಂದ ದೂರವಿರಿ, ಅಲ್ಪ ಕಾರ್ಯಸಿದ್ಧಿ, ವಿಪರೀತ ವ್ಯಸನ.

**ಕಟಕ:** ಅಮೂಲ್ಯ ವಸ್ತುಗಳ ಖರೀದಿ, ಮಾತೃವಿನಿಂದ ಸಹಾಯ, ಹಿತ ಶತ್ರು ಭಾದೆ, ಪರಿಶ್ರಮದಿಂದ ಅಭಿವೃದ್ಧಿ.

**ಸಿಂಹ:** ಕೆಲಸದಲ್ಲಿ ಏಕಾಗ್ರತೆ, ತೀರ್ಥ ಯಾತ್ರೆಯ ದರ್ಶನ, ಮಾನಸಿಕ ನೆಮ್ಮದಿ, ವಿದೇಶ ಪ್ರಯಾಣ, ವೃತ್ತಿಯಲ್ಲಿ ಯಶಸ್ಸು.

**ಕನ್ಯಾ:** ನೂತನ ಕೆಲಸ ಕಾರ್ಯಗಳಲ್ಲಿ ಭಾಗಿ, ದಾಂಪತ್ಯದಲ್ಲಿ ಪ್ರೀತಿ, ತಾಳ್ಮೆ ಅಗತ್ಯ, ಆತ್ಮವಿಶ್ವಾಸ ಅತಿಯಾದಲ್ಲಿ ನಷ್ಟವಾಗಬಹುದು.

**ತುಲಾ:** ನಯವಂಚಕರ ಮಾತಿಗೆ ಮರುಳಾಗದಿರಿ, ಕೆಲಸ ಕಾರ್ಯಗಳಲ್ಲಿ ವಿಳಂಬ, ಮತ್ತೊಬ್ಬರ ವಿಷಯದಲ್ಲಿ ಪ್ರವೇಶ ಮಾಡದಿರಿ.

**ವೃಶ್ಚಿಕ:** ಭೂಲಾಭ, ಚಂಚಲ ಸ್ವಭಾವ, ಪರಸ್ತ್ರೀಯಿಂದ ಯಿಂದ ತೊಂದರೆ, ಅಕಾಲ ಭೋಜನ.

**ಧನಸ್ಸು:** ಕೆಲಸ ಕಾರ್ಯಗಳಲ್ಲಿ ಜಯ, ನಿರೀಕ್ಷೆತೆಗೂ ಮೀರಿದ ಆದಾಯ, ಕುಲದೇವರ ಆರಾಧನೆಯಿಂದ ಶುಭ ಫಲ.

**ಮಕರ:** ಸ್ವಂತ ಉದ್ಯಮಿಗಳಿಗೆ ಲಾಭ, ವಸ್ತ್ರ ವ್ಯಾಪಾರಿಗಳಿಗೆ ಉತ್ತಮ, ಮತ್ತೊಬ್ಬರ ಮನಸ್ಸನ್ನು ನೋಯಿಸದಿರಿ.

**ಕುಂಭ:** ಪ್ರಯತ್ನದಿಂದ ಕಾರ್ಯ ಸಫಲ, ಭಯ ಭೀತಿ ನಿವಾರಣೆ, ಮಾಡುವ ಕೆಲಸದಲ್ಲಿ ಶ್ರದ್ಧೆ.

**ಮೀನ:** ಯಾರನ್ನು ಹೆಚ್ಚಾಗಿ ನಂಬಬೇಡಿ,ಕೆಲಸ ಕಾರ್ಯಗಳಲ್ಲಿ ವಿಳಂಬ, ಸಂಬಂಧಿಕರಲ್ಲಿ ಕಲಹ, ಷೇರು ವ್ಯವಹಾರಗಳಲ್ಲಿ ನಷ್ಟ.

## ಪರ್ಪಲ್ ಹಾರ್ಟ್ ಡೇ




ಆಗಸ್ಟ್ 7 ರಂದು ಪರ್ಪಲ್ ಹಾರ್ಟ್ ಡೇ ಅನ್ನು ಮರಳಿ ನೀಡಲು ರಚಿಸಲಾದ ದಿನವಾಗಿದೆ. ಅಮೆರಿಕನ್ನರು ತಮ್ಮ ದೇಶವನ್ನು ಧೈರ್ಯದಿಂದ ಪ್ರತಿನಿಧಿಸಿದ ಮತ್ತು ಸೇವೆ ಮಾಡುವಾಗ ಗಾಯಗೊಂಡ ಅಥವಾ ಕೊಲ್ಲಲ್ಪಟ್ಟ ಪುರುಷರು ಮತ್ತು ಮಹಿಳೆಯರನ್ನು ನೆನಪಿಟ್ಟುಕೊಳ್ಳಲು ಮತ್ತು ಗೌರವಿಸಲು ಒಂದು ದಿನವಾಗಿದೆ. ಈ ಜನರನ್ನು ಅಧ್ಯಕ್ಷರ ಹೆಸರಿನಲ್ಲಿ ಪರ್ಪಲ್ ಹಾರ್ಟ್ನಿಂದ ಅಲಂಕರಿಸಲಾಗಿದೆ ಮತ್ತು ಈ ದಿನ ಅವರನ್ನು ಮತ್ತು ಅವರ ತ್ಯಾಗವನ್ನು ಸ್ಮರಿಸುವುದಕ್ಕಾಗಿ. ಕೆಲವು ಕ್ರೀಡೆಗಳು ಮತ್ತು ಮನರಂಜನಾ ಘಟಕಗಳಂತೆ ಕೆಲವು ರಾಜ್ಯಗಳು, ಕೌಂಟಿಗಳು ಮತ್ತು ನಗರಗಳು ಗುರುತಿಸುವಿಕೆಗಾಗಿ ವಿರಾಮಗೊಳಿಸುತ್ತವೆ. ಮಿಲಿಟರಿ ಮತ್ತು ಅನುಭವಿ ಸಂಸ್ಥೆಗಳು ಸಹ ಸ್ಮರಣಾರ್ಥ ಸಭೆಗಳನ್ನು ನಡೆಸುತ್ತವೆ. ಪರ್ಪಲ್ ಹಾರ್ಟ್ ನೀಡಿದವರನ್ನು ನಾವು ಗೌರವಿಸುವಂತೆ ನಮ್ಮೊಂದಿಗೆ ಸೇರಿ. ಬ್ಯಾಡ್ಜ್ ಆಫ್ ಮೆರಿಟ್ ಎಂದು ಗೊತ್ತುಪಡಿಸಿದ ಮೂಲ ಪರ್ಪಲ್ ಹಾರ್ಟ್ ಅನ್ನು 1782 ರಲ್ಲಿ ಜಾರ್ಜ್ ವಾಷಿಂಗ್ಟನ್ ನೀಡಲಾಯಿತು. ಆ ಸಮಯದಲ್ಲಿ ಕಾಂಟಿನೆಂಟಲ್ ಆರ್ಮಿಯಲ್ಲಿ ಹಣದ ಕೊರತೆಯಿತ್ತು ಆದ್ದರಿಂದ ಪ್ರಶಸ್ತಿಯು ಸೇರ್ಪಡೆಗೊಂಡ ಮತ್ತು ಅರ್ಹ ಜನರನ್ನು ಗೌರವಿಸುವ ಮಾರ್ಗವಾಗಿದೆ. ಗೌರವವನ್ನು ಸೈನಿಕರಿಗೆ ಯಾವುದೇ ವಿಶಿಷ್ಟವಾದ ಅರ್ಹವಾದ ಕ್ರಿಯೆಗಾಗಿ ನೀಡಲಾಗುತ್ತದೆ. ಇದನ್ನು ಬೆಳ್ಳಿಯ ತೆಳುವಾದ ಅಂಚಿನೊಂದಿಗೆ ಬಂಧಿಸಿದ ರೇಷ್ಮೆ ತುಂಡಿನಿಂದ ವಿನ್ಯಾಸಗೊಳಿಸಲಾಗಿದೆ. ವಾಷಿಂಗ್ಟನ್ ಸ್ವತಃ ಮೂರು ಬ್ಯಾಡ್ಜ್ಗಳನ್ನು ಮಾತ್ರ ನೀಡಿತು ಮತ್ತು ಬದಲಿಗೆ ಅವರು ಸರಿಹೊಂದುವಂತೆ ಬ್ಯಾಡ್ಜ್ಗಳನ್ನು ನೀಡಲು ಅಧೀನ ಅಧಿಕಾರಿಗಳಿಗೆ ಅಧಿಕಾರ ನೀಡಿದರು. ಬ್ಯಾಡ್ಜ್ ಆಫ್ ಮೆರಿಟ್ ಬಳಕೆಯಿಂದ ಮರೆಯಾಯಿತು ಆದರೆ 1932 ರಲ್ಲಿ ಪುನರುಜ್ಜೀವನಗೊಂಡಿತು ಮತ್ತು ಈ ಬಾರಿ ಪರ್ಪಲ್ ಹಾರ್ಟ್ ಎಂದು ಮರುಪ್ರಾರಂಭಿಸಲಾಯಿತು. ಯುದ್ಧದಲ್ಲಿ ಗಾಯಗೊಂಡವರನ್ನು ಗೌರವಿಸುವುದರ ಜೊತೆಗೆ, ಪರ್ಪಲ್ ಹಾರ್ಟ್ನ ಈ ಪುನರಾವರ್ತನೆಯು ಶ್ಲಾಘನೀಯ ಕ್ರಮವನ್ನು ಗುರುತಿಸಿದೆ. 1944 ರಲ್ಲಿ ಈ ನೀತಿಯನ್ನು ಸ್ವಲ್ಪಮಟ್ಟಿಗೆ ತಿರುಚಲಾಯಿತು ಮತ್ತು ಪರ್ಪಲ್ ಹಾರ್ಟ್ಗೆ ನಾವು ಇಂದು ತಿಳಿದಿರುವ ಉದ್ದೇಶವನ್ನು ನೀಡಲಾಯಿತು, ನಿರ್ದಿಷ್ಟವಾಗಿ ಗಾಯಗೊಂಡ ಅಥವಾ ಮರಣ ಹೊಂದಿದವರನ್ನು ಗೌರವಿಸಲು. ವಿಶ್ವ ಸಮರ ಋಋ ರ ಸಮಯದಲ್ಲಿ ಪೆಸಿಫಿಕ್ ರಂಗಭೂಮಿಯಲ್ಲಿ ಅವರ ಸೇವೆಗಾಗಿ ಜನರಲ್ ಡೌಗ್ಲಾಸ್ ಮ್ಯಾಕ್ಆರ್ಥರ್ ಅವರು ಆಧುನಿಕ ಪರ್ಪಲ್ ಹಾರ್ಟ್ ಅನ್ನು ನೀಡಿದ ಮೊದಲ ಸೇವಾ ಸದಸ್ಯರಾಗಿದ್ದರು. ಒಟ್ಟಾರೆಯಾಗಿ ವರ್ಷಗಳಲ್ಲಿ 1.8 ಮಿಲಿಯನ್ ಪರ್ಪಲ್ ಹಾರ್ಟ್ಸ್ ನೀಡಲಾಗಿದೆ.ಪರ್ಪಲ್ ಹಾರ್ಟ್ ಡೇ ಅನ್ನು ಮೊದಲ ಬಾರಿಗೆ 2014 ರಲ್ಲಿ ಆಚರಿಸಲಾಯಿತು ಮತ್ತು ಪ್ರತಿ ವರ್ಷವೂ ಆಚರಿಸಲಾಗುತ್ತದೆ. ಯುಎಸ್ಗಾಗಿ ಹೋರಾಡಿದವರ ಶೌರ್ಯವನ್ನು ಪ್ರತಿಬಿಂಬಿಸಲು ಮತ್ತು ಅವರ ಧೈರ್ಯವನ್ನು ಎಂದಿಗೂ ಮರೆಯುವುದಿಲ್ಲ ಎಂದು ಖಚಿತಪಡಿಸಿಕೊಳ್ಳಲು ಇದು ಒಂದು ಅವಕಾಶ.

# ರಾಷ್ಟ್ರಪತಿ ಮುರ್ಮುಗೆ ಫಿಜಿಯ ಅತ್ಯುನ್ನತ ನಾಗರಿಕ ಪ್ರಶಸ್ತಿ



**ಸುವಾ:** ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಫಿಜಿ ದೇಶದ ಅತ್ಯುನ್ನತ ನಾಗರಿಕ ಪ್ರಶಸ್ತಿ ''ಕಂಪಾನಿಯನ್ ಆಫ್ ಆರ್ಡರ್ ಆಫ್ ಫಿಜಿ'ಗೆ ಭಾಜನರಾಗಿದ್ದಾರೆ. ಈ ಬಗ್ಗೆ ಟ್ವೀಟ್ ಮಾಡಿರುವ ರಾಷ್ಟ್ರಪತಿ ಕಚೇರಿ, ''ಫಿಜಿ ಅಧ್ಯಕ್ಷ ರತು ವಿಲಿಯಮ್ ಮೈವಲಿಲಿ ಕಟೋನಿವೆರೆ ಅವರು ಭಾರತದ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಗೆ ಕಂಪಾನಿಯನ್ ಆಫ್ ಆರ್ಡರ್ ಆಫ್ ಫಿಜಿ ಪ್ರಶಸ್ತಿ ನೀಡಿ ಗೌರವಿಸಿದ್ದಾರೆ.ಇದು ಫಿಜಿಯ ಅತ್ಯುನ್ನತ ಗೌರವವಾಗಿದೆ' ಎಂದು ಬರೆದುಕೊಂಡಿದೆ. ರಾಷ್ಟ್ರಪತಿಗಳು 2 ದಿನಗಳ ಫಿಜಿ ಪ್ರವಾಸದಲ್ಲಿ ಇದ್ದಾರೆ. ಮಂಗಳವಾರ ಅವರು ಫಿಜಿ ಸಂಸತ್ ಅನ್ನು ಉದ್ದೇಶಿಸಿ ಭಾಷಣ ಮಾಡಿದ್ದಾರೆ.

# ಗ್ರೀಕ್ ಅತಂತ್ರ ಸ್ಥಿತಿಯಲ್ಲಿದ್ದ 75 ವಲಸಿಗರ ರಕ್ಷಣೆ



**ಅಥೆನ್ಸ್:** ಗ್ರೀಸ್‌ನ ನೈಋತ್ಯ ಕರಾವಳಿಯ ಬಳಿ ಹಾಯಿದೋಣಿಯಲ್ಲಿ ಅತಂತ್ರ ಸ್ಥಿತಿಯಲ್ಲಿ ಪತ್ತೆಯಾದ 75 ವಲಸಿಗರನ್ನು ರಕ್ಷಿಸಲಾಗಿದ್ದು ಅವರನ್ನು ಸಮೀಪದ ಪ್ರಮುಖ ಬಂದರಿಗೆ ಸ್ಥಳಾಂತರಿಸಲಾಗಿದೆ ಎಂದು ಗ್ರೀಕ್ ಅಧಿಕಾರಿಗಳು ಮಂಗಳವಾರ ಹೇಳಿದ್ದಾರೆ.

ಮಾಲ್ಟಾದ ಧ್ವಜ ಹೊಂದಿದ್ದ ದೋಣಿಯು ಪೈಲೋಸ್ ಪಟ್ಟಣದ ನೈಋತ್ಯದಲ್ಲಿ 112 ನಾಟಿಕಲ್ ಮೈಲುಗಳ ದೂರದಲ್ಲಿ ಮಂಗಳವಾರ ಕಂಡು ಬಂದಿದೆ. ಗ್ರೀಸ್ನ ಶೋಧ ಮತ್ತು ರಕ್ಷಣಾ ಪ್ರಾಧಿಕಾರದ ಸಂಘಟಿತ ಕಾರ್ಯಾಚರಣೆಯಲ್ಲಿ ದೋಣಿಯಲ್ಲಿದ್ದ ಎಲ್ಲರನ್ನೂ ವಿಹಾರ ನೌಕೆಯ ಮೂಲಕ ರಕ್ಷಿಸಲಾಗಿದ್ದು ದಕ್ಷಿಣ ಗ್ರೀಕ್ನ ಕಲಮಾತ ಬಂದರು ನಗರಕ್ಕೆ ಸ್ಥಳಾಂತರಿಸಲಾಗಿದೆ. ಯಾರಾದೂ ನಾಪತ್ತೆಯಾಗಿದ್ದಾರೆಯೇ ಎಂಬ ಬಗ್ಗೆ ಅಥವಾ ದೋಣಿಯಲ್ಲಿದ್ದವರ ರಾಷ್ಟ್ರೀಯತೆಯ ಬಗ್ಗೆ ಹೆಚ್ಚಿನ ಮಾಹಿತಿಯಿಲ್ಲ ಎಂದು ಅಧಿಕಾರಿಗಳು ಹೇಳಿದ್ದಾರೆ. ಮಧ್ಯಪ್ರಾಚ್ಯ, ಏಶ್ಯಾ ಮತ್ತು ಆಫ್ರಿಕಾದಿಂದ ಯುರೋಪಿಯನ್ ಯೂನಿಯನ್ನತ್ತ ವಲಸೆ ಹೋಗುವ ಅತ್ಯಂತ ಜನಪ್ರಿಯ ಸಮುದ್ರ ಮಾರ್ಗಗಳಲ್ಲಿ ಗ್ರೀಸ್ ಕರಾವಳಿ ಕೂಡಾ ಸೇರಿದೆ.

## ಬಾಂಗ್ಲಾದೇಶದ ಅವಾಮಿ ಲೀಗ್ ನಾಯಕನ ಹೋಟೆಲ್‌ಗೆ ಬೆಂಕಿ: 24 ಮಂದಿ ಬಲಿ

**ಢಾಕಾ:** ಬಾಂಗ್ಲಾದೇಶದ ಅವಾಮಿ ಲೀಗ್ ಪಕ್ಷದ ನಾಯಕರೊಬ್ಬರ ಒಡೆತನದ ಹೋಟೆಲ್ ಗೆ ಪ್ರತಿಭಟನಾಕಾರರು ಬೆಂಕಿ ಇಟ್ಟ ಪರಿಣಾಮ, ಇಂಡೋನೇಷ್ಯಾ ಪ್ರಜೆ ಸೇರಿದಂತೆ ಕನಿಷ್ಠ 24 ಜನರನ್ನು ಗುಂಪೊಂದು ಜೀವಂತವಾಗಿ ಸುಟ್ಟುಹಾಕಿದೆ ಎಂದು ಸ್ಥಳೀಯ ಪತ್ರಕರ್ತರು ಮತ್ತು ಆಸ್ಪತ್ರೆ ಮೂಲಗಳನ್ನು ಉಲ್ಲೇಖಿಸಿ ಪಿಟಿಐ ವರದಿ ಮಾಡಿದೆ. ಶೇಖ್ ಹಸೀನಾ ಅವರು ಪ್ರಧಾನಿ ಸ್ಥಾನಕ್ಕೆ ರಾಜೀನಾಮೆ ನೀಡಿ ದೇಶದಿಂದ ಪಲಾಯನ ಮಾಡಿದ ನಂತರ ಸೋಮವಾರ ತಡರಾತ್ರಿ ಈ ದುರಂತ ಘಟನೆ ನಡೆದಿದೆ. ಜೋಶೋರ್ ಜಿಲ್ಲೆಯ ಜಿಲ್ಲಾ ಅವಾಮಿ ಲೀಗ್ ಪ್ರಧಾನ ಕಾರ್ಯದರ್ಶಿ ಶಾಹಿನ್ ಚಕ್ಲಾದಾರ್ ಒಡೆತನದ ಜಬೀರ್ ಇಂಟರ್ನ್ಯಾಷನಲ್ ಹೋಟೆಲ್ಗೆ ಗುಂಪು ಬೆಂಕಿ ಹಚ್ಚಿದಾಗ ಸಂತ್ರಸ್ತರು, ಮುಖ್ಯವಾಗಿ ಅತಿಥಿಗಳು ಸಿಕ್ಕಿಬಿದ್ದು ಜೀವಂತವಾಗಿ ಸುಟ್ಟುಹೋದರು. ಘಟನೆಯಲ್ಲಿ ಇಬ್ಬರು ಭಾರತೀಯ ನಾಗರಿಕರು ಗಂಭೀರವಾಗಿ ಗಾಯಗೊಂಡಿದ್ದಾರೆ. ಮೃತರಲ್ಲಿ ಇಂಡೋನೇಷ್ಯಾ ಪ್ರಜೆಯೂ ಸೇರಿದ್ದಾರೆ ಎಂದು ಸ್ಥಳೀಯ ಪತ್ರಕರ್ತರೊಬ್ಬರು ವರದಿಯಲ್ಲಿ ಉಲ್ಲೇಖಿಸಿದ್ದಾರೆ.



## ಮನು ಭಾಕರ್, ಸ್ವಪ್ನಿಲ್ ಸೇರಿ ಭಾರತೀಯ ಆಟಗಾರರ ಸಾಧನೆ ಕೊಂಡಾಡಿದ ನೀತಾ ಅಂಬಾನಿ




**ಪ್ಯಾರಿಸ್:** ಒಲಿಂಪಿಕ್ಸ್‌ನಲ್ಲಿ ಭಾರತಕ್ಕಾಗಿ ಪದಕ ಗೆದ್ದ ಸ್ಟಾರ್ ಮಹಿಳಾ ಶೂಟರ್ಗಳಾದ ಮನು ಭಾಕರ್ ಮತ್ತು ಸ್ವಪ್ನಿಲ್ ಕುಸಾಲೆ ಸೇರಿ ಅನೇಕ ಭಾರತೀಯ ಕ್ರೀಡಾಪಟುಗಳು ಇಂಡಿಯಾ ಹೌಸ್ ನಲ್ಲಿ ಭಾರತೀಯತೆಯನ್ನು ಸಂಭ್ರಮಿಸಿದರು. ಈ ಎಲ್ಲರನ್ನೂ ರಿಲಯನ್ಸ್ ಫೌಂಡೇಷನ್ ಅಧ್ಯಕ್ಷೆ ಮತ್ತು ಐಒಸಿ ಸದಸ್ಯೆಯೂ ಆದ ನೀತಾ ಅಂಬಾನಿ ಅವರು ಸ್ವಾಗತಿಸಿ, ಪ್ರೋತ್ಸಾಹಿಸಿದರು.

ಇಂಡಿಯಾ ಹೌಸ್ ಗೆ ಬಂದ ಆಟಗಾರರಲ್ಲಿ ಬ್ಯಾಡ್ಮಿಂಟನ್ ಆಟಗಾರರಾದ ಲಕ್ಷ್ಯ ಸೇನ್, ವಿಶ್ವ ಚಾಂಪಿಯನ್ ಬಾಕ್ಸರ್ ಲೊವ್ಲಿನಾ ಬೊರ್ಗೊಹೈನ್, ಸ್ಕೀಟ್ ಶೂಟರ್ ಮಹೇಶ್ವರಿ ಚೌಹಾಣ್, ಅನಂತ್ಜಿತ್ ಸಿಂಗ್ ನರುಕಾ, ಶೂಟರ್ಗಳಾದ ಐಶ್ವರ್ಯ ಪ್ರತಾಪ್ ಸಿಂಗ್ ತೋಮರ್, ಅಂಜುಮ್ ಮೌದ್ಗಿಲ್, ಸಿಫ್ಟ್ ಕೌರ್ ಸಮ್ರಾ, ಇಶಾ ಸಿಂಗ್, ರೈಜಾ ಭಾನ್ ಧಿಲ್ಲಾನ್, ಅನಿಶ್ವ ಭಾನ್ ಧಿಲ್ಲಾನ್, ಬಾಕ್ಸರ್ ನಿಶಾಂತ್ ದೇವ್, ಅಥ್ಲೆಟಿಕ್ಸ್ ತಂಡದ ಅಕ್ಷದೀಪ್ ಸಿಂಗ್, ಪರಮ್ಜಿತ್ ಸಿಂಗ್ ಬಿಶ್ತ್, ವಿಕಾಸ್ ಸಿಂಗ್, ತಜಿಂದರ್ ಪಾಲ್ ಸಿಂಗ್ ತೂರ್, ಅಂಕಿತಾ ಧ್ಯಾನಿ, ಜೆಸ್ವಿನ್ ಆಲ್ಡ್ರಿನ್ ಮತ್ತು ಪಾರುಲ್ ಚೌಧರಿ ಮತ್ತಿತರರು ಇದ್ದರು.

ಮನು ಅವರನ್ನು ಸ್ಫೂರ್ತಿ ಎಂದು ಬಣ್ಣಿಸಿದ ನೀತಾ ಅಂಬಾನಿ, ಹರಿಯಾಣದ ಹಳ್ಳಿಯೊಂದರ 22 ವರ್ಷದ ಯುವತಿ ಕಳೆದ ವಾರ ಪ್ಯಾರಿಸ್ನಲ್ಲಿ ಇತಿಹಾಸವನ್ನು ಸೃಷ್ಟಿಸಿದರು ಮತ್ತು ತನ್ನ ಕನಸುಗಳು, ಉತ್ಸಾಹ ಮತ್ತು ಕಠಿಣ ಪರಿಶ್ರಮದ ಶಕ್ತಿಯನ್ನು ಜಗತ್ತಿಗೆ ತೋರಿಸಿದರು! ಆಕೆ ಎರಡು ಪದಕವನ್ನು ಗೆದ್ದಿದ್ದಾರೆ. ಅದೇ ಒಲಿಂಪಿಕ್ಸ್ನಲ್ಲಿ ಪ್ರತಿ ಭಾರತೀಯರೂ ನಿಮ್ಮ ಸಾಧನೆಗಳಿಂದ ಸ್ಫೂರ್ತಿ ಪಡೆದಿದ್ದಾರೆ ಮತ್ತು ಭಾರತದ ಪ್ರತಿ ಹುಡುಗಿ ಸಬಲಳಾಗಿದ್ದಾಳೆ,'' ಎಂದಿದ್ದಾರೆ.ಪದಕಗಳು ಮತ್ತು ದಾಖಲೆಗಳ ಆಚೆಗೆ, ಕ್ರೀಡೆಯು ಮಾನವೀಯ ಚೈತನ್ಯ, ಕಠಿಣ ಪರಿಶ್ರಮ, ಪ್ರತಿಕೂಲತೆಯನ್ನು ಎದುರಿಸುವ ನಮ್ಮ ಸಾಮರ್ಥ್ಯ ಎಂದಿಗೂ ಬಿಟ್ಟುಕೊಡುವುದಿಲ್ಲ! ನಮ್ಮ ಪ್ರತಿ ಕ್ರೀಡಾಪಟು ಪ್ಯಾರಿಸ್ನಲ್ಲಿ ಇದೇ ಮನೋಭಾವವನ್ನು ತೋರಿಸಿದ್ದಾರೆ. ಇಂದು ನಾವು ಟೀಮ್ ಇಂಡಿಯಾದ ಚಾಂಪಿಯನ್ಗಳಾದ ನಿಮ್ಮೆಲ್ಲರನ್ನೂ ಸಂಭ್ರಮಿಸುತ್ತಿದ್ದೇವೆ!'' ಎಂದು ಹೇಳಿದ್ದಾರೆ.

# ಪ್ರಧಾನಿ ವಿರುದ್ಧ ಬಿಜೆಪಿ ನಾಯಕ ಸುಬ್ರಮಣಿಯನ್ ಸ್ವಾಮಿ ಕಿಡಿ





ನವದೆಹಲಿ: ಪ್ರಧಾನಿ ನರೇಂದ್ರ ಮೋದಿ ಅವರ ವಿರುದ್ಧ ಬಿಜೆಪಿ ಹಿರಿಯ ನಾಯಕ ಸುಬ್ರಮಣಿಯನ್ ಸ್ವಾಮಿ ಕಿಡಿಕಾರಿದ್ದಾರೆ.

ಬಾಂಗ್ಲಾ ದೇಶದಲ್ಲಿ ನಡೆಯುತ್ತಿರುವ ಹಿಂಸಾಚಾರದ ಕುರಿತು ಎಕ್ಸ್ನಲ್ಲಿ ಪ್ರತಿಕ್ರಿಯೆ ನೀಡಿರುವ ಅವರು, ಮೋದಿ ರಾಜೀನಾಮೆ ಕೇಳಿ ಎಂದು ಒತ್ತಾಯಿಸಿದ್ದಾರೆ.

ಲಡಾಖ್ನಲ್ಲಿ ಭಾರತದ 4067 ಚದರ ಏಒ ಭೂಮಿ ಚೀನಾ ಆಕ್ರಮಿಸಿದಾಗ ಮೋದಿ ಹೇಡಿಯಂತೆ ಇದ್ದರು. ಮಾಲ್ಡೀವ್ಸ್ ನಾಯಕರು ಭಾರತೀಯರು ತಮ್ಮ ದೇಶವನ್ನು ತೊರೆಯುವಂತೆ ಕರೆ ನೀಡಿದಾಗ ಮೋದಿ ಅಲುಗಾಡಲಿಲ್ಲ. ಈಗ ಬಾಂಗ್ಲಾ ಪ್ರಧಾನಿಯನ್ನು ಮುಸ್ಲಿಮರು ಬೆನ್ನಟ್ಟುತ್ತಿರುವಾಗ ನಡುಗುತ್ತಿದ್ದಾರೆ. ನೇಪಾಳದ ಬಗ್ಗೆ ಕೇಳಬೇಡಿ.. ಮೋದಿಯವರಿಗೆ ರಾಜೀನಾಮೆ ಕೊಡಿ ಎಂದು ಕೇಳಿ ಎಂದಿದ್ದಾರೆ.

ಬಾಂಗ್ಲಾದೇಶದ ಘರ್ಷಣೆ ಬಗ್ಗೆ ಮೋದಿ ಯಾಕೆ ಮೌನವಹಿಸಿದ್ದಾರೆ? ಭಾರತದ ವಿದೇಶಾಂಗ ವ್ಯವಹಾರಗಳ ಸಚಿವಾಲಯವು ಕೂಡ ವಾಸ್ತವದ ಬಗ್ಗೆ ಏನನ್ನೂ ಹೇಳಿಲ್ಲ. ಚೀನಾ, ಪಾಕಿಸ್ತಾನ ಮತ್ತು ಪರೋಕ್ಷವಾಗಿ ಅಮೆರಿಕವು ಬಾಂಗ್ಲಾದಲ್ಲಿ ಹೊಸ ಸರ್ಕಾರ ರಚನೆಗೆ ಬೆಂಬಲ ನೀಡಿದೆ. ಆದರೆ ಭಾರತವು ಒಳ್ಳೆಯದು ಅಥವಾ ಕೆಟ್ಟದು ಎಂದು ಹೇಳುತ್ತಿಲ್ಲ. ಯಾರೂ ಬಂದಿಲ್ಲ ಎನ್ನುವ ರೀತಿಯ ವರ್ತನೆ ಮಾಡುತ್ತಿದೆ? ಹಸೀನಾರನ್ನು ಕೈಬಿಡುವ ಯೋಜನೆ ಮೋದಿ ಮಾಡಬಹುದು ಎಂದು ಹೇಳಿದರು.

## ಢಾಕಾ ಏರ್ ಪೋರ್ಟ್‌ನಲ್ಲಿ ಮಾಜಿ ಸಚಿವ ಅರೆಸ್ಟ್

**ಬಾಂಗ್ಲಾ:** ಬಾಂಗ್ಲಾದೇಶದ ಮಾಜಿ ವಿದೇಶಾಂಗ ಸಚಿವ ಹಸನ್ ಮಹಮೂದ್ ಅವರನ್ನು ಬಂಧಿಸಲಾಗಿದೆ.

ಢಾಕಾದ ಹಜರತ್ ಶಹಜಲಾಲ್ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಮಾಜಿ ಸಚಿವರನ್ನು ಬಂಧಿಸಲಾಗಿದೆ .

ಜೊತೆಗೆ ಮಾಹಿತಿ ಮತ್ತು ಪ್ರಸಾರ ಮಾಜಿ ಸಚಿವ ಜುನೈದ್ ಅಹ್ಮದ್ ಪಾಲಕ್ ಅವರನ್ನು ಕೂಡ ಢಾಕಾ ವಿಮಾನ ನಿಲ್ದಾಣದಲ್ಲಿ ಬಂಧಿಸಲಾಯಿತು.

ವಿಮಾನ ನಿಲ್ದಾಣದ ಅಧಿಕಾರಿಗಳು ಪಾಲಕ್ ಅವರನ್ನು ದೇಶ ತೊರೆಯುವುದನ್ನು ನಿರ್ಬಂಧಿಸಿದ್ದಾರೆ. ಅವಾಮಿ ಲೀಗ್ ನಾಯಕ ದೆಹಲಿಗೆ ಪಲಾಯನ ಮಾಡಲು ಢಾಕಾ ವಿಮಾನ ನಿಲ್ದಾಣಕ್ಕೆ ಹೋಗಿದ್ದರು. ಆದರೆ ವಿಮಾನವನ್ನು ಹತ್ತಲು ಅನುಮತಿಸಲಿಲ್ಲ. ವಲಸೆಯ ಸಮಯದಲ್ಲಿ ಅವರನ್ನು ಬಂಧಿಸಲಾಯಿತು ಎಂದು ವರದಿಯಾಗಿದೆ.



## 40 ಕಿಮೀ ಉದ್ದಕ್ಕೂ ಶವಗಳಿಗಾಗಿ ಹುಡುಕಾಟ

**ವಯನಾಡು:** ಇಲ್ಲಿ ಭೂಕುಸಿತ ದುರಂತ ನಡೆದು ಏಳು ದಿನ ಕಳೆದಿದೆ. ಮೃತರ ಸಂಖ್ಯೆ 400 ದಾಟಿದೆ. ಇನ್ನೂ 250ಕ್ಕೂ ಹೆಚ್ಚು ಜನ ಪತ್ತೆಯಾಗಬೇಕಿದೆ. ಮುಂಡಕ್ಕೈ, ಚುರಲ್ಮಲದಲ್ಲಿ ಶೋಧಕಾರ್ಯ ಮುಂದುವರಿದಿದೆ. ಚಲಿಯಾರ್ ನದಿ ವ್ಯಾಪ್ತಿಯ 40 ಕಿಲೋಮೀಟರ್ ಉದ್ದಕ್ಕೂ ಶವಗಳಿಗಾಗಿ ಹುಡುಕಾಟ ನಡೆದಿದೆ. ಕಾಂತನ್‌ಪಾರಾ ಬಳಿ ಅಪಾಯಕ್ಕೆ ಸಿಲುಕಿದ್ದ 18 ರಕ್ಷಣಾ ಸಿಬ್ಬಂದಿಯನ್ನ ಹೆಲಿಕಾಪ್ಟರ್ ಮೂಲಕ ರಕ್ಷಿಸಲಾಗಿದೆ.ಮಧ್ಯರಾತ್ರಿ ಗುಡ್ಡ ಕುಸಿತ ಸಂಭವಿಸುತ್ತಲೇ ಚುರುಲ್ಮಲದ ನೀತು ಜೋಜೋ ಎಂಬಾಕೆ ಫೋನ್ ಮಾಡಿ ಸಹಾಯಕ್ಕೆ ಮೊರೆ ಇಟ್ಟಿದ್ರು. ಕೆಲವೇ ನಿಮಿಷ ನಿಮ್ಮನ್ನು ತಲುಪ್ತೀವಿ ಎಂದು ರಕ್ಷಣಾ ಪಡೆಗಳು ಭರವಸೆ ನೀಡಿದ್ವು. ಆದ್ರೆ, ಜಲಸ್ಫೋಟದ ತೀವ್ರತೆಯಿಂದ ಅವರನ್ನು ತಲುಪಲಾಗಲಿಲ್ಲ. ನಿನ್ನೆ ರಾತ್ರಿ ನೀತು ಅವರ ಶವ ಸಾವಿನ ದಿಬ್ಬದಲ್ಲಿ ಪತ್ತೆಯಾಗಿದೆ ಎಂದು ಸೇನಾ ಮೂಲಗಳು ತಿಳಿಸಿವೆ. ಇನ್ನು, ಚುರಲ್ಮಲದಲ್ಲಿ 16 ಮಂದಿಯ ಕೂಡು ಕುಟುಂಬದಲ್ಲಿ ಈಗ ಒಬ್ಬರಷ್ಟೇ ಉಳಿದಿದ್ದಾರೆ. ಅದು ಅವರು ಬೇರೆ ಕಡೆ ಹೋಗಿದ್ದರಿಂದ ಜೀವಂತವಾಗಿದ್ದಾರೆ. ಅಂದಿನಿಂದ ತಮ್ಮವರಿಗಾಗಿ ಹುಡುಕಾಟ ನಡೆಸಿದ್ದಾರೆ. ಈವರೆಗೂ ನಾಲ್ವರ ಶವಗಳಷ್ಟೇ ಸಿಕ್ಕಿವೆ. ಉಳಿದವರಿಗಾಗಿ ರಸೂಲ್ ಶೋಧ ಕಾರ್ಯ ಮಾಡ್ತಿದ್ದಾರೆ. ಎಲ್ಲವನ್ನೂ ಕಳೆದುಕೊಂಡು ದುರಂತದಲ್ಲಿ ಬಚಾವ್ ಆದವರು ಬಿಕ್ಕಿ ಅಳುತ್ತಿದ್ದಾರೆ.

## ಮಾಜಿ ಕ್ರಿಕೆಟಿಗ ಮಶ್ರಫೆ ಮೊರ್ತಾಜಾ ಮನೆಗೆ ನುಗ್ಗಿ ಬೆಂಕಿ

**ಢಾಕಾ:** ಬಾಂಗ್ಲಾದೇಶದ ಪ್ರಧಾನಿ ಶೇಖ್ ಹಸೀನಾ ತನ್ನ ಪ್ರಧಾನಿ ಹುದ್ದೆಗೆ ರಾಜೀನಾಮೆ ನೀಡಿ ದೇಶ ತೊರೆದ ಬೆನ್ನಲ್ಲೇ ಬಾಂಗ್ಲಾದಲ್ಲಿ ಪುಂಡರ ಅಟ್ಟಹಾಸ ಮುಂದುವರೆದಿದೆ. ಪ್ರತಿಭಟನಾಕಾರರು ಬಾಂಗ್ಲಾದ ಮಾಜಿ ಕ್ರಿಕೆಟಿಗ, ಮತ್ತು ಸಂಸದ ಮಶ್ರಫೆ ಮೊರ್ತಾಜಾ ಅವರ ಮನೆಗೆ ಬೆಂಕಿ ಹಚ್ಚಿದ್ದಾರೆ.ಮಶ್ರಫ್-ಬಿನ್-ಮೊರ್ತಾಜಾ ಅವರು ಶೇಖ್ ಹಸಿನಾ ಅವರ ಪಕ್ಷವಾದ ಅವಾಮಿ ಲೀಗ್‌ನಿಂದ ಖುಲ್ನಾ ವಿಭಾಗದ ನರೈಲ್ ಕ್ಷೇತ್ರದ ಸಂಸದರಾಗಿ ಎರಡನೇ ಬಾರಿ ಆಯ್ಕೆಯಾಗಿದ್ದರು. ಪುಂಡರು ಮೊರ್ತಾಜಾ ಅವರ ಮನೆಗೆ ನುಗ್ಗಿ ಬೆಂಕಿ ಹಚ್ಚಿದ್ದಾರೆ ಎಂದು ತಿಳಿದು ಬಂದಿದೆ. ಮೊರ್ತಾಜಾ ಅವರು ಬಾಂಗ್ಲಾದೇಶದ ಪರವಾಗಿ 117 ಕ್ರಿಕೆಟ್ ಪಂದ್ಯಗಳನ್ನಾಡಿ ನಿವೃತ್ತಿ ಹೊಂದಿದ್ದಾರೆ. ಅಂತರರಾಷ್ಟ್ರಿಯ ಕ್ರಿಕೆಟ್‌ನಲ್ಲಿ 390 ವಿಕೆಟ್ ಗಳಿಸಿ 2,955 ರನ್ ಗಳಿಸಿದ್ದರು. ಕ್ರಿಕೆಟ್‌ಗೆ ವಿದಾಯ ಹೇಳಿದ ನಂತರ ಅವರು 2018 ರಲ್ಲಿ ರಾಜಕೀಯಕ್ಕೆ ಪ್ರವೇಶ ಮಾಡಿದ್ದ ಇವರು ರೈಲ್ ಕ್ಷೇತ್ರದಿಂದ ಅವರು ಎರಡು ಬಾರಿ ಸಂಸದರಾಗಿ ಸದಸ್ಯರಾಗಿ ಆಯ್ಕೆಯಾಗಿದ್ದರು. ಪುಂಡರು ಢಾಕಾದಲ್ಲಿರುವ ಅವಾಮಿ ಲೀಗ್ ಪಕ್ಷದ ಕಚೇರಿಗೂ ಕೂಡ ಬೆಂಕಿ ಹಚ್ಚಿದ್ದು, ಸುಭಾಷ್ ಚಂದ್ರ ಭೋಸ್ ಹೌಸ್ ಧ್ವಂಸಗೊಳಿಸಿದ್ದಾರೆ ಎಂದು ವರದಿಯಾಗಿದೆ.



# ಬ್ರಿಟನ್ ಗಲಭೆ: 6000 ವಿಶೇಷ ಪೊಲೀಸರು ಸನ್ನದ್ಧ



**ಲಂಡನ್:** ಮೂವರು ಎಳೆಯ ಮಕ್ಕಳ ಹತ್ಯೆಯ ಬಳಿಕ ಬ್ರಿಟನ್ನಲ್ಲಿ ಭುಗಿಲೆದ್ದ ಹಿಂಸಾಚಾರ ಮತ್ತು ಗಲಭೆಯನ್ನು ಹತ್ತಿಕ್ಕಲು 6000 ವಿಶೇಷ ಪೊಲೀಸ್ ಅಧಿಕಾರಿಗಳ ತಂಡವನ್ನು ಸನ್ನದ್ಧಗೊಳಿಸಿರುವುದಾಗಿ ಸರಕಾರದ ಮೂಲಗಳನ್ನು ಉಲ್ಲೇಖಿಸಿ ಸ್ಥಳೀಯ ಮಾಧ್ಯಮಗಳು ವರದಿ ಮಾಡಿವೆ.

ದಕ್ಷಿಣ ಇಂಗ್ಲೆಂಡ್ನ ಪ್ಲೈಮೌತ್ ನಗರದಲ್ಲಿ ಗಲಭೆಕೋರರು ಇಟ್ಟಿಗೆ ಮತ್ತು ಪಟಾಕಿಗಳನ್ನು ಪೊಲೀಸರತ್ತ ಎಸೆದಾಗ ಹಲವು ಅಧಿಕಾರಿಗಳು ಗಾಯಗೊಂಡಿದ್ದಾರೆ. ಘಟನೆಗೆ ಸಂಬಂಧಿಸಿ 6 ಮಂದಿಯನ್ನು ಬಂಧಿಸಲಾಗಿದೆ. ಉತ್ತರ ಐರ್ಲೆಂಡ್ನ ಬೆಲ್ಫಾಸ್ಟ್ನಲ್ಲಿ ವಿದೇಶಿ ಪ್ರಜೆಯೊಬ್ಬರ ಮಾಲಿಕತ್ವದ ಅಂಗಡಿಯೊಂದರ ಮೇಲೆ ದಾಳಿಗೆ ಯತ್ನಿಸಿದ ಗುಂಪನ್ನು ಪೊಲೀಸರು ಚದುರಿಸಿದ್ದಾರೆ. ಈ ಸಂದರ್ಭ ಓರ್ವ ವ್ಯಕ್ತಿ ಹಲ್ಲೆಯಿಂದ ಗಂಭೀರವಾಗಿ ಗಾಯಗೊಂಡಿದ್ದಾನೆ. ಹಲವು ಅಂಗಡಿ ಹಾಗೂ ವಾಹನಗಳಿಗೆ ಹಾನಿಯಾಗಿದೆ. ಗಲಭೆಗೆ ಸಂಬಂಧಿಸಿ ಇದುವರೆಗೆ 378 ಮಂದಿಯನ್ನು ಬಂಧಿಸಿರುವುದಾಗಿ ರಾಷ್ಟ್ರೀಯ ಪೊಲೀಸ್ ಅಧಿಕಾರಿಗಳ ಸಮಿತಿ ವರದಿ ಮಾಡಿದೆ.

# ಬಿಜೆಪಿ ಹಿರಿಯ ನಾಯಕ ಎಲ್.ಕೆ. ಅಡ್ವಾಣಿ ಮತ್ತೆ ಆಸ್ಪತ್ರೆಗೆ ದಾಖಲು



**ನವದೆಹಲಿ:** ಮಾಜಿ ಉಪ ಪ್ರಧಾನಿ, ಬಿಜೆಪಿ ಹಿರಿಯ ನಾಯಕ ಎಲ್.ಕೆ.ಅಡ್ವಾಣಿ ಅವರ ಆರೋಗ್ಯದಲ್ಲಿ ಮತ್ತೆ ಏರುಪೇರು ಉಂಟಾಗಿದ್ದು, ದೆಹಲಿಯಲ್ಲಿರುವ ಅಪೋಲೊ ಆಸ್ಪತ್ರೆಗೆ ದಾಖಲಿಸಲಾಗಿದೆ. ಅಪೋಲೊ ಆಸ್ಪತ್ರೆಯ ವೈದ್ಯರು ಎಲ್.ಕೆ.ಅಡ್ವಾಣಿ ಅವರಿಗೆ ಚಿಕಿತ್ಸೆ ನೀಡುತ್ತಿದ್ದು, ಹೆಚ್ಚಿನ ನಿಗಾ ವಹಿಸಿದ್ದಾರೆ.

ಆಸ್ಪತ್ರೆಯ ಮೂಲಗಳ ಪ್ರಕಾರ ಮಾಜಿ ಉಪ ಪ್ರಧಾನಿಯ ಆರೋಗ್ಯವು ಸ್ಥಿರವಾಗಿದೆ. ಯಾವುದೇ ಸಮಸ್ಯೆ ಇಲ್ಲ ಎಂದು ತಿಳಿದುಬಂದಿದೆ. ಇಂದು ಮಧ್ಯಾಹ್ನದ ಹೊತ್ತಿಗೆ ಎಲ್.ಕೆ.ಅಡ್ವಾಣಿ ಅವರ ಆರೋಗ್ಯದಲ್ಲಿ ಏರುಪೇರು ಉಂಟಾಗಿತ್ತು ತಕ್ಷಣ ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ತಿಳಿದುಬಂದಿದೆ. 96 ವರ್ಷದ ಎಲ್.ಕೆ.ಅಡ್ವಾಣಿ ಅವರು ವಯೋಸಹಜ ಕಾಯಿಲೆಯಿಂದ ಬಳಲುತ್ತಿದ್ದಾರೆ. ಜೂನ್ 27ರಂದು ಕೂಡ ಅಡ್ವಾಣಿ ಅವರ ಆರೋಗ್ಯದಲ್ಲಿ ಏರುಪೇರು ಆಗಿತ್ತು. ಹಾಗಾಗಿ ಅವರನ್ನು ಅದೇ ರಾತ್ರಿ ದೆಹಲಿಯಲ್ಲಿರುವ ಏಮ್ಸ್ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಇದಾದ ಕೆಲವೇ ಗಂಟೆಗಳಲ್ಲಿ ಅವರನ್ನು ಡಿಸ್ಚಾರ್ಜ್ ಮಾಡಲಾಗಿತ್ತು. ಜುಲೈನಲ್ಲೂ ಇದೇ ರೀತಿಯಾಗಿ ಏಕಾಏಕಿ ಆರೋಗ್ಯದಲ್ಲಿ ಏರುಪೇರಾಗಿತ್ತು. ಆಗಲೂ ಅವರನ್ನು ಅಪೋಲೋ ಆಸ್ಪತ್ರೆಗೆ ದಾಖಲಿಸಿ ಕೆಲವು ದಿನಗಳ ಕಾಲ ವೈದ್ಯರ ನಿಗಾದಲ್ಲಿರಿಸಲಾಗಿತ್ತು.ಸದ್ಯ ಅವರಿಗೆ ನರವಿಜ್ಞಾನ ವಿಭಾಗದ ಡಾ.ವಿನೀತ್ ಸೂರಿ ಅವರು ಚಿಕಿತ್ಸೆ ನೀಡುತ್ತಿದ್ದಾರೆ.

## ಡೆಮಾಕ್ರಟಿಕ್ ಪಕ್ಷದ ಅಧ್ಯಕ್ಷೀಯ ಅಭ್ಯರ್ಥಿಯಾಗಿ ಕಮಲಾ ಹ್ಯಾರಿಸ್ ಘೋಷಣೆ



**ವಾಷಿಂಗ್ಟನ್:** ಅಮೆರಿಕದ ಉಪಾಧ್ಯಕ್ಷೆ ಕಮಲಾ ಹ್ಯಾರಿಸ್ ಅವರು 2024ರ ಚುನಾವಣೆಗೆ ಡೆಮಾಕ್ರಟಿಕ್ ಪಕ್ಷದ ಅಧ್ಯಕ್ಷ ಸ್ಥಾನದ ಅಭ್ಯರ್ಥಿಯಾಗಿ ಅಧಿಕೃತವಾಗಿ ಘೋಷಿಸಲ್ಪಟ್ಟಿದ್ದಾರೆ. ಡೆಮಾಕ್ರಟಿಕ್ ನ್ಯಾಶನಲ್ ಕನ್ವೆನ್ಷನ್ ಪ್ರತಿನಿಧಿಗಳ ಐದು ದಿನಗಳ ಆನ್ಲೈನ್ ಮತದಾನ ಅಂತ್ಯಗೊಂಡಿದ್ದು, ಸೋಮವಾರ ತಡರಾತ್ರಿ ಅವರ ನಾಮನಿರ್ದೇಶನ ಅಧಿಕೃತವಾಗಿದೆ. ಈ ಮೂಲಕ ಕಮಲಾ ಹ್ಯಾರಿಸ್ ಯುಎಸ್ನ ಪ್ರಮುಖ ಪಕ್ಷದ ಟಿಕೆಟ್ಗೆ ಅಗ್ರಸ್ಥಾನದಲ್ಲಿರುವ ಮೊದಲ ಕಪ್ಪು ಮಹಿಳೆ ಮತ್ತು ಏಷ್ಯನ್ ಅಮೆರಿಕನ್ ಎಂಬ ಇತಿಹಾಸವನ್ನು ನಿರ್ಮಿಸಿದ್ದಾರೆ. ರೋಲ್ ಕಾಲ್ ವೋಟ್ನಲ್ಲಿ ಮತ ಚಲಾಯಿಸಿದ 4,567 ಪ್ರತಿನಿಧಿಗಳಲ್ಲಿ 99% ರಷ್ಟು ಪ್ರತಿನಿಧಿಗಳ ಬೆಂಬಲವನ್ನು ಕಮಲಾ ಗಳಿಸಿದ್ದಾರೆ ಎಂದು ಡಿಎನ್ಸಿ ತಿಳಿಸಿದೆ.

## ಟಿಮ್ ವಾಲ್ಜ್ ಡೆಮಾಕ್ರೆಟಿಕ್ ಪಕ್ಷದ ಉಪಾಧ್ಯಕ್ಷಸ್ಥಾನದ ಅಭ್ಯರ್ಥಿ!

**ಅಮೆರಿಕ:** ಅಮೆರಿಕ ಚುನಾವಣೆಗೆ ಉಪಾಧ್ಯಕ್ಷ ಸ್ಥಾನಕ್ಕೆ ಡೆಮಾಕ್ರೆಟಿಕ್ ಪಕ್ಷದ ಅಭ್ಯರ್ಥಿಯಾಗಿ ಮಿನ್ನೆಸೊಟಾದ ಗವರ್ನರ್ ಟಿಮ್ ವಾಲ್ಜ್ ಅವರ ಹೆಸರನ್ನು ಪಕ್ಷದ ಅಧ್ಯಕ್ಷ ಸ್ಥಾನದ ಅಭ್ಯರ್ಥಿ ಕಮಲಾ ಹ್ಯಾರಿಸ್ ಅಂತಿಮಗೊಳಿಸಿದ್ದಾರೆ.

ಪ್ರಗತಿಪರ ನೀತಿ ನಿರೂಪಕ ಎಂದೇ ಗುರುತಿಸಿಕೊಂಡಿರುವ ಟಿಮ್ ಅವರು ಮೃದುಭಾಷಿ. ಅಮೆರಿಕದ ಹೃದಯ ಭಾಗಕ್ಕೆ ಸೇರಿದ ಇವರ ಆಯ್ಕೆಯ ಮೂಲಕ ಗ್ರಾಮೀಣ ಹಾಗೂ ಬಿಳಿಯರ ಮತಗಳನ್ನು ಪಡೆಯುವ ಲೆಕ್ಕಾಚಾರ ಡೆಮಾಕ್ರೆಟಿಕ್ ಪಕ್ಷ ಹೊಂದಿದೆ ಎಂದೆನ್ನಲಾಗಿದೆ. 60 ವರ್ಷದ ವಾಲ್ಜ್ ಅವರು ಅಮೆರಿಕದ ರಾಷ್ಟ್ರೀಯ ಸೇನೆಯ ಮಾಜಿ ಯೋಧ, ಶಿಕ್ಷಕರೂ ಆಗಿದ್ದವರು. 2006ರಲ್ಲಿ ಅಮೆರಿಕದ ಹೌಸ್ ಆಫ್ ರೆಪ್ರಸೆಂಟಿಟೀವ್ಸ್‌ಗೆ ಆಯ್ಕೆಯಾದ ಇವರು ಅಲ್ಲಿ 12 ವರ್ಷ ಕೆಲಸ ಮಾಡಿದ ಅನುಭವ ಹೊಂದಿದ್ದಾರೆ. 2018ರಲ್ಲಿ ಮಿನ್ನೆಸೊಟಾದ ಗವರ್ನರ್ ಆಗಿ ಆಯ್ಕೆಯಾಗಿದ್ದಾರೆ. ಜಮೈಕಾ ಹಾಗೂ ಭಾರತ ಮೂಲದ ಕಮಲಾ ಹ್ಯಾರಿಸ್ ಅವರು ಅಧ್ಯಕ್ಷ ಸ್ಥಾನದ ಸ್ಪರ್ಧಿಯಾಗಿದ್ದಾರೆ. ರಿಪಬ್ಲಿಕನ್ ಪಕ್ಷದಿಂದ ಮಾಜಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಸ್ಪರ್ಧಿಸಿದ್ದಾರೆ. ರಿಪಬ್ಲಿಕನ್ ಪಕ್ಷದ ಉಪಾಧ್ಯಕ್ಷ ಸ್ಥಾನಕ್ಕೆ ಜೆ.ಡಿ. ವೇನ್ಸ್ ಸ್ಪರ್ಧಿಸಿದ್ದಾರೆ.



# ಬಾಂಗ್ಲಾ ಮಾಜಿ ಪ್ರಧಾನಿ ಶೇಖ್ ಹಸೀನಾ ಅಮೆರಿಕದ ವೀಸಾ ರದ್ದು!



**ಬಾಂಗ್ಲಾ:** ಬಾಂಗ್ಲಾದೇಶದಿಂದ ಪಲಾಯನಗೊಂಡಿರುವ ಶೇಖ್ ಹಸೀನಾ ಕೆಲಕಾಲ ಇಂಗ್ಲೆಂಡ್ನಲ್ಲಿ ವಾಸ್ತವ್ಯ ಹೂಡಲು ನಿರ್ಧರಿಸಿದ್ದು, ಆದರೆ, ಅಲ್ಲಿಗೆ ತೆರಳಲು ಇನ್ನೂ ಅನುಮತಿ ಸಿಗದ ಹಿನ್ನೆಲೆಯಲ್ಲಿ ಸದ್ಯಕ್ಕೆ ಭಾರತದ ದೆಹಲಿಯಲ್ಲಿ ಸುರಕ್ಷಿತ ಸ್ಥಳದಲ್ಲಿದ್ದಾರೆ.

ಮೂಲಗಳ ಪ್ರಕಾರ ಯುಕೆ (ಇಂಗ್ಲೆಂಡ್) ಶೇಖ್ ಹಸೀನಾ ಅವರಿಗೆ ಆಶ್ರಯ ನೀಡಲು ಸಿದ್ಧವಾಗಿಲ್ಲ. ಹೀಗಾಗಿ, ಶೇಖ್ ಹಸೀನಾ ಅವರ ಪರಿಸ್ಥಿತಿ ಅತಂತ್ರವಾಗಿದೆ. ಇನ್ನೊಂದೆಡೆ ಅಮೆರಿಕಾ ಶೇಖ್ ಹಸೀನಾ ಅವರ ವೀಸಾವನ್ನು ರದ್ದುಗೊಳಿಸುವ ಮೂಲಕ ಶಾಕ್ ನೀಡಿದೆ.

ಸದ್ಯದ ಪರಿಸ್ಥಿತಿಯನ್ನು ನೋಡಿದರೆ ಬಾಂಗ್ಲಾದಿಂದ ಪರಾರಿಯಾಗಿರುವ ಶೇಖ್ ಹಸೀನಾ ಭಾರತದಲ್ಲೇ ಉಳಿಯಬೇಕಾದ ಅನಿವಾರ್ಯತೆ ಎದುರಾಗಬಹುದು. ಅವರಿಗೆ ಭಾರತದಲ್ಲಿ ಆಶ್ರಯ ನೀಡಿರುವ ಬಗ್ಗೆ ಈಗಾಗಲೇ ಮೋದಿ ಸರ್ಕಾರ ರಾಜ್ಯಸಭೆಯಲ್ಲಿ ಘೋಷಿಸಿದೆ. ಈ ಹಿಂದೆ 1975ರಲ್ಲಿ ಕೂಡ ಶೇಖ್ ಹಸೀನಾ ಆಗಿನ ಪ್ರಧಾನಿ ಇಂದಿರಾ ಗಾಂಧಿಯವರಿಂದ ದೆಹಲಿಯಲ್ಲಿ 6 ವರ್ಷಗಳ ಕಾಲ ಆಶ್ರಯ ಪಡೆದಿದ್ದರು.

ಕೆಲವು ಅನಿಶ್ಚಿತತೆಗಳಿಂದ ಶೇಖ್ ಹಸೀನಾ ಅವರ ಪ್ರಯಾಣದ ಯೋಜನೆಗಳು ಬದಲಾಗಿವೆ. ಅವರು ಮುಂದಿನ ಒಂದೆರಡು ದಿನಗಳವರೆಗೆ ಭಾರತದಿಂದ ಹೊರಹೋಗುವ ಸಾಧ್ಯತೆಯಿಲ್ಲ ಎಂದು ಮೂಲಗಳು ತಿಳಿಸಿವೆ.

ಭಾರೀ ಹಿಂಸಾತ್ಮಕ ಪ್ರತಿಭಟನೆಗಳ ನಂತರ ಪ್ರಧಾನಿ ಹುದ್ದೆಯಿಂದ ಕೆಳಗಿಳಿದ ಕೆಲವೇ ಗಂಟೆಗಳಲ್ಲಿ ಶೇಖ್ ಹಸೀನಾ ನಿನ್ನೆ ಸಂಜೆ ತನ್ನ ಸಹೋದರಿ ಶೇಖ್ ರೆಹಾನಾ ಅವರೊಂದಿಗೆ ಭಾರತದ ಹಿಂಡನ್ ವಾಯುನೆಲೆಗೆ ಆಗಮಿಸಿದರು. ಅಲ್ಲಿಂದ ಬಿಗಿ ಭದ್ರತೆಯಲ್ಲಿ ಅವರನ್ನು ರಹಸ್ಯ ಸ್ಥಳಕ್ಕೆ ಸ್ಥಳಾಂತರಿಸಲಾಯಿತು.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಹರಿದಿರುವ ಜೀನ್ಸ್‌ನಲ್ಲಿ ಪ್ರಿಯಾಂಕಾ ಉಪೇಂದ್ರ



ಕನ್ನಡ ಚಿತ್ರರಂಗದಲ್ಲಿ ಮಿಂಚುತ್ತಿರುವ ಬೆಂಗಾಲಿ ಬೆಡಗಿ ಪ್ರಿಯಾಂಕಾ ಉಪೇಂದ್ರ, ಮೋಸ್ಟ್ ಯಂಗ್ ಆಗಿ ಕಾಣಿಸುವ ಸೂಪರ್ ಮಾಮ್ ಎನ್ನಬಹುದು. ಕನ್ನಡ, ತಮಿಳು ಮತ್ತು ಬೆಂಗಾಲಿ ಸಿನಿಮಾಗಳಲ್ಲಿ ನಟಿಸಿರುವ ಈ ಸುಂದರಿ ರಿಯಲ್ ಸ್ಟಾರ್ ಉಪೇಂದ್ರ, ಕೈ ಹಿಡಿದ ಮೇಲೆ ಅಪ್ಪಟ ಕನ್ನಡತಿ ಆಗಿಬಿಟ್ಟರು.

ಪುತ್ರ ಆಯುಷ್ ಮತ್ತು ಪುತ್ರಿ ಐಶ್ವರ್ಯಾಳನ್ನು ಚಿತ್ರರಂಗಕ್ಕೆ ಕರೆ ತರಲು ಸಜ್ಜಾಗಿರುವ ಈ ನಟಿ ಕೈಯಲ್ಲಿ ಸದ್ಯ ಮೂರ್ನಾಲ್ಕು ಸಿನಿಮಾಗಳಿದೆ, ಚಿತ್ರೀಕರಣ ನಡೆಯುತ್ತಿದೆ. ಸೋಷಿಯಲ್ ಮೀಡಿಯಾದಲ್ಲಿ ಆಕ್ಟಿವ್ ಆಗಿರುವ ಪ್ರಿಯಾಂಕಾ ಹೊಸ ಫೋಟೋ ಅಪ್ಲೋಡ್ ಮಾಡಿದ್ದಾರೆ. ಅದಕ್ಕೆ 'ಪ್ಯಾರಡೈಸ್' ಎಂದು ಕ್ಯಾಪ್ಶನ್ ಕೊಟ್ಟಿದ್ದಾರೆ.

ನೀಲಿ ಬಣ್ಣದ ಹರಿದಿರುವ ಜೀನ್ಸ್ (ಟೋರ್ನ್ ಜೀನ್ಸ್)ಗೆ ಕಪ್ಪು ಬಣ್ಣದ ಶರ್ಟ್ ಧರಿಸಿದ್ದಾರೆ. ತಮ್ಮ ಬಣ್ಣದ ಕೂದಲನ್ನು ಕರ್ಲಿಂಗ್ ಮಾಡಿಕೊಂಡಿದ್ದಾರೆ. ಅತ್ತಿಗೆ ನೀವು ಸೀರೆ ಧರಿಸಿ ಅಥವಾ ಸೆಲ್ವಾರ್ ಧರಿಸಿ ಈ ಹರಿದಿರುವ ಜೀನ್ಸ್ ಬೇಡ ಎಂದು ಅಭಿಮಾನಿಗಳು ಕಾಮೆಂಟ್ ಮಾಡಿದ್ದಾರೆ. ನಮ್ಮ ಅತ್ತಿಗೆ ಸೂಪರ್ ಮಾಮ್ ಎಂದು ಇನ್ನೂ ಕೆಲವರು ಕಾಮೆಂಟ್ ಮಾಡಿದ್ದಾರೆ.





# ಮೆಗಾ ಫ್ಯಾಮಿಲಿ ಮೇಲೆ ಗಂಭೀರ ಆರೋಪ, ಸ್ಪಷ್ಟನೆ ಕೊಟ್ಟ ನಾಗಬಾಬು

ತೆಲುಗು ಚಿತ್ರರಂಗದ ಮೇಲೆ ಕುಟುಂಬಗಳ ಹಿಡಿತ ಜೋರಾಗಿದೆ. ನಂದಮೂರಿ ಕುಟುಂಬ, ಮೆಗಾ ಫ್ಯಾಮಿಲಿ, ದಗ್ಗುಬಾಟಿ ಕುಟುಂಬ, ಅಕ್ಕಿನೇನಿ ಕುಟುಂಬಗಳು ತೆಲುಗು ಚಿತ್ರರಂಗದ ಪ್ರಮುಖ ಕುಟುಂಬಗಳು. ತೆಲುಗು ಚಿತ್ರರಂಗದ ಮೇಲೆ ಈ ಕುಟುಂಬಗಳ ಹಿಡಿತ ಜೋರಾಗಿದೆ. ಅದರಲ್ಲೂ ಇತ್ತೀಚೆಗಿನ ವರ್ಷಗಳಲ್ಲಿ ಮೆಗಾ ಫ್ಯಾಮಿಲಿಯ ಕುಟುಂಬದ ಸದಸ್ಯರು ಹೆಚ್ಚು ಸಂಖ್ಯೆಯಲ್ಲಿ ಚಿತ್ರರಂಗದಲ್ಲಿ ತೊಡಗಿಕೊಂಡಿದ್ದಾರೆ. ಸುಮಾರು 10ಕ್ಕೂ ಹೆಚ್ಚು ಮಂದಿ ಹೀರೋಗಳೇ ಇದ್ದಾರೆ. ಆದರೆ ಇತ್ತೀಚೆಗೆ ಮೆಗಾ ಫ್ಯಾಮಿಲಿ ಮೇಲೆ ಕೆಲವರು ಆರೋಪ ಮಾಡಿದ್ದಾರೆ.

ಮೆಗಾ ಫ್ಯಾಮಿಲಿ ತೆಲುಗು ಚಿತ್ರರಂಗವನ್ನು ಹಿಡಿತಕ್ಕೆ ತೆಗೆದುಕೊಳ್ಳಲು ಯತ್ನಿಸುತ್ತಿದೆ. ಇತರೆ ಹೀರೋಗಳು ಮೆಗಾ ಫ್ಯಾಮಿಲಿಯ ಬೆದರಿಕೆಗೆ ಹೆದರಿದ್ದಾರೆ. ಮೆಗಾ ಫ್ಯಾಮಿಲಿಯನ್ನು ಎದುರು ಹಾಕಿಕೊಂಡವರಿಗೆ ಚಿತ್ರರಂಗದಲ್ಲಿ ಅವಕಾಶಗಳು ಸಿಗುತ್ತಿಲ್ಲ ಎಂದೆಲ್ಲ ಸುದ್ದಿಗಳನ್ನು ಹಬ್ಬಿಸಲಾಗುತ್ತಿದೆ. ಮಾಜಿ ಸಚಿವೆ ರೋಜಾ ಬಹಿರಂಗವಾಗಿ ಮೆಗಾ ಫ್ಯಾಮಿಲಿಯನ್ನು ರೌಡಿ ಫ್ಯಾಮಿಲಿ ಎಂದು



ಸಂಭೋಧಿಸಿದ್ದರು. ಮೆಗಾ ಕುಟುಂಬದ ಬಗ್ಗೆ ಚಿತ್ರರಂಗದಲ್ಲಿ ಭಯ ಪ್ರಾರಂಭವಾಗಿದೆ ಎಂದಿದ್ದರು.

ಇದೀಗ ಮೆಗಾ ಕುಟುಂಬದ ಪ್ರಮುಖ ಸದಸ್ಯ, ಚಿರಂಜೀವಿ, ಪವನ್ ಕಲ್ಯಾಣ್ ರ ಸಹೋದರ ನಾಗಬಾಬು ಹೊಸ ಹುಡುಗರ ಸಿನಿಮಾ ಕಾರ್ಯಕ್ರಮವೊಂದರಲ್ಲಿ ಭಾಗವಹಿಸಿದ್ದಾಗ ಈ ವಿಷಯದ ಬಗ್ಗೆ ಮಾತನಾಡಿದ್ದಾರೆ. 'ತೆಲುಗು ಚಿತ್ರರಂಗ ಎಂಬುದು ನನ್ನ ಅಪ್ಪನ, ನನ್ನ ತಾತನ ಅಥವಾ ನಮ್ಮ ಕುಟುಂಬ ಆಸ್ತಿಯಲ್ಲ. ಅಷ್ಟೆ ಅಲ್ಲ, ತೆಲುಗು ಚಿತ್ರರಂಗ ಎಂಬುದು ಮೆಗಾ ಕುಟುಂಬ, ನಂದಮೂರಿ ಕುಟುಂಬ, ದಗ್ಗುಬಾಟಿ, ಅಕ್ಕಿನೇನಿ ಕುಟುಂಬದ ಆಸ್ತಿಯಲ್ಲ. ಕಷ್ಟ ಪಟ್ಟು ಕೆಲಸ ಮಾಡುವ ಎಲ್ಲರ ಆಸ್ತಿ' ಎಂದಿದ್ದಾರೆ.

ಮೆಗಾ ಫ್ಯಾಮಿಲಿಯ, ಚಿರಂಜೀವಿ, ಪವನ್ ಕಲ್ಯಾಣ್, ರಾಮ್ ಚರಣ್ ತೇಜ, ಅಲ್ಲು ಅರ್ಜುನ್, ಅಲ್ಲು ಸಿರೀಶ್, ನಾಗಬಾಬು, ಸಾಯಿ ಧರಮ್ ತೇಜ್, ವರುಣ್ ತೇಜ್, ವೈಷ್ಣವ್ ತೇಜ್, ಪವನ್ ತೇಜ್, ಕಲ್ಯಾಣ್ ದೇವ್ ನಾಯಕರಾಗಿ ನಟಿಸುತ್ತಿದ್ದಾರೆ. ಇನ್ನ ನಿಹಾರಿಕಾ ಕೊನಿಡೇಲ ನಾಯಕಿಯಾಗಿ ನಿರ್ಮಾಪಕಿಯಾಗಿ ನಟಿಸುತ್ತಿದ್ದಾರೆ. ಇನ್ನು ಕೆಲ ವರ್ಷಗಳಲ್ಲಿ ಪವನ್ ಕಲ್ಯಾಣ್ ಪುತ್ರ ಅಕಿರಾ ನಂದಾ ಸಹ ನಾಯಕನಾಗುವ ಸಾಧ್ಯತೆ ಇದೆ. ಒಟ್ಟಿನಲ್ಲಿ ಮೆಗಾ ಫ್ಯಾಮಿಲಿಯಿಂದಲೇ ಟಾಲಿವುಡ್ ಗೆ ಸುಮಾರು 1000 ಕೋಟಿ ಬ್ಯುಸಿನೆಸ್ ಆಗುತ್ತದೆ ಪ್ರತಿ ವರ್ಷ. ಆದರೆ ಮೆಗಾ ಫ್ಯಾಮಿಲಿ ಸದಸ್ಯರು ಯಾವುದೇ ವಿವಾದಗಳಲ್ಲಿ ತೊಡಗಿಕೊಳ್ಳದೆ ತಾವಾಯಿತು ತಮ್ಮ ಕೆಲಸವಾಯ್ತು ಎಂದು ಆರಾಮವಾಗಿದ್ದಾರೆ.

# ಬೋಲ್ಡ್ ಫೋಟೋ ಹಂಚಿಕೊಂಡು ಕಿರುತೆರೆ ನಟಿ ಶಮಾ ಸಿಕಂದರ್

ಅನೇಕ ಟಿವಿ ಕಾರ್ಯಕ್ರಮಗಳಲ್ಲಿ ಅಥವಾ ಧಾರಾವಾಹಿಗಳಲ್ಲಿ ನೀವು ಶಮಾ ಸಿಕಂದರ್ ನಟಿಯನ್ನ ನೋಡಿಯೇ ಇರುತ್ತೀರಿ. ಅಭಿಮಾನಿಗಳು ಅವಳ ಚಿತ್ರಗಳನ್ನು ಮುಗಿಬಿದ್ದು ನೋಡುತ್ತಾರೆ. ಅತ್ಯಂತ ಬೋಲ್ಡ್ ಆಗಿ ಕಾಣಿಸಿಕೊಳ್ಳುವುದರಿಂದ ಅಭಿಮಾನಿಗಳ ಸಂಖ್ಯೆ ಹೆಚ್ಚಾಗಿದೆ.

ಶಮಾ ಅವರ ಪೂರ್ಣ ಹೆಸರು ಶಮಾ ಸಿಕಂದರ್ ಅಲಿ ಗೆಸಾವತ್. ಮೂಲತಃ ರಾಜಸ್ಥಾನದವರು ಮೊನ್ನೆಯಷ್ಟೇ ಹುಟ್ಟು ಹಬ್ಬ ಆಚರಿಸಿಕೊಂಡಳು. ರಾಜಸ್ಥಾನದ ಮಕ್ರಾನಾ ನಗರದಲ್ಲಿ ಆ.4, 1981 ರಲ್ಲಿ ಜನಸಿದ ಶಮಾ ಶಮಾ 9 ನೇ ವಯಸ್ಸಿನಲ್ಲಿ, ಅವರ ಕುಟುಂಬ ಜೊತೆ ಮುಂಬೈಗೆ ಸ್ಥಳಾಂತರಗೊಂಡರು. ಬಳಿಕ ಮುಂಬೈನಲ್ಲಿ ನಟನಾ ವೃತ್ತಿಜೀವನ ಆರಂಭಿಸಿದಳು.. 2022ರಲ್ಲಿ ವಿದೇಶಿ ಪ್ರಜೆ ಜೇಮ್ಸ್ ಮಿಲಿರಾನ್ ಎಂಬಾತನೊಂದಿಗೆ ವಿವಾಹವಾದಳು.

ಶಮಾ ಸಿಕಂದರ್‌ಗೆ ಈಗ 42 ವರ್ಷ ವಯಸ್ಸು ಎಂದರೆ ಯಾರೂ ನಂಬಲಿಕ್ಕಿಲ್ಲ. ಹೌದು, 42 ವರ್ಷದವಳಾಗಿದ್ದರು. 18ರ ಹುಡುಗಿಯಂತಹ ಚೆಲುವು ಅವಳದ್ದು. ಸೋಷಿಯಲ್ ಮೀಡಿಯಾದಲ್ಲಿ ಅವಳು ಹಂಚಿಕೊಳ್ಳುವ ಫೋಟೊಗಳನ್ನ ನೋಡಿದಾಗ ವಯಸ್ಸನ್ನು ಊಹಿಸಲು ಆಗದು.

ಶಮಾ ಸಿಕಂದರ್ ಆಗಾಗ ಗ್ಲಾಮರಸ್ ಫೋಟೊಶೂಟ ಮಾಡುತ್ತಾರೆ. ಆಕೆಯ ಇನ್‌ಸ್ಟಾಗ್ರಾಮ್‌ನಲ್ಲಿ ನೂರಾರು ಬಿಕಿನಿ ಫೋಟೊಗಳಿವೆ. ಅವಳ ವಿಭಿನ್ನ ರೀತಿಯ ಡ್ರೆಸ್, ಮೈಮಾಟಕ್ಕಾಗಿ ಫಾಲೋವರ್ಸ್‌ಗಳು ಮುಗಿಬಿದ್ದು ನೋಡುತ್ತಾರೆ.

ದೇಹಸಿರಿ ಪ್ರದರ್ಶನದ ಮೂಲಕವೇ ಅಭಿಮಾನಿಗಳನ್ನು ಸೆಳೆಯುತ್ತಾಳೆ ಈ ಚೆಲುವೆ. ಇಲ್ಲಿನ ಹಲವು ಚಿತ್ರಗಳಲ್ಲಿ ದೇಹ ಪ್ರದರ್ಶಿಸುತ್ತಿರುವುದನ್ನ ಕಾಣಬಹುದುದ. ನಟನೆಯ ವೇಳೆ ಹಲವು ಚಿತ್ರಗಳಲ್ಲಿನ ಶಮಾ ಅವರ ಭಂಗಿಯು ಸಾಕಷ್ಟು ಹಸಿಬಿಸಿಯಾಗಿದೆ. 42 ರ ವಯಸ್ಸಿನಲ್ಲೂ ಇಂತಹ ಬೋಲ್ಡ್ ಲುಕ್ ತೋರಿಸಿಯೇ ನಾನಿನ್ನು ಫಿಟ್ ಅಂತಾ ಹೇಳ್ತಾರೆ.

ಶಮಾ ಟಿವಿ ಕಾರ್ಯಕ್ರಮಗಳೊಂದಿಗೆ ಸಿನಿಮಾಗಳಲ್ಲೂ ನಟಿಸಿದ್ದಾರೆ.'ಮನ್', 'ಪ್ರೇಮ್ ಆಗನ್', 'ಕುಸ್ತಿ', 'ಪರದೇಸಿ ಬಾಬು', 'ಶಹೀದ್-ಎ-ಆಜಮ್', 'ಯೇ ಮೊಹಬ್ಬತ್ ಹೈ' ಮುಂತಾದ ಹಿಂದಿ ಚಿತ್ರಗಳನ್ನು ಮಾಡಿದ್ದಾರೆ.



# ಮೊದಲ ಎಸೆತದಲ್ಲೇ ನೀರಜ್ ಚೋಪ್ರಾ, ಫೈನಲ್‌ಗೆ ಜಂಪ್

ಭಾರತದ ಚಿನ್ನ ಹುಡುಗ ನೀರಜ್ ಚೋಪ್ರಾ, ಮೊದಲ ಪ್ರಯತ್ನದಲ್ಲೇ ಪುರುಷರ ಜಾವೆಲಿನ್‌ನಲ್ಲಿ ಫೈನಲ್‌ಗೆ ಅರ್ಹತೆ ಪಡೆದುಕೊಂಡಿದ್ದಾರೆ. 89.34 ಮೀಟರ್ ದೂರ ಎಸೆಯುವ ಮೂಲಕ ಬಂಗಾರದ ಭರವಸೆ ಮೂಡಿಸಿದ್ದಾರೆ. 89.34 ಮೀಟರ್ ದೂರ ಎಸೆತ ಇದು ಜಾಗತಿಕ ಚಾಂಪಿಯನ್‌ಶಿಪ್‌ನಲ್ಲಿ ಚೋಪ್ರಾ ಅವರ ಅತ್ಯುತ್ತಮ ಎಸೆತ ಎಂದು ಹೇಳಲಾಗಿದೆ. ಈ ಹಿಂದೆ ಅವರು 89.94 ಮೀ ಎಸೆತ ಮೂಲಕ ಇತಿಹಾಸ ಸೃಷ್ಟಿಸಿದರು. ಚೋಪ್ರಾ, ಅವರು ವೈಯಕ್ತಿಕ ಒಲಿಂಪಿಕ್ ಸ್ಪರ್ಧೆಯಲ್ಲಿ ಎರಡು ಚಿನ್ನದ ಪದಕಗಳನ್ನು ಗೆಲ್ಲುವ ಮೂಲಕ ಭಾರತದ ಜಾವೆಲಿನ್‌ನಲ್ಲೂ ಹಾಗೂ ಒಲಿಂಪಿಕ್ ಹೊಸ ಅಧ್ಯಾಯವನ್ನು ಸೃಷ್ಟಿಸಿದರು. ಇನ್ನು ಅಂತಿಮ ಪಂದ್ಯ ಆಗಸ್ಟ್ 8 ರಂದು ನಡೆಯುವ ಸಾಧ್ಯತೆ ಇದೆ.

ಈ ವರ್ಷ ಕೇವಲ ಮೂರು ಈವೆಂಟ್‌ಗಳಲ್ಲಿ ಭಾಗವಹಿಸಿದ್ದರೂ, ವಿಶ್ವ ಚಾಂಪಿಯನ್‌ನಲ್ಲಿ ಗಮನಾರ್ಹ ಸಾಧನೆ ಮಾಡಿದ್ದಾರೆ. ಈಗಾಗಲೇ ನೀರಜ್ ಚೋಪ್ರಾ, ಅವರು ವಿಶ್ವ ಮಟ್ಟದಲ್ಲಿ ಭಾರಿ ಪೈಪೋಟಿಯನ್ನು ನೀಡುತ್ತಾರೆ. 88.36 ಮೀಟರ್ ಎಸೆದ ಚೋಪ್ರಾ, ಮೇನಲ್ಲಿ ನಡೆದ ದೋಹಾ ಡೈಮಂಡ್ ಲೀಗ್‌ನಲ್ಲಿ ಎರಡನೇ ಸ್ಥಾನವನ್ನು ಗಳಿಸಿದರು. ಇದು ಕೂಡ ಅವರ ಉತ್ತಮ ಸಾಧನೆ ಆಗಿತ್ತು. ನಂತರ ಆಡ್ಕ್ಟರ್ ಸಮಸ್ಯೆಯಿಂದ ಮೇ 28 ರಂದು ಆಸ್ಟ್ರಾವಾ ಗೋಲ್ಡನ್ ಸ್ಪೈಕ್ ಈವೆಂಟ್‌ನಿಂದ ಹಿಂದೆ ಸರಿದರು. ಜೂನ್ 18 ರಂದು ಫಿನ್‌ಲ್ಯಾಂಡ್ ನಲ್ಲಿ ನಡೆದ ಪಾವೊ ನೂರ್ಮಿ ಗೇಮ್ಸ್‌ನಲ್ಲಿ 85.97 ಮೀಟರ್‌ಗಳ ಎಸೆಯುವ ಮೂಲಕ ಮತ್ತೊಂದು ಮಹತ್ವದ ಸಾಧನೆಯನ್ನು ಮಾಡಿದರು.




ಟೋಕಿಯೊ ಒಲಿಂಪಿಕ್ಸ್‌ನಲ್ಲಿ ಚಿನ್ನ ಗೆದ್ದ ನಂತರ, ಚೋಪ್ರಾ, ಅವರು 15 ಸ್ಪರ್ಧೆಗಳಲ್ಲಿ ಎರಡು ಬಾರಿ 85 ಮೀಟರ್‌ಗಿಂತ ಕಡಿಮೆ ಎಸೆತ ಎಂದು ಹೇಳಬಹುದು. ಚೋಪ್ರಾ, ಅವರ ಪ್ರಮುಖ ಸ್ಪರ್ಧಿಗಳೆಂದರೆ ಜರ್ಮನಿಯ ಜೂಲಿಯನ್ ವೆಬರ್, ವಿಶ್ವ ಚಾಂಪಿಯನ್ ಆಂಡರ್ಸನ್ ಪೀಟರ್ಸ್ ಮತ್ತು ಜೆಕ್ ಎಸೆತಗಾರ ಜಾಕುಬ್ ವಡ್ಲೆಜ್. ವಡ್ಲೆಜ್ ಟೋಕಿಯೊ ಒಲಿಂಪಿಕ್ಸ್‌ನಲ್ಲಿ ಬೆಳ್ಳಿ ಗೆದ್ದರು ಮತ್ತು ದೋಹಾ ಡೈಮಂಡ್ ಲೀಗ್‌ನಲ್ಲಿ ಚೋಪ್ರಾ, ಸೋತರು. ಒಲಿಂಪಿಕ್ಸ್‌ನಲ್ಲಿ ವೈಯಕ್ತಿಕ ಸ್ಪರ್ಧೆಯಲ್ಲಿ ಎರಡು ಚಿನ್ನದ ಪದಕಗಳನ್ನು ಗೆದ್ದ ಮೊದಲ ಭಾರತೀಯ. ಇದೀಗ ಎರಿಕ್ ಲೆಮ್ಮಿಂಗ್, ಜೊನ್ನಿ ಮೈರಾ, ಜಾನ್ ಝೆಲೆಜ್ನಿ ಮತ್ತು ಆಂಡ್ರಿಯಾಸ್ ಥೋರ್ಕಿಲ್ಡ್‌ಸೆನ್ ಸಾಲಿಗೆ ನೀರಜ್ ಚೋಪ್ರಾ, ಸೇರಿದ್ದಾರೆ. ಇದು ಭಾರತ ಕ್ರೀಡಾ ಕ್ಷೇತ್ರದಲ್ಲಿ ಮಹತ್ವದ ಸಾಧನೆಯಾಗಿದೆ.

### ದಂಗಲ್ ಸಿನಿಮಾ ನೆನಪಿಸಿದ ವಿನೇಶ್ ಫೋಗಾಟ್

# ವಿಶ್ವ ಚಾಂಪಿಯನ್‌ಗೆ ಸೋಲುಣಿಸಿದ ಭಾರತೀಯ ಕಲಿ

ತೀವ್ರ ಕುತೂಹಲ ಮೂಡಿಸಿದ ಮಹಿಳೆಯರ 50 ಕೆ.ಜಿ ಫ್ರೀಸ್ಟೈಲ್ ಕುಸ್ತಿ ಪಂದ್ಯದಲ್ಲಿ ಟೋಕಿಯೋ ಒಲಿಂಪಿಕ್ ಚಾಂಪಿಯನ್ ಜಪಾನಿನ ಯ್ಯೂ ಸುಸುಕಿ ಎದುರು ಭರ್ಜರಿ ಜಯ ಸಾಧಿಸಿದ ವಿನೇಶ್ ಫೋಗಾಟ್ ಕ್ವಾರ್ಟರ್ ಫೈನಲ್‌ಗೆ ಲಗ್ಗೆಯಿಟ್ಟಿದ್ದಾರೆ. ಅಕ್ಷರಶಃ ದಂಗಲ್ ಸಿನಿಮಾದ ಕ್ಲೈಮ್ಯಾಕ್ಸ್‌ನಂತಿದ್ದ ರೋಚಕ ಕಾದಾಟದಲ್ಲಿ ಕೊನೆಯ ಕ್ಷಣದಲ್ಲಿ ತಂತ್ರಗಾರಿಗೆ ಮೆರೆದ ವಿನೇಶ್, ವಿಶ್ವ ನಂ.1 ಕುಸ್ತಿಪಟುವಿಗೆ ಶಾಕ್ ನೀಡುವ ಮೂಲಕ ಪವಾಡಸದೃಶ ರೀತಿಯಲ್ಲಿ ಕ್ವಾರ್ಟರ್ ಫೈನಲ್ ಪ್ರವೇಶಿಸಿದ್ದಾರೆ.

ಆರಂಭದಿಂದಲೇ ಜಪಾನಿನ ಯ್ಯೂ ಸುಸುಕಿ ಸಾಕಷ್ಟು ರಕ್ಷಣಾತ್ಮಕ ಆಟದ ಮೂಲಕ ವಿನೇಶ್ ಗೆ ಅಂಕ ಗಳಿಸಲು ಅವಕಾಶ ಮಾಡಿಕೊಡಲಿಲ್ಲ. ಬಹುತೇಕ ಪಂದ್ಯ ಮುಕ್ತಾಯದ ಹಂತದ ವೇಳೆಗೆ ಜಪಾನಿನ ಯ್ಯೂ ಸುಸುಕಿ 2-0 ಅಂಕಗಳ ಮುನ್ನಡೆ ಸಾಧಿಸಿದ್ದರು. ಆದರೆ ಕೊನೆಯ 15 ಸೆಕೆಂಡ್‌ಗಳು ಬಾಕಿ ಇದ್ದಾಗ ತಮ್ಮ ಅನುಭವವನ್ನು ಚೆನ್ನಾಗಿಯೇ ಬಳಸಿಕೊಂಡ ವಿನೇಶ್, ಹಾಲಿ ಚಾಂಪಿಯನ್ ಆಟಗಾರ್ತಿಗೆ ಮೊದಲ ಸುತ್ತಿನಲ್ಲೇ ಶಾಕ್ ನೀಡುವಲ್ಲಿ ಯಶಸ್ವಿಯಾದರು.



ವಿನೇಶ್ ಫೋಗಾಟ್ ಕಳೆದ ವರ್ಷ ಪೂರ್ತಿ, ಭಾರತೀಯ ಕುಸ್ತಿ ಫೆಡರೇಷನ್ ಅಧ್ಯಕ್ಷರಾಗಿದ್ದ ಬ್ರಿಜ್‌ಭೂಷಣ್ ಸಿಂಗ್ ವಿರುದ್ಧ ಪ್ರತಿಭಟನೆಯ ಮುಂಚೂಣಿ ವಹಿಸಿದ್ದರು. ಇದರ ಹೊರತಾಗಿ ವಿನೇಶ್‌ಗೆ ಮೊದಲ ಸುತ್ತಿನಲ್ಲೇ 4 ಬಾರಿಯ ವಿಶ್ವ ಚಾಂಪಿಯನ್ ಆಗಿರುವ ಜಪಾನ್ ಆಟಗಾರ್ತಿಯ ಸವಾಲು ಎದುರಾಗಿತ್ತು. ಆದರೆ ಗೆಲ್ಲಲೇಬೇಕು ಎನ್ನುವ ಛಲದೊಂದಿಗೆ ಪ್ಯಾರಿಸ್ ಒಲಿಂಪಿಕ್ಸ್‌ಗೆ ಬಂದಿಳಿದಿರುವ ವಿನೇಶ್ ಫೋಗಾಟ್, ಎಲ್ಲಾ ಸವಾಲು ಮೆಟ್ಟಿನಿಂತು ಕ್ವಾರ್ಟರ್ ಫೈನಲ್ ಪ್ರವೇಶಿಸುವಲ್ಲಿ ಯಶಸ್ವಿಯಾಗಿದ್ದಾರೆ.

# ಸಿಎಂ ಸಿದ್ದರಾಮಯ್ಯಗೆ ರಾಜಭವನದಿಂದ ಮೂರನೇ ನೋಟೀಸ್ ಜಾರಿ!

**ಬೆಂಗಳೂರು:** ಬಹುಕೋಟಿ ಮುಡಾ ಹಗರಣ ಸಂಬಂಧಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮೂರನೇ ನೋಟೀಸ್ ಅನ್ನು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಜಾರಿ ಮಾಡಿದ್ದಾರೆ.

ಮೊದಲ ನೋಟೀಸ್ ಅನ್ನು ಜುಲೈ ಮೂರನೇ ವಾರದಲ್ಲಿ ಜಾರಿ ಮಾಡಿದ್ದ ರಾಜ್ಯಪಾಲರು, ಬಂದು ಮಾಹಿತಿ ಕೊಡುವಂತೆ ಸೂಚಿಸಿದ್ದರು. ಮಾಧ್ಯಮಗಳಲ್ಲಿ ಹಾಗೂ ಸಾರ್ವಜನಿಕವಾಗಿ ಚರ್ಚೆ ಆಗುತ್ತಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಹಿತಿ ಕೊಡುವಂತೆ ಸೂಚಿಸಿದ್ದರು.

ಜುಲೈ 26ನೇ ತಾರೀಕು ಸಾಮಾಜಿಕ ಕಾರ್ಯಕರ್ತ ಟಿ.ಜೆ ಅಬ್ರಹಾಂ ನೀಡಿದ ದೂರು ಆಧರಿಸಿ ಎರಡನೇ ನೋಟೀಸ್ ಕಳಿಸಲಾಗಿತ್ತು. ಅಬ್ರಹಾಂ ಸಲ್ಲಿಸಿದ್ದ ದೂರಿನಲ್ಲಿ, ಈ ಪ್ರಕರಣವನ್ನು ಪ್ರಾಸಿಕ್ಯೂಶನ್ ಗೆ ಯಾಕೆ ಕೊಡಬಾರದು ಎಂದು ರಾಜ್ಯಪಾಲ ಥಾವರ್ ಚಂದ್ ಗೆಲ್ಹೋಟ್ ಶೋಕಾಸ್ ನೋಟೀಸ್ ನೀಡಿದ್ದರು.

ಆಗಸ್ಟ್ 5ನೇ ತಾರೀಕು ರಾಜ್ಯಪಾಲರು ಮೂರನೇ ನೋಟೀಸ್ ಜಾರಿ ಮಾಡಿದ್ದಾರೆ. ಕಳೆದ ವಾರ ಕ್ಯಾಬಿನೆಟ್ ಸಭೆಯಲ್ಲಿ ರಾಜ್ಯಪಾಲರ ನಡೆಯನ್ನು ಪ್ರಶ್ನಿಸಿದ್ದ ಸಂಪುಟ, ನೋಟೀಸ್ ಹಿಂಪಡೆಯುವಂತೆ ಹೇಳಿತ್ತು. ಹೀಗಾಗಿ ಮತ್ತೆ ಕೇಸ್‌ನಲ್ಲಿ ಕ್ಲಾರಿಫಿಕೇಷನ್ ಕೊಡುವಂತೆ ನೋಟೀಸ್ ಜಾರಿ ಮಾಡಲಾಗಿದೆ.




**ರಾಜ್ಯಪಾಲರು ಪದೇ ಪದೆ ನೋಟೀಸ್ ಕೊಡುತ್ತಿರುವುದೇಕೆ?:** ಈ ಹಿಂದಿನ ಮುಖ್ಯಮಂತ್ರಿ ಬಿಎಸ್ ಯಡಿಯೂರಪ್ಪ ಪ್ರಕರಣದಲ್ಲಿ ಆದುದೇ ರಾಜ್ಯಪಾಲರ ಈಗಿನ ನಡೆಗೆ ಕಾರಣ ಎನ್ನಲಾಗಿದೆ. ಅಂದಿನ ರಾಜ್ಯಪಾಲ ಹಂಸರಾಜ್ ಭಾರದ್ವಾಜ್ ಆದೇಶವನ್ನು ಯಡಿಯೂರಪ್ಪ ಪ್ರಶ್ನೆ ಮಾಡಿದ್ದರು. ರಾಜ್ಯಪಾಲರು ಅನುಮತಿ ಕೊಡುವಾಗ ಆರೋಪದ ಬಗ್ಗೆ ಮುಖ್ಯಮಂತ್ರಿಗಳಿಂದ ಮಾಹಿತಿ ಪಡೆಯುವ ಪ್ರಕ್ರಿಯೆಯನ್ನು ಸರಿಯಾಗಿ ನಡೆಸಿಲ್ಲ. ಆತುರಾತುರವಾಗಿ ನಿರ್ಧಾರ ಮಾಡಿ ನೋಟೀಸ್ ಕೊಟ್ಟಿದ್ದಾರೆ. ರಾಜ್ಯ ಸರ್ಕಾರವನ್ನು ಅಭದ್ರ ಮಾಡುವ ಕೆಲಸಕ್ಕೆ ಕೈ ಹಾಕಿದ್ದಾರೆ ಎಂದು ಆರೋಪಿಸಿದ್ದರು.

ಆಗ ಕೇಂದ್ರದಲ್ಲಿ ಯುಪಿಎ ಸರ್ಕಾರ ಇತ್ತು. ಹೀಗಾಗಿ ಪೊಲಿಟಿಕಲ್ ಮೈಲೇಜ್ ಪಡೆಯಲು ಈ ನಿರ್ಧಾರ ಮಾಡಿದ್ದರು ಎಂದು ಯಡಿಯೂರಪ್ಪ ವಾದ ಮಾಡಿದ್ದರು. ಯಡಿಯೂರಪ್ಪ ವಾದವನ್ನು ಹೈಕೋರ್ಟ್ ಒಪ್ಪಿತ್ತು. ಜನಪ್ರತಿನಿಧಿಗಳ ಸರ್ಕಾರದ ನೇತೃತ್ವ ವಹಿಸಿರುವವರ ವಿರುದ್ಧ ಪ್ರಾಸಿಕ್ಯೂಶನ್ ಗೆ ಕೊಡುವಾಗ ಮೂರು ಬಾರಿ ನೋಟೀಸ್ ಹಾಗೂ ಮೂರು ಬಾರಿ ಲೀಗಲ್ ಓಪಿನಿಯನ್ ಪಡೆದು ಮುಂದುವರಿಯಬೇಕು ಎಂದು ಹೈಕೋರ್ಟ್ ಆದೇಶ ಮಾಡಿತ್ತು. ನಂತರ ಯಡಿಯೂರಪ್ಪ ಈ ಪ್ರಕರಣದಲ್ಲಿ ಜೈಲಿಗೆ ಹೋಗಿದ್ದರು.

ಹೀಗಾಗಿ ಈ ಪ್ರಕರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮೇಲೆ ಆರೋಪ ಕೇಳಿ ಬಂದಿರುವುದರಿಂದ, ಕಾನೂನು ಪ್ರಕ್ರಿಯೆ ಮಾಡುವಾಗ ಯಾವುದೇ ಲೋಪ ಆಗದಂತೆ ರಾಜ್ಯಪಾಲರು ಪದೇ ಪದೆ ನೋಟೀಸ್ ನೀಡುತ್ತಿದ್ದಾರೆ. ನಿನ್ನೆ ದೆಹಲಿಯಿಂದ ರಾಜ್ಯಕ್ಕೆ ಮರಳಿರುವ ರಾಜ್ಯಪಾಲರು ಲೀಗಲ್ ಪ್ರಕ್ರಿಯೆ ಚುರುಕುಗೊಳಿಸಿದ್ದಾರೆ. ಇದಕ್ಕೆ ಕ್ಯಾಬಿನೆಟ್ ಹಾಗೂ ಮುಖ್ಯಮಂತ್ರಿಗಳ ಕಡೆಯಿಂದ ಪ್ರತಿಕ್ರಿಯೆ ಹೇಗಿರಲಿದೆ ಎಂಬುದು ಕುತೂಹಲ ಮೂಡಿಸಿದೆ. ಕಳೆದ ವಾರವಿಡೀ ಮುಖ್ಯಮಂತ್ರಿಗಳು ಕಾನೂನು ತಜ್ಞರು, ವಕೀಲರ ಜೊತೆಗೆ ಈ ವಿಚಾರವನ್ನು ಚರ್ಚಿಸಿದ್ದರು. ರಾಜ್ಯಪಾಲರ ನಡೆಯನ್ನು ಪ್ರಶ್ನಿಸಿ ಸಿಎಂ ಹೈಕೋರ್ಟ್‌ಗೆ ತೆರಳುವ ಸಾಧ್ಯತೆ ಇದೆ.

# ಶಾಸಕರನ್ನೆಲ್ಲ ತೋಳಗಳಂತೆ ಹಣ ಕೀಳಲು ಬಿಟ್ಟಿದ್ದಾರೆ

**ಚಿತ್ರದುರ್ಗ:** ರಾಜ್ಯ ಸರ್ಕಾರ ರಕ್ಷಣೆ ಮಾಡುವವರನ್ನೇ ಭಕ್ಷಕರನ್ನಾಗಿ ಮಾಡಿದೆ ಎಂದು ನಿವೃತ್ತ ಪೊಲೀಸ್ ಅಧಿಕಾರಿ ಭಾಸ್ಕರ್ ರಾವ್ ಆರೋಪಿಸಿದ್ದಾರೆ. ಚಿತ್ರದುರ್ಗದಲ್ಲಿ ಮಾತನಾಡಿದ ಅವರು, ಪೊಲೀಸರನ್ನೇ ಈ ಸರ್ಕಾರ ಭಕ್ಷಕರನ್ನಾಗಿ ಮಾಡಿದೆ. ಲಕ್ಷಾಂತರ ರೂ. ಕೊಡುವವರೆಗೆ ಪೋಸ್ಟಿಂಗ್ ಕೊಡುವುದಿಲ್ಲ. ಸಮವಸ್ತ್ರಧಾರಿಗಳು ಭಕ್ಷಕರು ಮಾತ್ರವಲ್ಲ ಭಿಕಾರಿಗಳಾಗಿದ್ದಾರೆ. ಇದು ನೇರವಾಗಿ ಜನರ ಮೇಲೆ ಪರಿಣಾಮ ಬೀರುತ್ತಿದೆ ಎಂದರು.

ಬೇರೆ ಇಲಾಖೆಗಳಲ್ಲಿ ಗುತ್ತಿಗೆ, ಟೆಂಡರ್, ಪರ್ಸಂಟೇಜ್ ನಡೆಯುತ್ತದೆ. ಆದರೆ, ಪೊಲೀಸರು ಜನಸಾಮಾನ್ಯರಿಂದ ವಸೂಲಿ ಮಾಡಬೇಕಾಗುತ್ತದೆ. ಲೂಟಿ ಹೊಡೆಯಿರಿ ಎಂದು ಸರ್ಕಾರವೇ ಒತ್ತಡ ಹೇರುತ್ತಿದೆ. ಇದರಿಂದಾಗಿ ಪೊಲೀಸ್ ಇಲಾಖೆ ಸಂಪೂರ್ಣ ದುರ್ಬಲವಾಗುತ್ತಿದೆ. ಪೊಲೀಸರಿಗೇ ರಕ್ಷಣೆ ಕೊಡಬೇಕಾದ ಸ್ಥಿತಿ ನಿರ್ಮಾಣ ಆಗಿದೆ ಎಂದು ಅವರು ಹೇಳಿದರು.



ಪಿಎಸ್‌ಐ ಪರಶುರಾಮ್ ಆತ್ಮಹತ್ಯೆ ವಿಚಾರವಾಗಿ ಪ್ರತಿಕ್ರಿಯಿಸಿದ ಅವರು, ಪ್ರಾಮಣಿಕತೆ ಇರುವುದರಿಂದಲೇ ಪರಶುರಾಮ್ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಹೇಳಿದರು.

### 'ಮುಖ್ಯಮಂತ್ರಿಗಳ ವರೆಗೆ ಹಣ ಕೊಡಬೇಕು'

ಬೆಂಗಳೂರಲ್ಲಿ ಪೊಲೀಸ್ ಠಾಣೆಗೆ ಪೋಸ್ಟಿಂಗ್ ಪಡೆಯಲು ಕೋಟಿಗಟ್ಟಲೆ ರೂಪಾಯಿ ಹಣ ಕೊಡಬೇಕು. ಜಿಲ್ಲೆಗಳಲ್ಲಿ ಲಕ್ಷಾಂತರ ರೂಪಾಯಿ ಹಣ ಕೊಡಬೇಕಿದೆ. ಜನಪ್ರತಿನಿಧಿಗಳು, ಗೃಹ ಸಚಿವರು, ಮುಖ್ಯಮಂತ್ರಿಗೆ ಹಣ ಕೊಡಬೇಕು. ಪ್ರಬಲ ಮುಖ್ಯಮಂತ್ರಿ ಇದ್ದರೆ ಈ ರೀತಿ ಆಗುವುದಿಲ್ಲ. ದುರ್ಬಲ ಮುಖ್ಯಮಂತ್ರಿ ಇದ್ದಾಗ ಹೀಗೆಲ್ಲ ಆಗುತ್ತದೆ. ಶಾಸಕರಿಗೆಲ್ಲ ತೋಳಗಳಂತೆ ಹಣ ಕೀಳಲು ಬಿಟ್ಟಿದ್ದಾರೆ ಎಂದು ಭಾಸ್ಕರ್ ರಾವ್ ಆರೋಪಿಸಿದ್ದಾರೆ.

ಯಾದಗಿರಿ ಪಿಎಸ್‌ಐ ಪರಶುರಾಮ್ ನಿಗೂಢವಾಗಿ ಸಾವನ್ನಪ್ಪಿರುವ ಪ್ರಕರಣ ಕರ್ನಾಟಕದಾದ್ಯಂತ ಭಾರಿ ಚರ್ಚೆಗೆ ಗ್ರಾಸವಾಗಿದೆ. ಪ್ರಕರಣ ರಾಜಕೀಯ ಆಯಾಮವನ್ನೂ ಪಡೆದುಕೊಂಡಿದೆ. ಲಂಚಕ್ಕಾಗಿ ಶಾಸಕ ಚೆನ್ನಾರೆಡ್ಡಿ ಮತ್ತು ಅವರ ಪುತ್ರ ಕಿರುಕುಳ ಕೊಟ್ಟಿದ್ದರಿಂದಲೇ ಪರಶುರಾಮ್ ಸಾವಿಗೀಡಾಗಿದ್ದಾರೆ ಎಂದು ಅವರ ಪತ್ನಿ ಆರೋಪಿಸಿದ್ದಾರೆ. ಈ ಎಲ್ಲ ಬೆಳವಣಿಗೆಗಳ ಬೆನ್ನಲ್ಲೇ, ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಕೇಂದ್ರ, ಗೃಹ ಸಚಿವ ಅಮಿತ್ ಶಾಗೆ ಪತ್ರ ಬರೆದಿದ್ದು, ಪ್ರಕರಣದ ತನಿಖೆಯನ್ನು ಸಿಬಿಐಗೆ ನೀಡುವಂತೆ ಒತ್ತಾಯಿಸಿದ್ದಾರೆ. ಸದ್ಯ ಸಿಐಡಿ ತನಿಖೆ ಪ್ರಗತಿಯಲ್ಲಿದೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com